ಸಂಪುಟ: 05 ಸಂಚಿಕೆ: 111 ಪುಟಗಳು: 08 ಶುಕ್ರವಾರ 04 ಜುಲೈ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

**ಮುಂಜಾನೆ ಮಾತು**

ನಮ್ಮ ಸ್ವಾತಂತ್ರ್ಯವನ್ನು ನಮ್ಮ ರಕ್ತದಿಂದ ಪಡೆಯುವುದು ನಮ್ಮ ಕರ್ತವ್ಯ. ನಮ್ಮ ತ್ಯಾಗ ಮತ್ತು ಪರಿಶ್ರಮದಿಂದ ನಾವು ಸಂಪಾದಿಸಿದ ಸ್ವಾತಂತ್ರ್ಯವನ್ನು ನಾವು ನಮ್ಮ ಸ್ವಂತ ಶಕ್ತಿಯಿಂದ ಉಳಿಸಿಕೊಳ್ಳಲು ಸಾಧ್ಯವಾಗುತ್ತದೆ.

# ಉದಯ ವಾಹಿನಿ

UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಎಂಎಲ್‌ಸಿ ಎನ್ ರವಿಕುಮಾರ್ ವಿರುದ್ಧ ಪೊಲೀಸ್ ಎಫ್‌ಐಆರ್!

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರದ ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ್ದಕ್ಕೆ ಬಿಜೆಪಿ ಎಂಎಲ್‌ಸಿ ಎನ್ ರವಿಕುಮಾರ್ ವಿರುದ್ಧ ಪೊಲೀಸ್ ಎಫ್‌ಐಆರ್ ದಾಖಲು ಮಾಡಿದ್ದಾರೆ.

ರವಿಕುಮಾರ್ ಅವರು ಶಾಲಿನಿ ರಜನೀಶ್ ಬಗ್ಗೆ ವಿವಾದಾತ್ಮಕ ಹೇಳಿಕೆ ನೀಡಿದ್ದರು ಎಂದು ನಂದಾದೀಪ ಮಹಿಳಾ ಸಂಘದ ಅಧ್ಯಕ್ಷೆ ಜೆಪಿ ನಗರದ ನಿವಾಸಿ ನಗರ್ತನಾ ಅವರು ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದರು. ರವಿಕುಮಾರ್ ವಿರುದ್ಧ ಕ್ರಮ ಕೈಗೊಳ್ಳುವಂತೆ ಒತ್ತಾಯ ಮಾಡಿದ್ದರು, ಸದ್ಯ ಪೊಲೀಸ್ ಎಫ್‌ಐಆರ್ ದಾಖಲಿಸಿ ತನಿಖೆ ಆರಂಭಿಸಿದ್ದಾರೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಎನ್. ರವಿಕುಮಾರ್‌ಗೆ ನೋಟಿಸ್ ನೀಡಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ. ವಿಚಾರಣೆ ನಡೆಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಹೇಳಿದ್ದಾರೆ. ಮುಖ್ಯ ಕಾರ್ಯದರ್ಶಿ ಶಾಲಿನಿ ಅವರು ರಾತ್ರಿಯಿಡೀ ರಾಜ್ಯ ಸರ್ಕಾರಕ್ಕಾಗಿ ಮತ್ತು ಇಡೀ ದಿನ ಮುಖ್ಯಮಂತ್ರಿಗಾಗಿ ಕೆಲಸ ಮಾಡುತ್ತಾರೆ ಎಂದು ರವಿಕುಮಾರ್ ಹೇಳಿದ್ದರು ಎಂದು ದೂರಿನ ಪ್ರತಿಯಲ್ಲಿ ಉಲ್ಲೇಖಿಸಿದ್ದಾರೆ. ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಮನೋಹರ್ ಕೂಡ ರವಿಕುಮಾರ್ ವಿರುದ್ಧ ದೂರು ನೀಡಿದ್ದಾರೆ.

## ಪರ್ಯಾಯ ಇಂಧನದ ವಾಹನಗಳಿಗೆ ಪರ್ಮಿಟ್ ಕಡ್ಡಾಯ

• ಉದಯವಾಹಿನಿ, ಬೆಂಗಳೂರು

ಇವರೆಗೆ ಬ್ಯಾಟರಿ ಚಾಲಿತ, ಮಿಥೆನಾಲ್ ಮತ್ತು ಎಥೆನಾಲ್ ಇಂಧನ ಬಳಸಿ ಸಂಚರಿಸುವ ವಾಹನಗಳಿಗೆ ರಹದಾರಿಯ (ಪರ್ಮಿಟ್) ಅಗತ್ಯವಿರಲಿಲ್ಲ. ಇನ್ನು ಮುಂದೆ ರಹದಾರಿ ಪಡೆದೇ ಸಂಚರಿಸಬೇಕು ಎಂದು ರಾಜ್ಯ ಸರ್ಕಾರ ಅಧಿಸೂಚನೆ ಹೊರಡಿಸಿದೆ. ಈ ಪರ್ಯಾಯ ಇಂಧನಗಳನ್ನು ಬಳಸುವ ವಾಹನಗಳಿಗೆ ಮೋಟಾರು ವಾಹನಗಳ ಕಾಯ್ದೆ 1988ರ ಕಲಂ 66 (1)ರ ಅಡಿ ಪರ್ಮಿಟ್ ಪಡೆಯುವುದಕ್ಕೆ ವಿನಾಯತಿ ನೀಡಲಾಗಿತ್ತು. 2022ರಿಂದ ಈ ವಿನಾಯಿತಿ ಜಾರಿಯಲ್ಲಿತ್ತು. ಈ ವಿನಾಯಿತಿಯನ್ನು ಸರ್ಕಾರ ರದ್ದುಪಡಿಸಿದೆ. ಈಗಾಗಲೇ ನೋಂದಣಿ ಆಗಿರುವ ಬ್ಯಾಟರಿ ಚಾಲಿತ, ಮಿಥೆನಾಲ್ ಮತ್ತು ಎಥೆನಾಲ್ ಇಂಧನ ಬಳಸುವ, ಪರ್ಮಿಟ್ ಪಡೆಯದೇ ಸಂಚರಿಸುತ್ತಿರುವ ವಾಹನಗಳು ಹಾಗೂ ಹೊಸದಾಗಿ ನೋಂದಣಿಯಾಗುವ ವಾಹನಗಳಿಗೆ ಸಂಬಂಧಿಸಿದಂತೆ ರಹದಾರಿಯನ್ನು ಶುಲ್ಕ ರಹಿತವಾಗಿ ಮಂಜೂರು ಮಾಡಬೇಕು ಎಂದು ಸಾರಿಗೆ ಇಲಾಖೆ ಅಧಿಸೂಚನೆಯಲ್ಲಿ ತಿಳಿಸಿದೆ.

## 25 ಡಿಸಿಸಿಗೆ ಹೊಸ ಅಧ್ಯಕ್ಷರ ನೇಮಕ ಪ್ರಕ್ರಿಯೆಗೆ ಸೂಚನೆ

• ಉದಯವಾಹಿನಿ, ಬೆಂಗಳೂರು

ಒಂದು ಅಥವಾ ಒಂದಕ್ಕಿಂತ ಹೆಚ್ಚು ಅವಧಿಯಿಂದ ಜಿಲ್ಲಾ ಕಾಂಗ್ರೆಸ್ ಘಟಕದ (ಡಿಸಿಸಿ) ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿರುವವರನ್ನು ಬದಲಿಸುವಂತೆ ಎಐಸಿಸಿ ನೀಡಿದ್ದ ಸೂಚನೆ ಪಾಲಿಸಲು ಕೆಪಿಸಿಸಿ ಮುಂದಾಗಿದೆ. ಒಟ್ಟು 25 ಡಿಸಿಸಿ ಘಟಕಗಳಿಗೆ ಹೊಸ ಅಧ್ಯಕ್ಷರನ್ನು ನೇಮಿಸಲು ತಲಾ ಎರಡು ಅಥವಾ ಮೂರು ಹೆಸರುಗಳನ್ನು ಶಿಫಾರಸು ಮಾಡಲು ಪಕ್ಷದ ತಲಾ ಮೂವರು ಹಿರಿಯ ನಾಯಕರನ್ನು ಒಳಗೊಂಡ ವೀಕ್ಷಕರ ತಂಡವನ್ನು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ರಚಿಸಿದ್ದಾರೆ. ನೇಮಕಗೊಂಡಿರುವ ವೀಕ್ಷಕರಿಗೆ ಈ ಕುರಿತಂತೆ ಪತ್ರ ಬರೆದಿರುವ ಡಿ.ಕೆ. ಶಿವಕುಮಾರ್ ಸಂಬಂಧಪಟ್ಟ ಉಸ್ತುವಾರಿ ಕೆಪಿಸಿಸಿ ಕಾರ್ಯಾಧ್ಯಕ್ಷರು, ಎಐಸಿಸಿ ಕಾರ್ಯದರ್ಶಿಗಳು (ಉಸ್ತುವಾರಿ ಹಾಗೂ ಸ್ಥಳೀಯರು), ಡಿಸಿಸಿ ಅಧ್ಯಕ್ಷರು, ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ಕೆಪಿಸಿಸಿ ಪದಾಧಿಕಾರಿಗಳು, ಮುಂಚೂಣಿ ಘಟಕಗಳ ಅಧ್ಯಕ್ಷರು ಹೀಗೆ ಸ್ಥಳೀಯ ಪ್ರಮುಖರ ಸಭೆ ಕರೆದು ಜಿಲ್ಲೆಯಲ್ಲಿರುವ ಪಕ್ಷ ಸಂಘಟನೆಯ ಸ್ಥಿತಿಗತಿಯನ್ನು ಪರಿಶೀಲಿಸಿ ಜಿಲ್ಲಾ ಘಟಕದ ಅಧ್ಯಕ್ಷರ ನೇಮಕಕ್ಕೆ ಒಮ್ಮತದ ವ್ಯಕ್ತಿಯ ಹೆಸರು ಶಿಫಾರಸು ಮಾಡಲು ಚರ್ಚೆ ನಡೆಸಬೇಕು' ಎಂದು ಸೂಚನೆ ನೀಡಿದ್ದಾರೆ.

## ನೀಟ್: ರಾಜ್ಯದ ಅಭ್ಯರ್ಥಿಗಳ ರ‍್ಯಾಂಕ್ ಪಟ್ಟಿ ಪ್ರಕಟ

• ಉದಯವಾಹಿನಿ, ಬೆಂಗಳೂರು

ಪ್ರವೇಶಕ್ಕೆ ಅರ್ಹತೆ ಪಡೆದ 87,909 ಅಭ್ಯರ್ಥಿಗಳ ನೀಟ್ ರ‍್ಯಾಂಕ್ ಮತ್ತು ಪಡೆದ ಅಂಕಗಳ ವಿವರಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರ ತನ್ನ ಜಾಲತಾಣದಲ್ಲಿ ಪ್ರಕಟಿಸಿದೆ. ಅತಿ ಹೆಚ್ಚು ಅಂದರೆ 670 ಅಂಕ ಪಡೆದ ಅಭ್ಯರ್ಥಿ ರಾಜ್ಯದಲ್ಲಿ ಮೊದಲ ಸ್ಥಾನದಲ್ಲಿ ಇದ್ದಾರೆ. 113 ಅಂಕ ಪಡೆದ ಅಭ್ಯರ್ಥಿ ಕೊನೆಯಲ್ಲಿ ಇದ್ದು, ಅವರು ಕೂಡ ಅರ್ಹತೆ ಪಡೆದಿದ್ದಾರೆ. ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ ಕೊಟ್ಟ ಪಟ್ಟಿಯನ್ನು ಜಾಲತಾಣದಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಲಾಗಿದೆ' ಎಂದು ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಎಚ್.ಪ್ರಸನ್ನ ತಿಳಿಸಿದ್ದಾರೆ. ನೀಟ್ ರೋಲ್ ನಂಬರ್ ನಮೂದಿಸಿ, ನೀಟ್ ಕೌನ್ಸೆಲಿಂಗ್‌ಗೆ ನೋಂದಣಿ ಮಾಡಿಕೊಳ್ಳಲು ಒಂದೆರಡು ದಿನಗಳಲ್ಲಿ ಲಿಂಕ್ ಬಿಡುಗಡೆ ಮಾಡಲಾಗುವುದು.

# ಘಾನಾ ಪ್ರಶಸ್ತಿ ಸ್ವೀಕಾರ ನಮೋಗೆ ಜೈಕಾರ

**ಇದು ದೇಶಕ್ಕೆ ಸಂದ ಗೌರವ**

**ಘಾನಾ ಸಂಸತ್ತಿನಲ್ಲಿ ಪ್ರಧಾನಿ ಮೋದಿ ಐತಿಹಾಸಿಕ ಭಾಷಣ**



1. ಪ್ರಧಾನಿ ಮೋದಿಯಿಂದ ಘಾನಾ ಅಧ್ಯಕ್ಷರಿಗೆ ತಲುಪಿತು ಬೀದರ್‌ನ ಹೂದಾನಿ
2. 140 ಕೋಟಿ ಭಾರತೀಯರ ಅಭಿಮಾನ ಹೊತ್ತು ತಂದಿದ್ದೇನೆ.
3. ಘಾನಾದ ಸಂಸತ್ತಿನಲ್ಲಿ ಪ್ರಧಾನಿ ಮೋದಿ ಭಾಷಣ

### ಘಾನಾ ಅಭಿವೃದ್ಧಿಯಲ್ಲಿ ಭಾರತ ಸಹ ಪ್ರಯಾಣಿಕ

ಪ್ರಧಾನಿ ಮೋದಿ ಅವರು ಘಾನಾ ಅಧ್ಯಕ್ಷ ಜಾನ್ ಡ್ರಾಮಾನಿ ಮಹಾಮ ಅವರೊಂದಿಗೆ ವ್ಯಾಪಕ ಮಾತುಕತೆ ನಡೆಸಿದ ನಂತರ ಭಾರತ ಮತ್ತು ಘಾನಾ ತಮ್ಮ ಸಂಬಂಧಗಳನ್ನು ಸಮಗ್ರ ಪಾಲುದಾರಿಕೆಯ ಮಟ್ಟಕ್ಕೆ ಏರಿಸಿಕೊಂಡಿವೆ. ಮಾತುಕತೆಯ ಸ್ವಲ್ಪ ಸಮಯದ ನಂತರ ತಮ್ಮ ಮಾಧ್ಯಮ ಹೇಳಿಕೆಯಲ್ಲಿ, ಪ್ರಧಾನಿ ಮೋದಿ ಅವರು ಮುಂದಿನ ಐದು ವರ್ಷಗಳಲ್ಲಿ ದ್ವಿಮುಖ ವ್ಯಾಪಾರವನ್ನು ದ್ವಿಗುಣಗೊಳಿಸುವ ಗುರಿಯನ್ನು ಎರಡೂ ಕಡೆಯವರು ಹೊಂದಿದ್ದಾರೆ ಮತ್ತು ಭಾರತವು ಕೇವಲ ಪಾಲುದಾರರಲ್ಲ, ಆದರೆ ಘಾನಾದ ಅಭಿವೃದ್ಧಿ ಪ್ರಯಾಣದಲ್ಲಿ ಸಹ-ಪ್ರಯಾಣಿಕ ಎಂದು ಹೇಳಿದರು. ಮೋದಿ ಅವರು ತಮ್ಮ ಐದು ರಾಷ್ಟ್ರಗಳ ಪ್ರವಾಸದ ಮೊದಲ ಹಂತದಲ್ಲಿ ಪಶ್ಚಿಮ ಆಫ್ರಿಕಾದ ದೇಶದ ರಾಜಧಾನಿ ನಗರಕ್ಕೆ ಆಗಮಿಸಿದ ಕೆಲವೇ ಗಂಟೆಗಳಲ್ಲಿ ಇಬ್ಬರು ನಾಯಕರ ನಡುವಿನ ನಿಯೋಗ ಮಟ್ಟದ ಸಭೆ ನಡೆಯಿತು.ಸಂಸ್ಕೃತಿ ಮತ್ತು ಸಾಂಪ್ರದಾಯಿಕ ಔಷಧ ಸೇರಿದಂತೆ ಹಲವಾರು ಕ್ಷೇತ್ರಗಳಲ್ಲಿ ಸಹಕಾರವನ್ನು ಒದಗಿಸುವ ನಾಲ್ಕು ಒಪ್ಪಂದಗಳಿಗೆ ಎರಡೂ ಕಡೆಯವರು ಸಹಿ ಹಾಕಿದರು.

• ಉದಯವಾಹಿನಿ, ಬೆಂಗಳೂರು

ಪ್ರಧಾನಿ ಮೋದಿ ಅವರಿಗೆ ಆ ದೇಶದ ರಾಷ್ಟ್ರೀಯ ಗೌರವ 'ದಿ ಆಫೀಸರ್ ಆಫ್ ದಿ ಆರ್ಡರ್ ಆಫ್ ದಿ ಸ್ಟಾರ್ ಆಫ್ ಘಾನಾ' ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಘಾನಾ ಸರ್ಕಾರ ಭಾರತದ ಪ್ರಧಾನಿ ಅವರ ವಿಶಿಷ್ಟ ರಾಜನೀತಿ ಮತ್ತು ಪ್ರಭಾವಶಾಲಿ ಜಾಗತಿಕ ನಾಯಕತ್ವಕ್ಕಾಗಿ ಈ ಪ್ರಶಸ್ತಿ ಪ್ರದಾನ ಮಾಡುವ ಮೂಲಕ ಅವರ ಸಾಧನೆಯನ್ನು ಗುರುತಿಸಿದೆ. ಪ್ರಧಾನಿ ಮೋದಿ ಅವರು ಘಾನಾದ ಅಧ್ಯಕ್ಷ ಜಾನ್ ಡ್ರಾಮಾನಿ ಮಹಾಮ ಅವರಿಂದ ಪ್ರಶಸ್ತಿ ಸ್ವೀಕರಿಸಿದರು. 'ದಿ ಆಫೀಸರ್ ಆಫ್ ದಿ ಆರ್ಡರ್ ಆಫ್ ದಿ ಸ್ಟಾರ್ ಆಫ್ ಘಾನಾ' ಪ್ರಶಸ್ತಿಗೆ ಭಾಜನರಾಗುತ್ತಿರುವುದು ದೇಶಕ್ಕೆ ಸಿಕ್ಕ ಗೌರವ ಎಂದು ಪ್ರಧಾನಿ ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಅವರು, ಈ ಪ್ರಶಸ್ತಿ ತಮಗೆ ಅತ್ಯಂತ ಹೆಮ್ಮೆ ಮತ್ತು ಗೌರವದ ವಿಷಯವಾಗಿದೆ ಎಂದು ಮೋದಿ ಬಣ್ಣಿಸಿದ್ದಾರೆ.140 ಕೋಟಿ ಭಾರತೀಯರ ಪರವಾಗಿ ನಾನು ವಿನಮ್ರವಾಗಿ ಪ್ರಶಸ್ತಿಯನ್ನು ಸ್ವೀಕರಿಸುತ್ತೇನೆ ಎಂದು ಹೇಳಿರುವ ಅವರು, ಇದನ್ನು ಎರಡೂ ದೇಶಗಳ ಯುವಕರ ಆಕಾಂಕ್ಷೆಗಳು ಮತ್ತು ಉಜ್ವಲ ಭವಿಷ್ಯ, ಅವರ ಶ್ರೀಮಂತ ಸಾಂಸ್ಕೃತಿಕ ಸಂಪ್ರದಾಯಗಳು ಮತ್ತು ವೈವಿಧ್ಯತೆ ಮತ್ತು ಘಾನಾ ಮತ್ತು ಭಾರತದ ನಡುವಿನ ಐತಿಹಾಸಿಕ ಸಂಬಂಧಗಳಿಗೆ ಅರ್ಪಿಸುತ್ತಿದ್ದೇನೆ ಎಂದು ಹೇಳಿದರು.

**ಈ ಗೌರವವು ಒಂದು ದೊಡ್ಡ ಜವಾಬ್ದಾರಿ:** ಭಾರತ-ಘಾನಾ ಸ್ನೇಹಕ್ಕಾಗಿ ನಿರಂತರವಾಗಿ ಶ್ರಮಿಸುವುದು. ಭಾರತವು ಯಾವಾಗಲೂ ಘಾನಾ ಜನರೊಂದಿಗೆ ನಿಲ್ಲುತ್ತದೆ ಮತ್ತು ವಿಶ್ವಾಸಾರ್ಹ ಸ್ನೇಹಿತ ಹಾಗೂ ಅಭಿವೃದ್ಧಿ ಪಾಲುದಾರನಾಗಿ ಕೊಡುಗೆ ನೀಡುವುದನ್ನು ಮುಂದುವರಿಸುತ್ತದೆ ಎಂದು ಮೋದಿ ಅವರು ತಮ್ಮ ಅಧಿಕೃತ ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

ಪ್ರಧಾನ ಮಂತ್ರಿಯವರ ವಿಶಿಷ್ಟ ರಾಜನೀತಿ ಮತ್ತು ಪ್ರಭಾವಶಾಲಿ ಜಾಗತಿಕ ನಾಯಕತ್ವವನ್ನು ಗುರುತಿಸಿ ಈ ಪ್ರಶಸ್ತಿಯನ್ನು ನೀಡಲಾಗಿದೆ ಎಂದು ವಿದೇಶಾಂಗ ಸಚಿವಾಲಯ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ. ಈ ಪ್ರಶಸ್ತಿಯು ಎರಡೂ ದೇಶಗಳ ನಡುವಿನ ಸ್ನೇಹವನ್ನು ಮತ್ತಷ್ಟು ಗಟ್ಟಿಗೊಳಿಸುತ್ತದೆ ಮತ್ತು ದ್ವಿಪಕ್ಷೀಯ ಸಂಬಂಧಗಳನ್ನು ಸ್ವೀಕರಿಸಲು ಮತ್ತು ಮುನ್ನಡೆಸಲು ತಮ್ಮ ಮೇಲೆ ಹೊಸ ಜವಾಬ್ದಾರಿಯನ್ನು ಇರಿಸುತ್ತದೆ ಎಂದು ಅವರು ಹೇಳಿದರು. ಘಾನಾಗೆ ತಮ್ಮ ಐತಿಹಾಸಿಕ ಭೇಟಿಯು ಭಾರತ-ಘಾನಾ ಸಂಬಂಧಗಳಿಗೆ ಹೊಸ ಆವೇಗವನ್ನು ನೀಡುತ್ತದೆ ಎಂಬ ವಿಶ್ವಾಸವನ್ನು ಮೋದಿ ವ್ಯಕ್ತಪಡಿಸಿದರು ಎಂದು ಭಾರತೀಯ ವಿದೇಶಾಂಗ ಇಲಾಖೆ ತಿಳಿಸಿದೆ.

**ಪ್ರಧಾನಿ ಮೋದಿಗೆ 24ನೇ ಅಂತಾರಾಷ್ಟ್ರೀಯ ಗೌರವ:**

ಜಾಗತಿಕ ದಕ್ಷಿಣವನ್ನು ಜಗತ್ತು ನಿರ್ಲಕ್ಷಿಸುವುದನ್ನು ಮುಂದುವರಿಸಲು ಸಾಧ್ಯವಿಲ್ಲ. ಯಾಕಂದರೆ, ಜಾಗತಿಕ ದಕ್ಷಿಣಕ್ಕೆ ಧ್ವನಿ ನೀಡದೆ ಪ್ರಗತಿ ಬರಲು ಸಾಧ್ಯವಿಲ್ಲ. ಹಾಗಾಗಿ, ಪ್ರತಿಯೊಂದು ಸವಾಲನ್ನು ಘನತೆ ಮತ್ತು ಸಭ್ಯತೆಯಿಂದ ಎದುರಿಸುವ ರಾಷ್ಟ್ರವಾಗಿರುವ ಘಾನಾದ ಸಮಗ್ರ ಪ್ರಗತಿಯು ಇಡೀ ಆಫ್ರಿಕನ್ ಖಂಡಕ್ಕೆ ಸ್ಫೂರ್ತಿಯ ಕೇಂದ್ರವನ್ನಾಗಿ ಮಾಡಿದೆ ಎಂದರು. ಇದಕ್ಕೂ ಮುನ್ನ ಘಾನಾ ಅಧ್ಯಕ್ಷ ಜಾನ್ ಡ್ರಾಮಾನಿ ಮಹಾಮ ಅವರಿಂದ ಘಾನಾ ದೇಶದ ಅತ್ಯುನ್ನತ ಪ್ರಶಸ್ತಿಯಾದ 'ಆಫೀಸರ್ ಆಫ್ ದಿ ಆರ್ಡರ್ ಆಫ್ ದಿ ಸ್ಟಾರ್ ಆಫ್ ಘಾನಾ' ಪ್ರಶಸ್ತಿಯನ್ನು ಸ್ವೀಕರಿಸಿದರು. ಪ್ರಶಸ್ತಿಯ ಮೂಲಕ ಮೋದಿ ಅವರು, 24 ದೇಶಗಳಿಂದ ಅತ್ಯುನ್ನತ ನಾಗರಿಕ ಗೌರವಗಳನ್ನು ಪಡೆದಿದ್ದಾರೆ.

**ಮೋದಿಗೆ ಘಾನಾದ ರಾಷ್ಟ್ರೀಯ ಗೌರವ**

**ಭಾರತದ ವೈವಿಧ್ಯತೆಯ ಬಗ್ಗೆ ಕೇಳಿ ಸಂಸದರಿಂದ ಉದ್ಗಾರ...!**

**ವಿದೇಶದಲ್ಲೂ ಮೋದಿ ಹವಾ ಅಭಿಮಾನಿಗಳ ಜೈಕಾರಕ್ಕೆ ಪಿಎಂ ಫಿದಾ!**

### ಮಹುವಾ ಮೊಯಿತ್ರಾ ವಾಗ್ದಾಳಿ

ಪ್ರಧಾನಿ ಮೋದಿಯವರ ಐದು ದೇಶಗಳ ವಿದೇಶ ಪ್ರವಾಸದ ಬಗ್ಗೆ ತೃಣಮೂಲ ಕಾಂಗ್ರೆಸ್ ಸಂಸದೆ ಮಹುವಾ ಮೊಯಿತ್ರಾ ಟೀಕಿಸಿದ್ದಾರೆ. ಮೋದಿ ನಾಯಕತ್ವದಲ್ಲಿ ಭಾರತದ ಅಂತಾರಾಷ್ಟ ಸ್ಥಾನಮಾನದ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ. ಮೋದಿಯ ಪ್ರವಾಸದಿಂದ ವಿದೇಶಾಂಗ ನೀತಿಯ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ ಎಂದು ಹೇಳಿದ್ದಾರೆ. ಗೌರವಾನ್ವಿತ ಪ್ರಧಾನ ಮಂತ್ರಿಗಳು ಮತ್ತೊಂದು ದೀರ್ಘ ವಿದೇಶ ಪ್ರವಾಸಕ್ಕೆ ಹೊರಟಿದ್ದಾರೆ. ವಿಶ್ವಾದ್ಯಂತ ಸಂಚರಿಸುತ್ತಿರುವ ಗೌರವಾನ್ವಿತ ಪ್ರಧಾನ ಮಂತ್ರಿಗಳಿಗೆ ಕೆಲವು ಪ್ರಶ್ನೆಗಳಿವೆ. ನೀವು ತೆರಿಗೆದಾರರ ಹಣದಿಂದ ಅತಿ ಹೆಚ್ಚು ಪ್ರಯಾಣಿಸಿದ ಪ್ರಧಾನಿಯಾಗಿದ್ದೀರಿ. ಇದು ಭಾರತದ ಜಾಗತಿಕ ನೀತಿಯನ್ನು ಬಲಪಡಿಸಿದೆ ಎಂದು ಪ್ರಧಾನಿ ಹೇಳುತ್ತಾರೆ, ಆದರೆ ಸತ್ಯ ಬೇರೆಯೇ ಇದೆ? ಎಂದು ಮಹುವಾ ಮೊಯಿತ್ರಾ ಹೇಳಿದರು.

### ಬಿಜೆಪಿ ಅಧ್ಯಕ್ಷರ ಆಯ್ಕೆ

12ಕ್ಕೂ ಹೆಚ್ಚು ರಾಜ್ಯಗಳಲ್ಲಿ ಸ್ಥಳೀಯ ಚುನಾವಣೆಗಳು ಪೂರ್ಣಗೊಂಡಿದ್ದು, ಪ್ರಧಾನಿ ನರೇಂದ್ರ ಮೋದಿ ಜುಲೈ 9 ಅಥವಾ 10 ರಂದು ತಮ್ಮ ವಿದೇಶ ಪ್ರವಾಸದಿಂದ ಹಿಂದಿರುಗಿದ ಕೆಲ ದಿನಗಳ ನಂತರ ಬಿಜೆಪಿ ತನ್ನ ಮುಂದಿನ ರಾಷ್ಟ್ರೀಯ ಅಧ್ಯಕ್ಷರಾಗಿ ಒಮ್ಮತದ ಅಭ್ಯರ್ಥಿಯ ಹೆಸರನ್ನು ಘೋಷಿಸುವ ಸಾಧ್ಯತೆಯಿದೆ. ಬಹುತೇಕ ರಾಜ್ಯಗಳಲ್ಲಿ ಸಾಂಸ್ಥಿಕ ಚುನಾವಣೆ ಪ್ರಕ್ರಿಯೆ ಮುಗಿದಿದೆ. ಇತ್ತೀಚೆಗೆ ಹಿಮಾಚಲ ಪ್ರದೇಶ, ಮಧ್ಯಪ್ರದೇಶ, ಉತ್ತರಾಖಂಡ, ಮಹಾರಾಷ್ಟ್ರ, ಆಂಧ್ರಪ್ರದೇಶ ಮತ್ತು ಇತರ ರಾಜ್ಯಗಳಲ್ಲಿ ಬಿಜೆಪಿಯಿಂದ ಹೊಸ ರಾಜ್ಯಾಧ್ಯಕ್ಷರನ್ನು ಆಯ್ಕೆ ಮಾಡಲಾಗಿದೆ.

# ವಾಲ್ಮೀಕಿ ನಿಗಮದ ಮತ್ತೆರಡು ಅಕ್ರಮ ಬಯಲು

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ಮಹರ್ಷಿ ವಾಲ್ಮೀಕಿ ನಿಗಮದ ಹಗರಣವು, ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ಸರ್ಕಾರಕ್ಕೆ ಇನ್ನಿಲ್ಲದ ಮುಜುಗರವನ್ನು ತಂದೊಡ್ಡಿದ್ದು ಗೊತ್ತಿರುವ ವಿಚಾರ. ಆದ ಮುಜುಗರವನ್ನು ತಪ್ಪಿಸಿಕೊಳ್ಳಲು, ಸರ್ಕಾರ ಈ ಹಗರಣವನ್ನು ವಿಶೇಷ ತನಿಖಾ ದಳ (ಸಿಐಡಿ) ರಚಿಸಿ, ಅದಕ್ಕೆ ಹಸ್ತಾಂತರಿಸಿತ್ತು. ಈಗ, ಈ ಕೇಸಿಗೆ ಸಂಬಂಧಿಸಿದಂತೆ, ದಾಖಲೆಗಳನ್ನು ಸಿಬಿಐಗೆ ನೀಡುವಂತೆ, ಕರ್ನಾಟಕ ಹೈಕೋರ್ಟ್ ಆದೇಶಿಸಿದೆ. ನ್ಯಾಯಾಲಯದ ಹಿಂದಿನ ಆದೇಶದಂತೆ ಸೀಮಿತವಾಗಿ ತನಿಖೆ ನಡೆಸುತ್ತಿದ್ದ ಸಿಬಿಐಗೆ ಈಗ ಪೂರ್ಣ ಅಧಿಕಾರ ಸಿಕ್ಕಂತಾಗಿದೆ. ಇದರ ಬೆನ್ನಲ್ಲೇ, ಮತ್ತೆರಡು ಅಕ್ರಮವಾಗಿರುವುದನ್ನು ಪತ್ತೆ ಹಚ್ಚಿರುವ ಸಿಬಿಐ, ಅದರ ಮಾಹಿತಿಯನ್ನು ಕರ್ನಾಟಕ ಹೈಕೋರ್ಟಿಗೆ ನೀಡಿದೆ. ಆ ಮೂಲಕ, ಇದರಲ್ಲಿ ಶಾಮೀಲಾಗಿರುವ ಎಲ್ಲರಿಗೂ ಢವಢವ ಆರಂಭವಾಗಿದೆ.

ಈ ಪ್ರಕರಣಕ್ಕೆ ಸಂಬಂಧ ಪಟ್ಟಂತೆ ಇದುವರೆಗೆ ಕಲೆಹಾಕಿರುವ ಎಲ್ಲಾ ದಾಖಲೆಗಳು, ಫೊರೆನ್ಸಿಕ್ ರಿಪೋರ್ಟ್, ಇಮೇಜಸ್ ಗಳನ್ನು ಈ ಕೂಡಲೇ ಸಿಬಿಐಗೆ ಒದಗಿಸುವಂತೆ ಸಿಐಡಿ ಮತ್ತು ಇಡಿಗೆ (ಜಾರಿ ನಿರ್ದೇಶನಾಲಯ) ಹೈಕೋರ್ಟ್ ಸೂಚನೆಯನ್ನು ನೀಡಿದೆ. ಹಣವನ್ನು ಅಕ್ರಮವಾಗಿ ವರ್ಗಾವಣೆ ಮಾಡಿರುವುದು ತನಿಖೆಯ ವೇಳೆ ಬಹಿರಂಗಗೊಂಡಿದೆ.

ಸಿಬಿಐ ಇಟ್ಟ ವಾದಕ್ಕೆ ಯೆಸ್ ಎಂದ ಕರ್ನಾಟಕ ಹೈಕೋರ್ಟ್ ಇದೊಂದು ಅತ್ಯಂತ ಬೃಹತ್ ಸರ್ಕಾರಿ ಹಣ ಲೂಟಿ ಮಾಡಿರುವ ಪ್ರಕರಣವಾಗಿದೆ. ಇದರಲ್ಲಿ ಸಾಕಷ್ಟು ಪಿತೂರಿಗಳು ಮೇಲ್ನೋಟಕ್ಕೆ ಕಾಣ ಸಿಗುತ್ತದೆ. ಸಂಬಂಧ ಪಟ್ಟ ದಾಖಲೆಗಳನ್ನು ಹಸ್ತಾಂತರಿಸುವಂತೆ ತನಿಖಾ ಸಂಸ್ಥೆಗಳಿಗೆ ಸೂಚನೆ ಕೂಡಬೇಕು ಎಂದು ಸಿಬಿಐ ವಾದ ಮಂಡಿಸಿತ್ತು.




**ಫುಲ್ ಆಕ್ಷನ್ ನಲ್ಲಿ ಸಿಬಿಐ, ಯಾರಿಗೆಲ್ಲಾ ಶುರು ಢವಢವ**

ಇದಕ್ಕೆ ಒಪ್ಪಿಗೆ ಸೂಚಿಸಿರುವ ಹೈಕೋರ್ಟ್, ದಾಖಲೆಗಳನ್ನು ಒದಗಿಸುವಂತೆ ಆದೇಶ ನೀಡಿದೆ. ಇದರ ಜೊತೆಗೆ, ಸಿಬಿಐ ಸಲ್ಲಿಸಿದ ಮತ್ತೆರಡು ಅಕ್ರಮಗಳನ್ನು ಹೈಕೋರ್ಟ್ ತನ್ನ ಆದೇಶದಲ್ಲಿ ಉಲ್ಲೇಖಿಸಿದೆ.

**ಸಿಬಿಐ ಹೊರಗೆಳೆದ ಮತ್ತೆರಡು ಪ್ರಕರಣಗಳು ಯಾವುವು?:** ಸಿಬಿಐ, ಹೈಕೋರ್ಟಿಗೆ ನೀಡಿದ ವರದಿಯ ಪ್ರಕಾರ, ಬೆಂಗಳೂರಿನ ಕೆನರಾ ಬ್ಯಾಂಕ್ ನಲ್ಲಿನ ಕರ್ನಾಟಕ ಜರ್ಮನ್ ತಾಂತ್ರಿಕ ತರಬೇತಿ ಸಂಸ್ಥೆಯಿಂದ 95 ಲಕ್ಷ ರೂಪಾಯಿ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯಿಂದ 2.17 ಕೋಟಿ ರೂಪಾಯಿ ಹಣವು, ಅಕ್ರಮವಾಗಿ ಆರೋಪಿ ಸ್ಥಾನದಲ್ಲಿರುವ ನೆಕ್ಕುಂಟಿ ನಾಗರಾಜ್ ಖಾತೆಗೆ ವರ್ಗಾವಣೆಯಾಗಿದೆ ಎಂದು ಸಿಬಿಐ, ದಾಖಲೆ ಸಮೇತ ವರದಿಯನ್ನು, ಹೈಕೋರ್ಟಿಗೆ ನೀಡಿದೆ. ಆ ಮೂಲಕ, ನಿಗಮದ ಮತ್ತೆರಡು ಪ್ರಕರಣವನ್ನು ಹೊರಗೆಳೆದಿದೆ.

**ರಾಜೀನಾಮೆ ನೀಡಿದ್ದ ಬಿ.ನಾಗೇಂದ್ರ:** ವಾಲ್ಮೀಕಿ ನಿಗಮದ ಅಧೀಕ್ಷಕರಾಗಿದ್ದ ಚಂದ್ರಶೇಖರನ್, ಈ ಪ್ರಕರಣ ಹೊರಬರುತ್ತಿದ್ದಂತೆಯೇ ಆತ್ಮಹತ್ಯೆಗೆ ಶರಣಾಗಿದ್ದರು.

ಅವರು ಮೊದಲೇ ಬರೆದಿಟ್ಟಿದ್ದ ಡೆತ್ ನೋಟ್‌ನಲ್ಲಿ ಮೂವರ ಹೆಸರನ್ನು ಮತ್ತು ಇದೊಂದು ಬಹುಕೋಟಿ ಹಗರಣ ಎಂದು ಉಲ್ಲೇಖಿಸಿದ್ದರು. ಇದರ ಬೆನ್ನಲ್ಲೇ, 94 ಕೋಟಿ ರೂಪಾಯಿ ಅಕ್ರಮ ನಡೆದದ್ದು ಪತ್ತೆಯಾಗಿತ್ತು. ಇದರಲ್ಲಿ ಶಾಮೀಲಾಗಿದ್ದ ಆರು ಬ್ಯಾಂಕ್ ಸಿಬ್ಬಂದಿ ವಿರುದ್ಧ ಬೆಂಗಳೂರಿನ ಹೈಗ್ರೌಂಡ್ಸ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ಇದಾದ ಸ್ವಲ್ಪ ದಿನದಲ್ಲಿ ಸಚಿವರಾಗಿದ್ದ ಬಿ.ನಾಗೇಂದ್ರ, ರಾಜೀನಾಮೆ ನೀಡಬೇಕಾಯಿತು.

ಈಗ ಹೊಸ ಅಕ್ರಮವನ್ನು ಸಿಬಿಐ ಬಯಲಿಗೆ ಎಳೆದಿರುವುದರಿಂದ, ಸರ್ಕಾರದ ಯಾರಾದರೂ ಸಚಿವರು ಅಥವಾ ಅಧಿಕಾರಿಗಳು ಈ ಪ್ರಕರಣದಲ್ಲಿ ಶಾಮೀಲಾಗಿದ್ದಾರೆ ಎನ್ನುವ ಅಂಶ ಹೊರಬರಲಿದೆ. ಆದರೆ, ಕೆಜಿಟಿಟಿಐ ಮತ್ತು ಪರಿಶಿಷ್ಟ ಪಂಗಡ ಕಲ್ಯಾಣ ಇಲಾಖೆಯ ಅಧಿಕಾರಿಗಳು ಅಥವಾ ಖಾಸಗಿ ವ್ಯಕ್ತಿಗಳ ಪಾತ್ರವಿದ್ದರೆ, ಅವರ ತನಿಖೆಗೆ, ಹೈಕೋರ್ಟ್ ನಿಂದ ಮತ್ತೆ ಅನುಮತಿಯನ್ನು ಸಿಬಿಐ ಪಡೆಯಬೇಕಿದೆ.

### ಸರ್ಕಾರಕ್ಕೆ ತಲೆನೋವಾಗಿ ಪರಿಣಮಿಸಿರುವ ಸಿಬಿಐ ಹಸ್ತಾಂತರ

**89.63 ಕೋಟಿ ರೂಪಾಯಿ ಹಣವನ್ನು ಏಳುನೂರು ಫಲಾನುಭವಿಗಳ ಖಾತೆಗಳಿಗೆ ವರ್ಗಾಯಿಸಿ, ಅಲ್ಲಿಂದ ಬೇರೆ ಬೇರೆ ಖಾತೆಗಳಿಗೆ ಹಣವನ್ನು ಟ್ರಾನ್ಸಫರ್ ಮಾಡಲಾಗಿದೆ ಎನ್ನುವುದು ಸಿಬಿಐ ವಾದವಾಗಿದೆ. ಈ ಹಗರಣಕ್ಕೆ ಸಂಬಂಧಿಸಿದಂತೆ, ಈಗಾಗಲೇ ಸಚಿವ ನಾಗೇಂದ್ರ ಅವರ ಬಂಧನವಾಗಿತ್ತು, ಆ ನಂತರ ಜಾಮೀನಿನ ಮೇಲೆ ಹೊರಗೆ ಬಂದಿದ್ದರು. ಒಟ್ಟಾರೆಯಾಗಿ, ಸಿದ್ದರಾಮಯ್ಯನವರ ಸರ್ಕಾರಕ್ಕೆ ತೀವ್ರ ಮುಜುಗರ ತಂದೊಡ್ಡಿದ್ದ ಪ್ರಕರಣಕ್ಕೆ ಈಗ ಸಿಬಿಐಗೆ ಹೆಚ್ಚಿನ ಅನುಮತಿಯನ್ನು ಹೈಕೋರ್ಟ್ ನೀಡಿದೆ. ಹಾಗಾಗಿ, ಸರ್ಕಾರಕ್ಕೆ ಇದು ತಲೆನೋವಾಗಿ ಪರಿಣಮಿಸುವ ಸಾಧ್ಯತೆಯಿದೆ.**

# ರಾಜ್ಯ ಸರ್ಕಾರದ ವಿರುದ್ಧ ಒಳ ಮೀಸಲಾತಿ ಅಸ್ತ್ರ ಕೈಗೆತ್ತಿಕೊಂಡ ಬಿಜೆಪಿ!

■ ರಾಜ್ಯದಲ್ಲಿ ಒಳಮೀಸಲಾತಿ ವಿಚಾರ ಮತ್ತೊಮ್ಮೆ ಚರ್ಚೆ ■ ಆಗಸ್ಟ್ 1ರಿಂದ ರಾಜ್ಯಾದ್ಯಂತ ಹೋರಾಟಕ್ಕೆ ಸಜ್ಜು

• ಉದಯವಾಹಿನಿ, ಬೆಂಗಳೂರು

ಸಿದ್ದರಾಮಯ್ಯನವರ ಸರಕಾರವು ಒಳ ಮೀಸಲಾತಿ ಜಾರಿಗೊಳಿಸದೆ ಇರುವ ಹುನ್ನಾರ ನಡೆಸಿದಂತಿದೆ ಎಂದು ಮಾಜಿ ಉಪಮುಖ್ಯಮಂತ್ರಿ ಹಾಗೂ ಸಂಸದ ಗೋವಿಂದ ಕಾರಜೋಳ ಅವರು ಆರೋಪಿಸಿದ್ದಾರೆ.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಗುರುವಾರ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿಯ ಬಸವರಾಜ ಬೊಮ್ಮಾಯಿ ಅವರ ನೇತೃತ್ವದ ಸರಕಾರವು ಮಾಧುಸ್ವಾಮಿ ಅವರ ಸಮಿತಿ ರಚಿಸಿ ಒಳ ಮೀಸಲಾತಿಯನ್ನು ಜನಸಂಖ್ಯೆಗೆ ಅನುಗುಣವಾಗಿ ಹಂಚಿಕೆ ಮಾಡಿತ್ತು. ಅದನ್ನು ಕೂಡಲೇ ಅನುಷ್ಠಾನಕ್ಕೆ ತರಬೇಕು ಎಂದು ಆಗ್ರಹಿಸಿದರು. ಮಾಡದೆ ಇದ್ದಲ್ಲಿ ಆಗಸ್ಟ್ 1ರಿಂದ ನಾವು ರಾಜ್ಯದ ಉದ್ದಗಲಕ್ಕೂ ಹೋರಾಟ ಮಾಡುತ್ತೇವೆ. ರಾಜ್ಯ ಸರಕಾರದ ವಿರುದ್ಧ ಅಸಹಕಾರ ಚಳವಳಿ ಮಾಡಲು ತಯಾರಿದ್ದೇವೆ ಎಂದು ಎಚ್ಚರಿಸಿದರು.

**ಆಗಸ್ಟ್ 1ರಿಂದ ರಾಜ್ಯಾದ್ಯಂತ ಹೋರಾಟ**

ಅಸ್ಪೃಶ್ಯರು ತಮ್ಮ ಬದುಕಿಗಾಗಿ- ಉಳಿವಿಗಾಗಿ ದೊಡ್ಡ ಆಂದೋಲನ ಮಾಡಲು ಸಿದ್ಧರಿದ್ದೇವೆ ಎಂದು ಪ್ರಕಟಿಸಿದರು. ಇದೇ 31ರೊಳಗೆ ಜಾರಿ ಆಗದಿದ್ದರೆ 30 ಜಿಲ್ಲೆಗಳಲ್ಲೂ ಅಸಹಕಾರ ಚಳವಳಿ ಮಾಡುತ್ತೇವೆ ಎಂದು ಎಚ್ಚರಿಕೆ ನೀಡುವುದಾಗಿ ಹೇಳಿದರು. ಸಿದ್ದರಾಮಯ್ಯ, ಮಲ್ಲಿಕಾರ್ಜುನ ಖರ್ಗೆ ಅವರಿಗೆ ಬದ್ಧತೆ ಇದ್ದರೆ ಸಾಮಾಜಿಕ ನ್ಯಾಯದ ದೃಷ್ಟಿಯಿಂದ ಒಳ ಮೀಸಲಾತಿ ಜಾರಿ ಮಾಡಿ ಎಂದು ಒತ್ತಾಯಿಸಿದರು.




### ದತ್ತಾಂಶ ಇಲ್ಲ; ಇನ್ನೊಮ್ಮೆ ಸರ್ವೇ ಮಾಡಿಸುತ್ತೇವೆ

**40 ದಿನಗಳಲ್ಲಿ ಮಾಡಿ ಕೊಡುವುದಾಗಿ 4 ತಿಂಗಳ ಹಿಂದೆಯೇ ನ್ಯಾ. ನಾಗಮೋಹನದಾಸ್ ನೇತೃತ್ವದಲ್ಲಿ ಸಮಿತಿ ರಚಿಸಿದ್ದಾರೆ. ಗೊಂದಲ ಸೃಷ್ಟಿ ಮಾಡಲೆಂದೇ ಈ ಸಮಿತಿ ರಚಿಸಿದ್ದಾರೆ ಎಂದು ಆರೋಪಿಸಿದರು. ಇದೀಗ ಮಾಧ್ಯಮಗಳಲ್ಲಿ ಸರ್ವೇ ಸರಿಯಾಗಿಲ್ಲ ಎಂಬ ವರದಿಗಳನ್ನು ನೋಡುತ್ತಿದ್ದೇವೆ. ಈ ಸರಕಾರ ಗೊಂದಲ ಸೃಷ್ಟಿಸಿ ಒಳ ಮೀಸಲಾತಿ ಮಾಡದೆ ಇರುವ ಹುನ್ನಾರ ಸೃಷ್ಟಿಸುತ್ತಿದೆ ಎಂಬ ಆತಂಕ ನಿರ್ಮಾಣವಾಗಿದೆ. ಸಿದ್ದರಾಮಯ್ಯನವರಿಗೆ ಸಾಮಾಜಿಕ ಕಳಕಳಿ, ಕಾಳಜಿ ಇಲ್ಲ. ಇದ್ದಿದ್ದರೆ ಒಳ ಮೀಸಲಾತಿ ಜಾರಿ ಮಾಡುತ್ತಿದ್ದರು. ಕಾಂಗ್ರೆಸ್ ಅಧಿನಾಯಕಿ ಸೋನಿಯಾ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ಸಿದ್ದರಾಮಯ್ಯ, ಡಿಕೆ ಶಿವಕುಮಾರ್ ಅವರು 2023ರ ಚುನಾವಣೆ ಪ್ರಣಾಳಿಕೆಯಲ್ಲಿ ಮೊದಲನೇ ಕ್ಯಾಬಿನೆಟ್ ಸಭೆಯಲ್ಲೇ ಒಳ ಮೀಸಲಾತಿ ಜಾತಿ ಮಾಡಲಿದ್ದೇವೆ ಎಂದು ತಿಳಿಸಿದ್ದಾಗಿ ಗಮನ ಸೆಳೆದರು.**

30 ವರ್ಷಗಳಿಂದ ಹೋರಾಟ ನಡೆಯುತ್ತಿದ್ದ ನಮ್ಮ ಪಕ್ಷದ ರಾಜ್ಯಗಳಾದ ಆಂಧ್ರ, ತೆಲಂಗಾಣ, ಹರಿಯಾಣ ಮೊದಲಾದೆಡೆ ಈಗಾಗಲೇ ಒಳ ಮೀಸಲಾತಿ ಜಾರಿ ಮಾಡಿ ನ್ಯಾಯ ಒದಗಿಸಿಕೊಟ್ಟಿದ್ದಾರೆ. ಆದರೆ, ಕರ್ನಾಟಕ ಸರಕಾರವು ಒಂದು ವರ್ಷವಾದರೂ ಒಳ ಮೀಸಲಾತಿ ಆದೇಶ ಜಾರಿ ಮಾಡದೆ ಕೇವಲ ಮತಬ್ಯಾಂಕ್ ರಾಜಕಾರಣಕ್ಕಾಗಿ ಗಿಮಿಕ್ ಮಾಡುತ್ತಿದೆ ಎಂದು ಆಕ್ಷೇಪಿಸಿದರು.

ನಮ್ಮ ಬಸವರಾಜ ಬೊಮ್ಮಾಯಿ ಅವರ ನೇತೃತ್ವದ ಸರಕಾರವು ಮಾಧುಸ್ವಾಮಿ ಅವರ ಸಮಿತಿ ರಚಿಸಿ ಒಳ ಮೀಸಲಾತಿಯನ್ನು ಜನಸಂಖ್ಯೆಗೆ ಅನುಗುಣವಾಗಿ ಹಂಚಿಕೆ ಮಾಡಿತ್ತು. ಅದನ್ನು ಸುಪ್ರೀಂ ಕೋರ್ಟಿಗೂ ಸಲ್ಲಿಸಿದ್ದೇವೆ. ಅದನ್ನು ಕೂಡಲೇ ಜಾರಿಗೊಳಿಸಿ ಎಂದು ಆಗ್ರಹಿಸಿದರು. ತಪ್ಪು, ತಡೆಗಳಿದ್ದರೆ ಅದನ್ನು ತಿದ್ದಲು ಅವಕಾಶವಿದೆ ಎಂದು ನುಡಿದರು.

ಕಳೆದ ಮೂವತ್ತು ವರ್ಷಗಳಿಂದ ಸಾಮಾಜಿಕ ನ್ಯಾಯಕ್ಕಾಗಿ, ಒಳಮೀಸಲಾತಿಗಾಗಿ ಅಸ್ಪೃಶ್ಯ ಜನಾಂಗದವರು ಕರ್ನಾಟಕ ಸೇರಿದಂತೆ ಅನೇಕ ರಾಜ್ಯಗಳಲ್ಲಿ ಹೋರಾಟ ಮಾಡುತ್ತಿದ್ದರು. ಆ ಹೋರಾಟವನ್ನು ಬೆಂಬಲಿಸಿ ಪ್ರಧಾನಿ ನರೇಂದ್ರ ಮೋದಿ ಜೀ ಅವರ ಸರಕಾರವು ಸುಪ್ರೀಂ ಕೋರ್ಟಿನಲ್ಲಿರುವ ಕೇಸಿಗೆ ಸರಕಾರದ ಅಭಿಪ್ರಾಯವನ್ನು ಅಟಾರ್ನಿ ಜನರಲ್ ಮತ್ತು ಸಾಲಿಸಿಟರ್ ಮೂಲಕ ತಿಳಿಸಿದೆ. ನನ್ನ ಸರಕಾರವು ಸಾಮಾಜಿಕ ನ್ಯಾಯ ಮತ್ತು ಒಳಮೀಸಲಾತಿಗೆ ಬದ್ಧ ಎಂದಿದೆ. ಇದೀಗ ಒಂದು ವರ್ಷವಾಗಿದೆ. ಒಳ ಮೀಸಲಾತಿ ನೀಡಲು ರಾಜ್ಯ ಸರಕಾರಕ್ಕೆ ಅಧಿಕಾರವಿದೆ. ಅತಿ ಹಿಂದುಳಿದವರಿಗೆ ನ್ಯಾಯ, ಸಂವಿಧಾನದ ಆಶಯಕ್ಕೆ ಅನುಗುಣವಾಗಿ ತೀರ್ಪನ್ನು ಸುಪ್ರೀಂ ಕೋರ್ಟ್ ನೀಡಿದೆ ಎಂದು ವಿವರಿಸಿದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,933/Gram24ct ₹9,105/Gram22ct ಬೆಳ್ಳಿ: ₹111.00/Gram

## ಸಿಬ್ಬಂದಿ ಮೇಲೆ ಮಾರಣಾಂತಿಕ ಹಲ್ಲೆ

• ಉದಯವಾಹಿನಿ, ಬೆಂಗಳೂರು

ಗ್ರಾಹಕರು ಹೆಚ್ಚುವರಿಯಾಗಿ ಕೇಳಿದ ಟೀ ಕಪ್ ಕೊಡಲು ನಿರಾಕರಿಸಿದ ಕೆಫೆ ಸಿಬ್ಬಂದಿ ಮೇಲೆ ಮಾರಣಾಂತಿಕ ಹಲ್ಲೆ ನಡೆದಿರುವ ಅಘಾತಕಾರಿ ಘಟನೆ ಬೆಂಗಳೂರಿನ ಶೇಷಾದ್ರಿಪುರಂ ನ ನಮ್ಮ ಫಿಲ್ಟರ್ ಕಾಫಿ ಶಾಪ್‌ನಲ್ಲಿ ವರದಿಯಾಗಿದೆ ನಾಲ್ವರು ದುಷ್ಕರ್ಮಿಗಳು ಕೆಫೆ ಸಿಬ್ಬಂದಿ ಮೇಲೆ ದರ್ಪ ತೋರಿದ್ದಾರೆ. ಜು.02 ರಂದು ಸಂಜೆ 6:50ರ ಸುಮಾರಿಗೆ ಈ ಘಟನೆ ನಡೆದಿದೆ. ಕಾಫಿ ಶಾಪ್‌ಗೆ ಬಂದಿದ್ದ ನಾಲ್ವರು ಕಾಫಿಯನ್ನು ಕೊಂಡು ಮತ್ತೊಂದು ಕಪ್ ಕೇಳಿದ್ದಾರೆ. ಈ ವೇಳೆ, ಹೋಟೆಲ್ ಸಿಬ್ಬಂದಿ ಕೊಡಲು ನಿರಾಕರಿಸಿದ್ದಾರೆ. ಕೆಫೆಯಲ್ಲಿ ಸಿಬ್ಬಂದಿ ಮೇಲೆ ಹಲ್ಲೆ: ನಿವೃತ್ತ ಡಿಜಿಪಿ ಓಂ ಪ್ರಕಾಶ್ ಪುತ್ರಿ ಕೃತಿಕಾರಿಂದ ದಾಂಧಲೆ: ಬ್ಯೂಟಿ ಪಾರ್ಲರ್ ಗೆ ನುಗ್ಗಿ ವಸ್ತುಗಳಿಗೆ ಹಾನಿ, ಸಿಬ್ಬಂದಿ ಮೇಲೆ ಹಲ್ಲೆ ಸಿಬ್ಬಂದಿಯ ಉತ್ತರದಿಂದ ತೀವ್ರ ಆಕ್ರೋಶಗೊಂಡ ನಾಲ್ವರು, ಸಿಬ್ಬಂದಿಗೆ ಅವಾಚ್ಯವಾಗಿ ನಿಂದಿಸಿ, ಹಿಗ್ಗಾಮುಗ್ಗಾ ಥಳಿಸಿದ್ದಾರೆ. ಕಪಾಳಕ್ಕೆ ಹೊಡೆದು, ಮುಖಕ್ಕೆ ಗುದ್ದಿ, ಕಾಲಿನಿಂದ ಹೊಟ್ಟೆಗೆ ಒದ್ದಿದ್ದಾರೆ. ಘಟನೆಯ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗತೊಡಗಿದೆ.

## ವಾಯುವಿಹಾರಕ್ಕೆ ಸಾಕು ನಾಯಿ ಕರೆದೊಯ್ಯುವ ವೇಳೆ ಗಲಾಟೆ

• ಉದಯವಾಹಿನಿ, ಬೆಂಗಳೂರು

ಬನಶಂಕರಿಯ ಕದಿರೇನಹಳ್ಳಿಯಲ್ಲಿ ವಾಯು ವಿಹಾರಕ್ಕೆ ನಾಯಿಯನ್ನು ಕರೆದೊಯ್ಯುವ ವೇಳೆ ಎರಡು ಕುಟುಂಬಗಳ ಮಧ್ಯೆ ಬೆಳಿಗ್ಗೆ ಗಲಾಟೆ ನಡೆದಿದೆ.ನಾಯಿ ಗಲೀಜು ಮಾಡಿದೆ ಎಂದು ಹೇಳಿದ್ದಕ್ಕೆ ಎರಡು ಕುಟುಂಬಸ್ಥರ ಮಧ್ಯೆ ಗಲಾಟೆ ಆಗಿದೆ. ಎರಡು ಕುಟುಂಬಗಳು ಬಡಿದಾಡಿಕೊಂಡು ಪೊಲೀಸ್ ಠಾಣೆ ಮೆಟ್ಟಿಲೇರಿದ್ದಾರೆ. ಯುವತಿ ಇಂದುಮತಿ ಅವರು ತಮ್ಮ ಮನೆಯ ಸಾಕು ನಾಯಿಯನ್ನು ವಾಯುವಿಹಾರಕ್ಕೆ ಕರೆದೊಯ್ಯುತ್ತಿದ್ದರು. ಆ ವೇಳೆ ವ್ಯಕ್ತಿಯೊಬ್ಬ, ಯಾಕೆ ನಿಮ್ಮ ನಾಯಿಯನ್ನು ಮನೆಯ ಎದುರು ಕರೆತಂದು ಗಲೀಜು ಮಾಡಿಸುತ್ತೀಯಾ ಎಂದು ಪ್ರಶ್ನಿಸಿದ್ದರು. ಆಗ ನಡೆದ ಗಲಾಟೆಯು ವಿಕೋಪಕ್ಕೆ ಹೋಗಿ ಪರಸ್ಪರ ಹೊಡೆದಾಡಿಕೊಂಡಿದ್ದಾರೆ. ಮಹಿಳೆಯರು ಪರಸ್ಪರ ತಲೆಕೂದಲು ಹಿಡಿದುಕೊಂಡು ಜಗಳ ಮಾಡಿಕೊಂಡಿದ್ದಾರೆ. ಚಪ್ಪಲಿಯಲ್ಲಿ ಬಡಿದಾಡಿಕೊಂಡಿದ್ದಾರೆ. ಜಗಳ ನಡೆಸುತ್ತಿರುವ ವಿಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ. ಈ ಕುರಿತು ಬನಶಂಕರಿ ಪೊಲೀಸ್ ಠಾಣೆಗೆ ದೂರು, ಪ್ರತಿದೂರು ನೀಡಲಾಗಿದೆ.

## ವಿದ್ಯಾರ್ಥಿಗಳಿಗೆ ಸಿಪಿಆರ್ ತರಬೇತಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಹೃದಯ, ಶ್ವಾಸಕೋಶದ ಪುನರುಜ್ಜೀವನ (ಸಿಪಿಆರ್) ಕೌಶಲವನ್ನು ಯುವಕರು ಅರಿಯುವುದರಿಂದ ಹೃದಯ ಸಂಬಂಧಿತ ತುರ್ತು ಪರಿಸ್ಥಿತಿ ಸಂದರ್ಭದಲ್ಲಿ ಪ್ರಾರಂಭಿಕ ಪ್ರಕ್ರಿಯೆಯನ್ನು ನಡೆಸಿದರೆ, ಹಲವು ಜೀವಗಳನ್ನು ಉಳಿಸಬಹುದು' ಎಂದು ಮಣಿಪಾಲ್ ಆಸ್ಪತ್ರೆ ನಿರ್ದೇಶಕ ಡಾ. ನಿರಂಜನ್ ರೈ ಹೇಳಿದರು.ಯುವ ಜನರಲ್ಲಿ ಹಠಾತ್ ಹೃದಯಾಘಾತ, ಹೃದಯ ಸ್ತಂಭನದಂತಹ ತುರ್ತು ಪರಿಸ್ಥಿತಿಗಳಲ್ಲಿ ಹೇಗೆ ಸ್ಪಂದಿಸಬೇಕು ಎಂಬ ಬಗ್ಗೆ ಮಣಿಪಾಲ್ ಹಾಸ್ಪಿಟಲ್ಸ್ ವತಿಯಿಂದ 200 ವಿದ್ಯಾರ್ಥಿಗಳಿಗೆ ಸಿಪಿಆರ್ ತರಬೇತಿ ಮೂಲಕ ತಿಳಿಸಿಕೊಡಲಾಯಿತು.

ಸಿಪಿಆರ್ ಅರಿಯುವುದರಿಂದ ತುರ್ತು ಸಂದರ್ಭದಲ್ಲಿ ಹೃದಯದ ಸಮಸ್ಯೆಗೆ ಒಳಗಾದವರನ್ನು ರಕ್ಷಿಸಬಹುದಾಗಿದೆ ಎಂದು ನಿರಂಜನ್ ಹೇಳಿದರು. ಯುವ ಜನರಲ್ಲಿ ಹೃದಯ ಸಂಬಂಧಿತ ಸಮಸ್ಯೆಗಳು ಹೆಚ್ಚುತ್ತಿದ್ದು, ತುರ್ತು ಸಂದರ್ಭಗಳಲ್ಲಿ ತ್ವರಿತವಾಗಿ ಮತ್ತು ಆತ್ಮವಿಶ್ವಾಸದಿಂದ ಕಾರ್ಯನಿರ್ವಹಿಸಲು ಅಗತ್ಯವಾದ ಕೌಶಲಗಳೊಂದಿಗೆ ಅವರನ್ನು ಸಜ್ಜುಗೊಳಿಸಬೇಕು ಎಂದು ಮಣಿಪಾಲ್ ಆಸ್ಪತ್ರೆಯ ತುರ್ತು ವೈದ್ಯಕೀಯ ವಿಭಾಗದ ಡಾ. ಹರ್ಷಿತಾ ಶ್ರೀಧರ್ ತಿಳಿಸಿದರು.

ಇತ್ತೀಚಿನ ಅಧ್ಯಯನಗಳ ಪ್ರಕಾರ, 50 ವರ್ಷಕ್ಕಿಂತ ಕಡಿಮೆ ವಯಸ್ಸಿನ ವ್ಯಕ್ತಿಗಳಲ್ಲಿ ಹೃದಯಾಘಾತ ಹೆಚ್ಚಾಗುತ್ತಿದೆ. ಜಡ ಜೀವನಶೈಲಿ, ಆಹಾರ ಪದ್ಧತಿ ಮತ್ತು ಹೆಚ್ಚಿದ ಒತ್ತಡ ಇದಕ್ಕೆ ಕಾರಣ. ಹೃದಯ ಸಂಬಂಧಿ ಘಟನೆಗಳ ಸಮಯದಲ್ಲಿ ತಕ್ಷಣದ ಪ್ರತಿಕ್ರಿಯೆ ನಿರ್ಣಾಯಕವಾಗಿದೆ. ಇದರ ಪ್ರಾಮುಖ್ಯವನ್ನು ಗುರುತಿಸಿದ ಮಣಿಪಾಲ್ ಆಸ್ಪತ್ರೆಯ ತಂಡ, ಈ ಕಾರ್ಯಕ್ರಮದ ಮೂಲಕ ವಿದ್ಯಾರ್ಥಿಗಳಿಗೆ ತುರ್ತು ಸಂದರ್ಭಗಳಲ್ಲಿ ತ್ವರಿತವಾಗಿ ಕಾರ್ಯನಿರ್ವಹಿಸಲು ಅಗತ್ಯ ಜ್ಞಾನ ಮತ್ತು ಕೌಶಲ ತಿಳಿಸಿಕೊಡುತ್ತಿದೆ' ಎಂದು ವೈದ್ಯರು ಹೇಳಿದರು.

## ಸಿದ್ದರಾಮಯ್ಯ ದೇಶ ಕಂಡ ಅತ್ಯಂತ ಶ್ರಮಜೀವಿ: ರಾಮಲಿಂಗಾರೆಡ್ಡಿ

• ಉದಯವಾಹಿನಿ, ಬೆಂಗಳೂರು

ನಂದಿಬೆಟ್ಟ ಸಿದ್ದರಾಮಯ್ಯ ಅತ್ಯಂತ ಶ್ರಮಶೀಲ ಮುಖ್ಯಮಂತ್ರಿ ಮತ್ತು ಅಭಿವೃದ್ಧಿ ಕಾರ್ಯಗಳನ್ನು ಅನುಷ್ಠಾನಗೊಳಿಸುವಲ್ಲಿ ಉತ್ಸುಕರಾಗಿರುವ ದೇಶದ ಅತ್ಯಂತ ಜನಪ್ರಿಯ ಮುಖ್ಯಮಂತ್ರಿಗಳಲ್ಲಿ ಒಬ್ಬರು ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಹೇಳಿದ್ದಾರೆ. ಸಂಪುಟ ಸಭೆಯ ನಂತರ ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್ ಜೊತೆ ಮಾತನಾಡಿದ ರಾಮಲಿಂಗಾ ರೆಡ್ಡಿ ನಂದಿ ಬೆಟ್ಟದಲ್ಲಿ ಸಂಪುಟ ಸಭೆ ನಡೆಸಲು ಸರ್ಕಾರ ನಿರ್ಧರಿಸಿರುವುದು ಮುಖ್ಯಮಂತ್ರಿ ರಾಜ್ಯದ ಎಲ್ಲಾ ಪ್ರದೇಶಗಳ ಅಭಿವೃದ್ಧಿಗೆ ಬದ್ಧವಾಗಿದೆ ಎಂದು ತೋರಿಸುತ್ತದೆ ಎಂದು ರೆಡ್ಡಿ ಹೇಳಿದರು. ಎಐಸಿಸಿ ಪ್ರಧಾನ ಕಾರ್ಯದರ್ಶಿ ಮತ್ತು ಕರ್ನಾಟಕದ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಪಕ್ಷದ ಶಾಸಕರೊಂದಿಗೆ ಪ್ರತ್ಯೇಕವಾಗಿ ಸಭೆ ನಡೆಸುತ್ತಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಯಾವುದೇ ಸಚಿವರನ್ನು ಸಭೆಗೆ ಕರೆದಿಲ್ಲ ಎಂದು ಹೇಳಿದರು. ಅವಕಾಶ ನೀಡಿದರೆ, ಬೆಂಗಳೂರಿನಲ್ಲಿರುವ ಉನ್ನತ ನಾಯಕರನ್ನು ಭೇಟಿಯಾಗುವುದಾಗಿ ಹೇಳಿದರು. ಕೆಲವು ಕಾಂಗ್ರೆಸ್ ಶಾಸಕರು ತಮ್ಮ ಅಸಮಾಧಾನವನ್ನು ಬಹಿರಂಗವಾಗಿ ವ್ಯಕ್ತಪಡಿಸಿದ ಬಗ್ಗೆ, ಪಕ್ಷದ ವ್ಯವಹಾರಗಳನ್ನು ಪಕ್ಷದ ನಾಲ್ಕು ಗೋಡೆಗಳ ಒಳಗೆ ಚರ್ಚಿಸಬೇಕು ಎಂದು ಸಚಿವರು ಹೇಳಿದರು. ಆದಾಗ್ಯೂ, ರಾಜ್ಯ ಕಾಂಗ್ರೆಸ್‌ನಲ್ಲಿ ಎಲ್ಲವೂ ಚೆನ್ನಾಗಿದೆ ಮತ್ತು ಹೈಕಮಾಂಡ್ ನಿರ್ಧಾರವು ಅಂತಿಮವಾಗಿದೆ ಎಂದು ಅವರು ಹೇಳಿದರು.

## ಬೈಕ್‌ಗೆ ಗೂಡ್ಸ್ ಲಾರಿ ಡಿಕ್ಕಿ; 19 ವರ್ಷದ ಸವಾರ ಸಾವು

• ಉದಯವಾಹಿನಿ, ಬೆಂಗಳೂರು

ದ್ವಿಚಕ್ರ ವಾಹನಕ್ಕೆ ಗೂಡ್ಸ್ ಲಾರಿ ಡಿಕ್ಕಿ ಹೊಡೆದು 19 ವರ್ಷದ ಯುವಕ ಮೃತಪಟ್ಟಿರುವ ಘಟನೆ ಮೈಸೂರು ರಸ್ತೆಯಲ್ಲಿ ನಡೆದಿದೆ. ಮೃತರನ್ನು ವಿನಯ್ ಬಿ ಎಂದು ಗುರುತಿಸಲಾಗಿದ್ದು, ಪೊಲೀಸರು ಟ್ರಕ್ ಚಾಲಕ ಮಹೇಶ್ ನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಸಂಜೆ 7.30ರಿಂದ 7.40ರ ನಡುವೆ ಈ ಘಟನೆ ನಡೆದಿದೆ. ವಿನಯ್ ಕೆಂಗೇರಿಯಿಂದ ಬಿಡದಿ ಕಡೆಗೆ ಬೈಕ್ ನಲ್ಲಿ ಹೋಗುತ್ತಿದ್ದಾಗ ಮಹೇಶ್ ಚಲಾಯಿಸುತ್ತಿದ್ದ ಗೂಡ್ಸ್ ಲಾರಿ (ಕೆಎ 25 ಎ 9445) ಡಿಕ್ಕಿ ಹೊಡೆದಿದೆ. ಇದರಿಂದಾಗಿ ವಿನಯ್ ಕೆಳಗೆ ಬಿದಿದ್ದಾರೆ. ಬೈಕ್ ಎಡಕ್ಕೆ ಬಿದ್ದರೆ, ವಿನಯ್ ಬಲಭಾಗದಲ್ಲಿ ಬಿದ್ದಿದ್ದಾರೆ. ಲಾರಿ ಹಿಂಭಾಗದ ಎಡ ಚಕ್ರವು ಅವರನ್ನು 20 ಮೀಟರ್‌ಗೂ ಹೆಚ್ಚು ದೂರ ಎಳೆದುಕೊಂಡು ಹೋಗಿದ್ದು, ತೀವ್ರ ಗಾಯಗಳಾಗಿತ್ತು. ತಲೆ, ಮುಖ ಮತ್ತು ಕೈಗಳಿಗೆ ಗಂಭೀರ ಗಾಯಗಳಾಗಿ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ ಎಂದು ಕೆಂಗೇರಿ ಸಂಚಾರ ಪೊಲೀಸರು ತಿಳಿಸಿದ್ದಾರೆ. ನಿರ್ಲಕ್ಷ್ಯದಿಂದ ಸಾವಿಗೆ ಕಾರಣವಾದ ಲಾರಿ ಚಾಲಕನ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ

## ಫ.ಗು. ಹಳಕಟ್ಟಿ ಅವರಿಗೆ ಮರಣೋತ್ತರವಾಗಿ ಬಸವ ಶ್ರೀ ಪ್ರಶಸ್ತಿ ನೀಡಬೇಕು

• ಉದಯವಾಹಿನಿ, ಬೆಂಗಳೂರು

ವಚನ ಸಾಹಿತ್ಯದ ರಕ್ಷಣೆ, ವಚನಗಳ ಸಂಗ್ರಹ, ಪ್ರಚಾರ ಕಾರ್ಯಕ್ಕೆ ಸಂಬಂಧಿಸಿದಂತೆ ಫ.ಗು. ಹಳಕಟ್ಟಿ ಅವರಿಗೆ ಮರಣೋತ್ತರವಾಗಿ ಬಸವಶ್ರೀ ಪ್ರಶಸ್ತಿ ನೀಡಿ ಗೌರವಿಸಬೇಕು ಎಂದು ಕಾನೂನು ಸಚಿವ ಎಚ್.ಕೆ.ಪಾಟೀಲ ಹೇಳಿದರು.ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು, ಕರ್ನಾಟಕ ಗಾಂಧೀ ಸ್ಮಾರಕ ನಿಧಿ ಮತ್ತು ಶಂಕರ ಬಿದರಿ ಫೌಂಡೇಷನ್ ನಗರದಲ್ಲಿ ಬುಧವಾರ ಹಮ್ಮಿಕೊಂಡಿದ್ದ ವಚನ ಪಿತಾಮಹ ಫ.ಗು.ಹಳಕಟ್ಟಿ ಅವರ ಜನ್ಮ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿದರು.

'ಫ.ಗು. ಹಳಕಟ್ಟಿ ಅವರು ವಚನ ಪಿತಾಮಹ ಎಂದೇ ಖ್ಯಾತರಾಗಿದ್ದಾರೆ. ಅವರು ಸ್ಥಾಪಿಸಿರುವ ಸಂಘ, ಸಂಸ್ಥೆಗಳು


ಉದಯವಾಹಿನಿ ಚಿತ್ರ

ಇಂದಿಗೂ ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಜನಮನ್ನಣೆ ಪಡೆದಿವೆ. ಅವರ ಕಾರ್ಯಕ್ಷೇತ್ರ ವಿಸ್ತಾರವಾಗಿತ್ತು. ಅವರು ಯೋಜಿಸದ, ಸಾಧಿಸದ ಸಾರ್ವಜನಿಕ ಕ್ಷೇತ್ರವಿಲ್ಲ. ಹಸಿವಿನಿಂದ ಬಳಲುವ ಜನರಿಗೆ ನೆರವಾಗಲು ಬರನಿರೋಧಕ ಸಮಿತಿ ಸ್ಥಾಪಿಸಿದ್ದರು ಎಂದು ಸ್ಮರಿಸಿಕೊಂಡರು. ವಚನ ಸಾಹಿತ್ಯವನ್ನು ಶೋಧಿಸಿ, ಅನ್ವೇಷಿಸಿ ಪ್ರಕಟಿಸುವ ಮೂಲಕ ಸಂಶೋಧನಾ ಕ್ಷೇತ್ರಕ್ಕೆ ದೊಡ್ಡ ಕೊಡುಗೆ ನೀಡಿದ್ದಾರೆ. ದಕ್ಷಿಣ ಕರ್ನಾಟಕ ಭಾಗದಲ್ಲಿ ಇವರ ಕಾರ್ಯಗಳು ಹೆಚ್ಚು ಪ್ರಚಾರವಾಗಬೇಕು. ಮರಾಠಿ ಪ್ರದೇಶದೊಳಗೆ ಕನ್ನಡ ಶಾಲೆಗಳನ್ನು ಕಟ್ಟಿಸಿದ್ದನ್ನು ಮರೆಯುವಂತಿಲ್ಲ. ಹಳಕಟ್ಟಿ ಅವರ ಮೂಲ ಪುಸ್ತಕಗಳನ್ನು ಡಾ.ಫ.ಗು.ಹಳಕಟ್ಟಿ ಸಂಶೋಧನಾ ಕೇಂದ್ರದಲ್ಲಿ ಸಂರಕ್ಷಿಸಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸುತ್ತೂರು ಮಠದ ಶಿವರಾತ್ರಿ ದೇಶಿ ಕೇಂದ್ರ ಸ್ವಾಮೀಜಿ, ಕರ್ನಾಟಕ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಚಂದ್ರಕಾಂತ ಬೆಲ್ಲದ, ಗಾಂಧೀ ಸ್ಮಾರಕ ನಿಧಿ ಅಧ್ಯಕ್ಷ ವೂಡೇ ಪಿ.ಕೃಷ್ಣ, ಶಂಕರ ಬಿದರಿ ಫೌಂಡೇಷನ್ ಅಧ್ಯಕ್ಷ ಶಂಕರ ಬಿದರಿ, ಡಾ.ಫ.ಗು.ಹಳಕಟ್ಟಿ ಸಂಶೋಧನಾ ಕೇಂದ್ರದ ಮಹಾಂತೇಶ ಬಿರಾದಾರ, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸಿ.ಸೋಮಶೇಖರ್ ಉಪಸ್ಥಿತರಿದ್ದರು.

# ಬೆಂಗಳೂರಿನ ಎಚ್‌ಸಿಜಿ ಆಸ್ಪತ್ರೆ ಮೇಲೆ ಗಂಭೀರ ಆರೋಪ

## ಆರೋಗ್ಯ ಇಲಾಖೆ ಆಯುಕ್ತರು, ಭಾರತೀಯ ಪ್ರಧಾನ ಔಷಧ ನಿಯಂತ್ರಕರಿಗೆ ಮನವಿ

• ಉದಯವಾಹಿನಿ, ಬೆಂಗಳೂರು

ನಗರದ ಹೆಲ್ತ್ ಕೇರ್ ಗ್ಲೋಬಲ್ ಎಂಟರ್‌ಪ್ರೈಸಸ್‌ನಲ್ಲಿ (ಎಚ್‌ಸಿಜಿ) ನ್ಯಾಯಯುತವಲ್ಲದ ವೈದ್ಯಕೀಯ ಪ್ರಯೋಗ ನಡೆಸುತ್ತಿರುವ ಬಗ್ಗೆ ಆರೋಪಗಳು ಕೇಳಿ ಬಂದಿದ್ದು, ಈ ಬಗ್ಗೆ ಪರಿಶೀಲನೆ ನಡೆಸುವುದಕ್ಕೆ ಕೇಂದ್ರ ಔಷಧ ಗುಣಮಟ್ಟ ನಿಯಂತ್ರಣ ಸಂಸ್ಥೆ (ಸಿಡಿಎಸ್‌ಸಿಒ)ಯ ಅಧಿಕಾರಿಗಳನ್ನು ನೇಮಿಸಿ ಸರಕಾರ ಆದೇಶ ಹೊರಡಿಸಿದೆ.

ಕೇಂದ್ರ ಸಹಾಯಕ ಔಷಧ ನಿಯಂತ್ರಕ ಡಾ. ಬಿಕಾಶ್ ರಾಯ್ ಮತ್ತು ಸಿಡಿಎಸ್‌ಸಿಒ ಬೆಂಗಳೂರು ವಲಯ ಕಚೇರಿ ಔಷಧ ನಿರೀಕ್ಷಕಿ ಸುನಿತಾ ಜೋಶಿ ಜತೆ ಸಿಡಿಎಸ್‌ಸಿಒದಿಲ್ಲಿ ಪ್ರಧಾನ ಕಚೇರಿಯ ಅಧಿಕಾರಿಗಳು ಮತ್ತು ವಿಷಯ ತಜ್ಞರನ್ನು ಒಳಗೊಂಡ ಸಮಿತಿ ರಚಿಸಿದೆ. ಈ ಸಮಿತಿ ಜು.3 ರಿಂದ 5ರವರೆಗೆ ಎಚ್‌ಸಿಜಿ ಆಸ್ಪತ್ರೆಯಲ್ಲಿ ಪರಿಶೀಲನೆ ನಡೆಸಲಿದೆ. ಎಚ್‌ಸಿಜಿ ಸಂಸ್ಥೆಯಲ್ಲಿ ನ್ಯಾಯಯುತವಲ್ಲದ ವೈದ್ಯಕೀಯ ಪ್ರಯೋಗ ನಡೆಸುತ್ತಿರುವ ಬಗ್ಗೆ ಆರೋಪಗಳು ಕೇಳಿ ಬಂದಿದ್ದು, ಈ ಬಗ್ಗೆ ತನಿಖೆ ನಡೆಸುವಂತೆ ಆರೋಗ್ಯ ಇಲಾಖೆ ಆಯುಕ್ತರು, ಭಾರತೀಯ ಪ್ರಧಾನ ಔಷಧ ನಿಯಂತ್ರಕರಿಗೆ ಮನವಿ ಮಾಡಿದ್ದರು.ಎಚ್‌ಸಿಜಿಯ ಸಾಂಸ್ಥಿಕ ನೀತಿ ಸಮಿತಿಯ ಮಾಜಿ ಮುಖ್ಯಸ್ಥ, ನಿವೃತ್ತ ನ್ಯಾಯಮೂರ್ತಿ ಪಿ. ಕೃಷ್ಣ ಭಟ್ ಅವರು ಎಚ್‌ಸಿಜಿ ಸಂಸ್ಥೆಯಲ್ಲಿ



ಉದಯವಾಹಿನಿ ಚಿತ್ರ

ನಡೆಯುತ್ತಿರುವ ವೈದ್ಯಕೀಯ ಪ್ರಯೋಗಕ್ಕೆ ಸಂಬಂಧಿಸಿದಂತೆ ಆರೋಪಿಸಿದ್ದಾರೆ. ಈ ವಿಷಯವಾಗಿ ಪತ್ರ ಮುಖೇನ, ಖುದ್ದು ಹಲವು ಬಾರಿ ಆಸ್ಪತ್ರೆಯ ಆಡಳಿತ ಮಂಡಳಿ ಗಮನಕ್ಕೆ ತಂದು ಸರಿಪಡಿಸುವ ಕೆಲಸ ಮಾಡಲು ಯತ್ನಿಸಿದರೂ, ಆಸ್ಪತ್ರೆಯಲ್ಲಿ ಆ ವಿಚಾರವನ್ನೇ ಮುಚ್ಚಿಹಾಕುವ ಪ್ರಯತ್ನ ನಡೆದಿದೆ ಎನ್ನಲಾಗಿದೆ.

ಗಂಭೀರ ಆರೋಪ ಕೇಳಿ ಬರುತ್ತಿದ್ದಂತೆಯೇ, ಕ್ಯಾನ್ಸರ್ ಆಸ್ಪತ್ರೆ ಎಚ್‌ಸಿಜಿ ವಿರುದ್ಧ ತನಿಖೆ ನಡೆಸುವಂತೆ ಒತ್ತಾಯಿಸಿ ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತರು ಕೇಂದ್ರೀಯ ಔಷಧ ಗುಣಮಟ್ಟ ನಿಯಂತ್ರಣ ಸಂಸ್ಥೆ (ಸಿಡಿಎಸ್‌ಸಿಒ) ಅಧೀನದ ಭಾರತೀಯ ಔಷಧ ನಿರ್ದೇಶನಾಲಯಕ್ಕೆ ಪತ್ರ ಬರೆದಿದ್ದಾರೆ. ಇದರಿಂದ ಬೇಸತ್ತು ನ್ಯಾ. ಪಿ. ಕೃಷ್ಣಭಟ್ ಅವರು ನೈತಿಕ ಸಮಿತಿ ಮುಖ್ಯಸ್ಥ ಹುದ್ದೆಗೆ ರಾಜೀನಾಮೆ ನೀಡಿದ್ದಾರೆ. ಗಂಭೀರ ಆರೋಪಗಳ ಬೆನ್ನಲ್ಲೇ ಆಸ್ಪತ್ರೆಯ ಸಿಇಒ, ನಿರ್ದೇಶಕರು ಪದತ್ಯಾಗ ಮಾಡಿದ್ದಾರೆ. ಸಾಲು ಸಾಲಾಗಿ ವೈದ್ಯರು ಕೂಡ ರಾಜೀನಾಮೆ ಸಲ್ಲಿಸಿದ್ದಾರೆ ಎನ್ನಲಾಗಿದೆ.

> 2023ರಲ್ಲಿ ಅಮೆರಿಕ ಮೂಲದ ಔಷಧೀಯ ದಿಗ್ಗಜ ಎಲಿ ಲಿಲ್ಲಿ ಸಂಸ್ಥೆ, ಕ್ಲಿನಿಕಲ್ ಟ್ರಯಲ್‌ಗೆ ಆರ್ಥಿಕವಾಗಿ ಹಿಂದುಳಿದಿರುವ ಬಡ ರೋಗಿಗಳನ್ನು ಬಳಸುತ್ತಿರುವ ಕುರಿತು ಶಿಷ್ಟಾಚಾರ ಉಲ್ಲಂಘನೆ ಉಲ್ಲೇಖಿಸಿ, ಎಚ್‌ಸಿಜಿಯೊಂದಿಗಿನ ಕ್ಲಿನಿಕಲ್ ಅಧ್ಯಯನ ಸ್ಥಗಿತಗೊಳಿಸಿತ್ತು. ಈ ಬೆಳವಣಿಗೆ ನಂತರ, ಎಚ್‌ಸಿಜಿಯಲ್ಲಿ ನಡೆಸಲಾಗುತ್ತಿರುವ ಪ್ರಯೋಗಗಳ ಸ್ಥಿತಿಗತಿ, ನಿಯಮಾನುಸಾರ ಪ್ರಕ್ರಿಯೆಗಳ ಪ್ರಾಮಾಣಿಕತೆ ಹಾಗೂ ರೋಗಿಗಳ ಸುರಕ್ಷತೆ ಕುರಿತು ಕಳವಳಗಳು ಹೆಚ್ಚಾಗಿವೆ.

- ಬೆಂಗಳೂರು ನಗರದಲ್ಲಿ ಹೆಲ್ತ್ ಕೇರ್ ಗ್ಲೋಬಲ್ ಎಂಟರ್‌ಪ್ರೈಸಸ್ ಮೇಲೆ ಗಂಭೀರ ಆರೋಪ
- ಆಸ್ಪತ್ರೆ ವಿರುದ್ಧ ನ್ಯಾಯಯುತವಲ್ಲದ ವೈದ್ಯಕೀಯ ಪ್ರಯೋಗ ನಡೆಸಲಾಗಿದೆ ಎಂದು ಆಕ್ಷೇಪ
- ಪರಿಶೀಲನೆ ನಡೆಸಲು ಸಮಿತಿ ರಚಿಸಿದೆ ಕೇಂದ್ರ ಔಷಧ ಗುಣಮಟ್ಟ ನಿಯಂತ್ರಣ ಸಂಸ್ಥೆ (ಸಿಡಿಎಸ್‌ಸಿಒ)


ಕ್ಯಾನ್ಸರ್ ಚಿಕಿತ್ಸೆಗೆ ಹಣ ಹೊಂದಿಸಲು ಸಾಧ್ಯವಾಗದ ಬಡ ರೋಗಿಗಳನ್ನು ಕ್ಲಿನಿಕಲ್ ಟ್ರಯಲ್‌ಗೆ ಎಚ್‌ಸಿಜಿ ಆಸ್ಪತ್ರೆ ಸೆಳೆಯುತ್ತಿತ್ತು ಎಂಬ ಆಘಾತಕಾರಿ ಅಂಶವೂ ಪ್ರಕರಣದಲ್ಲಿ ಬೆಳಕಿಗೆ ಬಂದಿದೆ. ಕ್ಲಿನಿಕಲ್ ಟ್ರಯಲ್ ವೇಳೆ ಸಂಭವಿಸುವ ರೋಗಿಗಳ ಸಾವಿಗೆ ಸಂಬಂಧಿಸಿದ ವರದಿ ಮಾಡುವ ವಿಚಾರದಲ್ಲಿ ಮಾರ್ಗಸೂಚಿಗಳಿಗೆ ಆಸ್ಪತ್ರೆ ಬದ್ಧವಾಗಿಲ್ಲ. ಇದು ವಿಶ್ವ ಆರೋಗ್ಯ ಸಂಸ್ಥೆಯ ಸೂಚನೆಗೆ ವಿರುದ್ಧ ಎಂದು ನ್ಯಾ. ಕೃಷ್ಣ ಭಟ್ ಎತ್ತಿ ತೋರಿಸಿದ್ದರು. ಇಂತಹ ನಿಯಮ ಉಲ್ಲಂಘನೆಗಳು ಆಸ್ಪತ್ರೆಯ ಪ್ರತಿಷ್ಠೆಗೆ ಕುಂದು ತರುತ್ತವೆ. ಔಷಧ ಕಂಪನಿಗಳು ಸಹಯೋಗದಿಂದ ಹಿಂದೆ ಸರಿಯಬಹುದು ಎಂದು ಎಚ್ಚರಿಸಿದ್ದರು.

## ರೈತ ಹೋರಾಟಕ್ಕೆ ಸಾಹಿತಿಗಳು, ಸಿನಿಮಾ ಕಲಾವಿದರ ಬೆಂಬಲ

• ಉದಯವಾಹಿನಿ, ಬೆಂಗಳೂರು

ದೇವನಹಳ್ಳಿಯಲ್ಲಿ 13 ಹಳ್ಳಿಗಳ ರೈತರ 1,777 ಎಕರೆ ಜಮೀನು ಸ್ವಾಧೀನ ಮಾಡಿಕೊಳ್ಳುವುದನ್ನು ವಿರೋಧಿಸಿ ರೈತರು ನಡೆಸುತ್ತಿರುವ ಹೋರಾಟಕ್ಕೆ ಬುಧವಾರ ಸಾಹಿತಿಗಳು, ಕನ್ನಡ ಚಿತ್ರರಂಗದ ಕಲಾವಿದರು ಬೆಂಬಲ ವ್ಯಕ್ತಪಡಿಸಿದ್ದಾರೆ. ಸಾಹಿತಿ ರಹಮತ್ ತರೀಕೆರೆ ಮಾತನಾಡಿ, ರೈತರು ಭೂಮಿ ಕೊಡುವುದಿಲ್ಲ ಎಂದಾಗ ಸರ್ಕಾರ ಕಿತ್ತುಕೊಳ್ಳುವ ಕೆಲಸ ಮಾಡಬಾರದು. ಇದು ರೈತರ ಹೋರಾಟ ಮಾತ್ರವಲ್ಲ, ಎಲ್ಲಾ ಕನ್ನಡಿಗರ, ಹೊಟ್ಟೆಗೆ ಅನ್ನ ತಿನ್ನುವವರ ಹೋರಾಟ' ಎಂದು ಸಾಹಿತಿ ರಹಮತ್ ತರೀಕೆರೆ ತಿಳಿಸಿದರು.

ರೈತರು ಈಗಾಗಲೇ ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಸರ್ಕಾರಗಳು ಈ ಬಗ್ಗೆ ಚರ್ಚೆ ಮಾಡದೇ, ಭೂಮಿ ಹೇಗೆ ಕಿತ್ತುಕೊಳ್ಳಬೇಕೆಂದು ಯೋಚಿಸುತ್ತಿದೆ. ಜುಲೈ 4ರಂದು ರೈತರ ಪರವಾಗಿ ತೀರ್ಮಾನವಾಗಬೇಕು ಎಂದು ಆಗ್ರಹಿಸಿದರು. ನಟ ಕಿಶೋರ್ ಕುಮಾರ್ ಮಾತನಾಡಿ, ಅಭಿವೃದ್ಧಿ ಹೆಸರಲ್ಲಿ ರಿಯಲ್ ಎಸ್ಟೇಟ್ ದಂಧೆ ನಡೆಯುತ್ತಿದೆ. ನಮ್ಮ ಅನ್ನದ ಮೇಲೆ ದಾಳಿ ನಡೆಯುತ್ತಿದೆ. ಸಣ್ಣ ರೈತರ ಕೈಯಲ್ಲಿರುವ ಭೂಮಿಯನ್ನು ಕಿತ್ತುಕೊಳ್ಳಲಾಗುತ್ತಿದೆ. ರೈತರು ಹೊಲ, ಗದ್ದೆಗಳಲ್ಲಿ ಮಾಡುವ ಕೌಶಲಪೂರ್ಣ


ಉದಯವಾಹಿನಿ ಚಿತ್ರ

> ಚಿತ್ರ ಸಾಹಿತಿ ಕವಿರಾಜ್ ಮಾತನಾಡಿ, ರೈತರ ಭೂಮಿಯನ್ನು ಕಿತ್ತುಕೊಳ್ಳುವ ಮೂಲಕ ಇಡೀ ಸಮಾಜದ ಅನ್ನವನ್ನು ಕಸಿಯಲಾಗುತ್ತಿದೆ. ಕಾರ್ಪೊರೇಟ್ ಲಾಬಿ ನಮ್ಮನ್ನು ಆಳುತ್ತಿದೆ. ಇದರ ವಿರುದ್ಧ ಸಮಗ್ರ ಹೋರಾಟ ಮಾಡಬೇಕು ಎಂದರು. ಚಿತ್ರ ನಿರ್ದೇಶಕರ ನಂಜುಂಡೇಗೌಡ ಮಾತನಾಡಿ, ಅನ್ನ ನೀಡುವ ರೈತರ ಹೋರಾಟವನ್ನು ಚಿತ್ರರಂಗ ಸದಾ ಬೆಂಬಲಿಸುತ್ತದೆ. ನೆಲ, ಜಲ, ಆಹಾರ, ಭಾಷೆ ಮೇಲಿನ ದಾಳಿಗಳನ್ನು ಸಹಿಸುವುದಿಲ್ಲ ಎಂದು ತಿಳಿಸಿದರು.

ಕೆಲಸಗಳನ್ನು ಕಾರ್ಖಾನೆಗಳಿಂದ ಕೊಡಲು ಸಾಧ್ಯವಿಲ್ಲ. ಕಾರ್ಖಾನೆಗಳಲ್ಲಿ ಅನ್ನ ಬೆಳೆಯಲು ಸಾಧ್ಯವಿಲ್ಲ' ಎಂದು ಹೇಳಿದರು. ನಿರ್ದೇಶಕರಾದ ರಾಜೇಂದ್ರಸಿಂಗ್ ಬಾಬು, ಟಿ.ಎನ್. ಸೀತಾರಾಮ್, ನಾಗತೀಹಳ್ಳಿ ಚಂದ್ರಶೇಖರ್, ವಿಜಯಲಕ್ಷ್ಮಿಸಿಂಗ್, ಗಿರೀಶ್ ಕಾಸರವಳ್ಳಿ, ಪಿ.ಶೇಷಾದ್ರಿ, ಬಹುಭಾಷಾ ನಟ ಪ್ರಕಾಶ್ ರಾಜ್, ನಟಿ ಅಕ್ಷತಾ ಪಾಂಡವಪುರ ಹೋರಾಟದಲ್ಲಿ ಪಾಲ್ಗೊಂಡರು.

ಹೋರಾಟಗಾರರಾದ ಶಿವಸುಂದರ್, ಸಾಹಿತಿ ಕೆ.ಪಿ. ಸುರೇಶ್, ವೀರಸಂಗಯ್ಯ, ಬಿ.ಟಿ. ಲಲಿತಾ ನಾಯಕ್, ನೂರ್ ಶ್ರೀಧರ್, ವಿ. ನಾಗರಾಜ್, ಗುರುಪ್ರಸಾದ್ ಕೆರೆಗೋಡು, ಇಂದೂಧರ ಹೊನ್ನಾಪುರ, ಬಡಗಲಪುರ ನಾಗೇಂದ್ರ, ಕೆ.ವಿ. ಭಟ್ ಉಪಸ್ಥಿತರಿದ್ದರು.

### ಉಪವಾಸ ಸತ್ಯಾಗ್ರಹ

ಸಂಯುಕ್ತ ಹೋರಾಟ-ಕರ್ನಾಟಕದ ಡಿ.ಎಚ್. ಪೂಜಾರಿ ಯಶವಂತ ಚುಕ್ಕಿ ನಂಜುಂಡಸ್ವಾಮಿ ಎಸ್.ವರಲಕ್ಷ್ಮೀ ದೇವಿ ಲಕ್ಷ್ಮಣ ಮಂಡಲಗೇರಾ ಮಲ್ಲಿಗೆ ಸಿರಿಮನೆ ಮತ್ತು ಪ್ರಭಾ ಬೆಳವಂಗಲ ಬುಧವಾರ ಉಪವಾಸ ಸತ್ಯಾಗ್ರಹ ನಡೆಸಿದರು.

## ಆಗಸ್ಟ್‌ನಲ್ಲಿ ಹಳದಿ ಮಾರ್ಗ ಸಂಚಾರ ಆರಂಭ ಸಾಧ್ಯತೆ

• ಉದಯವಾಹಿನಿ, ಬೆಂಗಳೂರು

ಬಹಳ ದಿನಗಳಿಂದ ವಿಳಂಬವಾಗಿರುವ ನಮ್ಮ ಮೆಟ್ರೋದ ಹಳದಿ ಮಾರ್ಗದಲ್ಲಿ ಆಗಸ್ಟ್ ಆರಂಭದಲ್ಲಿ ಸಂಚಾರ ಆರಂಭವಾಗುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ. 19.15-ಕಿಮೀ ಉದ್ದದ ಈ ಮಾರ್ಗವು ಬೊಮ್ಮಸಂದ್ರದಿಂದ ಜಯದೇವ ಆಸ್ಪತ್ರೆ, ಸಿಲ್ಕ್ ಬೋರ್ಡ್ ಜಂಕ್ಷನ್, ಎಲೆಕ್ಟ್ರಾನಿಕ್ಸ್ ಸಿಟಿ ಮೂಲಕ ಆರ್‌ವಿ ರಸ್ತೆಯನ್ನು ಸಂಪರ್ಕಿಸುತ್ತದೆ. ರೈಲುಗಳ ಕೊರತೆಯಿಂದಾಗಿ ಇದರ ಉದ್ಘಾಟನೆ ವಿಳಂಬವಾಗಿದೆ. ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ ಪ್ರಸ್ತುತ ಕೇವಲ ಮೂರು ರೈಲು ಹೊಂದಿದೆ. ಇವು ಪ್ರತಿ 25 ನಿಮಿಷಗಳಿಗೊಮ್ಮೆ ಚಲಿಸಲಿದ್ದು, ಎಲ್ಲಾ 16 ನಿಲ್ದಾಣಗಳಲ್ಲಿ ನಿಲ್ಲುತ್ತವೆ.


ಬಿಎಂಆರ್‌ಸಿಎಲ್ ಈ ಮಾರ್ಗದಲ್ಲಿ ಚಾಲಕರಹಿತ ರೈಲುಗಳ ಕಾರ್ಯಾಚರಣೆಗೆ ಸಿದ್ಧತೆ ನಡೆಸಿದ್ದು, ಸಿಗ್ನಲಿಂಗ್ ಪರೀಕ್ಷೆ ಮೌಲ್ಯೀಕರಿಸಲು ಸ್ವತಂತ್ರ ಸುರಕ್ಷತಾ ಮೌಲ್ಯಮಾಪನ (ISA) ಪ್ರಮಾಣೀಕರಣದ ಅಗತ್ಯವಿದೆ. ಈ ಮಾರ್ಗದ ಸಿಗ್ನಲಿಂಗ್ ಪರೀಕ್ಷೆ ಗುತ್ತಿಗೆದಾರರಾಗಿರುವ ಸೀಮೆನ್ಸ್ ಇಂಡಿಯಾ ಲಿಮಿಟೆಡ್‌ನ ಸೀಮೆನ್ಸ್ AG,


ಉದಯವಾಹಿನಿ ಚಿತ್ರ

ISA ಪ್ರಮಾಣೀಕರಣಕ್ಕಾಗಿ ಜುಲೈ 7 ಅಥವಾ 8 ರೊಳಗೆ ಮೌಲ್ಯಮಾಪಕರಿಗೆ ಕರಡು ವರದಿಯನ್ನು ಸಲ್ಲಿಸುವ ಸಾಧ್ಯತೆಯಿದೆ. ನಂತರ ಬಿಎಂಆರ್‌ಸಿಎಲ್ ಶಾಸನಬದ್ಧ ಸುರಕ್ಷತಾ ತಪಾಸಣೆ ನಡೆಸಲು ಮೆಟ್ರೋ ರೈಲ್ವೆ ಸುರಕ್ಷತೆ (ದಕ್ಷಿಣ ವೃತ್ತ) ಆಯುಕ್ತರನ್ನು ಸಂಪರ್ಕಿಸುತ್ತದೆ. ಜುಲೈ 15ರ ನಂತರ ಸುರಕ್ಷತಾ ತಪಾಸಣೆ ನಡೆಯಲಿದೆ. ಇದು ಮೂರರಿಂದ ನಾಲ್ಕು ದಿನಗಳನ್ನು ತೆಗೆದುಕೊಳ್ಳಲಿದೆ ಎಂದು ಬಿಎಂಆರ್‌ಸಿಎಲ್ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಸಂಸತ್ತಿನ ಮುಂಗಾರು ಅಧಿವೇಶನಕ್ಕೆ ಉದ್ಘಾಟನಾ ಸಮಾರಂಭದ ದಿನಾಂಕ ಅಡ್ಡಿಯಾಗದಿದ್ದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸುವ ಸಾಧ್ಯತೆಯಿದೆ. ಸದ್ಯಕ್ಕೆ ಸಿಲ್ಕ್ ಬೋರ್ಡ್ ಬಳಿಯ ಕೆಎಸ್‌ಆರ್‌ಪಿ ಮೈದಾನದಲ್ಲಿ ಸಮಾರಂಭವನ್ನು ನಡೆಸಲು ಬಿಎಂಆರ್ ಸಿಎಲ್ ಯೋಜಿಸಿದೆ.

> ಎಲ್ಲಾ 16 ನಿಲ್ದಾಣಗಳಲ್ಲಿ ಹಳಿ ತಪಾಸಣೆ ಸೇರಿದಂತೆ ವಿವಿಧ ಪರೀಕ್ಷೆ ನಡೆಸಲಾಗುತ್ತದೆ. ಬೈಯಪ್ಪನಹಳ್ಳಿ ಡಿಪೋದಲ್ಲಿನ ಆಪರೇಷನಲ್ ಕಂಟ್ರೋಲ್ ಸೆಂಟರ್ (ಒಸಿಸಿ) ಗೆ ಭೇಟಿ ನೀಡಲು ಒಂದು ದಿನವನ್ನು ಮೀಸಲಿಡಲಾಗುವುದು ಎಂದು ಅಧಿಕಾರಿ ತಿಳಿಸಿದ್ದಾರೆ. ಜುಲೈ ಅಂತ್ಯದೊಳಗೆ ಎಲ್ಲಾ ಪ್ರಕ್ರಿಯೆ ಪೂರ್ಣಗೊಂಡು ಆಗಸ್ಟ್ ಮೊದಲ ವಾರದಲ್ಲಿ ಸಂಚಾರ ಆರಂಭವಾಗಲಿದೆ ಎಂದು ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕ ಎಂ ಮಹೇಶ್ವರ್ ರಾವ್ ತಿಳಿಸಿದ್ದಾರೆ.

## ಧರ್ಮಕ್ಕೆ ಸಂಬಂಧಿಸಿದ ಅಪರಾಧಗಳ ಸಂಖ್ಯೆಯಲ್ಲಿ ಗಣನೀಯ ಏರಿಕೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಒಂದು ಕಾಲದಲ್ಲಿ ಸರ್ವ ಜನಾಂಗದ ಶಾಂತಿಯ ತೋಟ ಎಂದು ಹೆಸರಾಗಿದ್ದ ಕರ್ನಾಟಕದಲ್ಲಿ ಧರ್ಮಕ್ಕೆ ಸಂಬಂಧಿಸಿದ ಅಪರಾಧಗಳ ಸಂಖ್ಯೆಯಲ್ಲಿ ಗಣನೀಯವಾಗಿ ಏರಿಕೆಯಾಗಿದೆ. ಧರ್ಮದ ಹೆಸರಿನಲ್ಲಿ ಹತ್ಯೆ, ಹಲ್ಲೆ, ದೌರ್ಜನ್ಯದಂತಹ ದುಷ್ಕೃತ್ಯಗಳು ನಿರಂತರವಾಗಿ ಮುಂದುವರೆದಿವೆ. 2021 ರಲ್ಲಿ 208 ರಷ್ಟಿದ್ದ ಇಂತಹ ಪ್ರಕರಣಗಳು 2024ರಲ್ಲಿ 345ರಷ್ಟು ಅಂದರೆ ಶೇ. 64. 87 ರಷ್ಟು ಏರಿಕೆಯಾಗಿದೆ.

**ಈ ವರ್ಷದ ಮೇ ವರೆಗೂ 123 ಪ್ರಕರಣ ದಾಖಲು:** ರಾಜ್ಯ ಅಪರಾಧ ದಾಖಲೆ ಬ್ಯೂರೋ ಮಾಹಿತಿ ಪ್ರಕಾರ, ಈ ವರ್ಷದ ಮೇ ವರೆಗೆ ರಾಜ್ಯದಾದ್ಯಂತ ಒಟ್ಟು 123 ಪ್ರಕರಣಗಳು ವರದಿಯಾಗಿವೆ. ಕೋಮು, ಧಾರ್ಮಿಕ ಗಲಭೆಗಳ ಪ್ರಕರಣಗಳ ಸಂಖ್ಯೆಯಲ್ಲಿ ಶೇ. 133. 31 ರಷ್ಟು ಹೆಚ್ಚಳವಾಗಿದೆ. 2021ರಲ್ಲಿ ಇಂತಹ 9 ಪ್ರಕರಣಗಳಿದ್ದವು. ಅವು 2024ರಲ್ಲಿ 21 ಕ್ಕೆ ಏರಿಕೆಯಾಗಿದೆ. ಸಾಮಾಜಿಕ ಮಾಧ್ಯಮಗಳಲ್ಲಿನ ತಪ್ಪು ಮಾಹಿತಿ, ರಾಜಕೀಯ ವಿಭಜನೆ ವಾತಾವರಣ ಮತ್ತು ಕೆಲವು ಜಿಲ್ಲೆಗಳಲ್ಲಿ ದೀರ್ಘಕಾಲದ ಧಾರ್ಮಿಕ ಅಥವಾ ಜಾತಿ ಆಧಾರಿತ ಉದ್ವಿಗ್ನತೆಗಳು ಇಂತಹ ಘಟನೆಗಳ ಹೆಚ್ಚಳಕ್ಕೆ ಕಾರಣವಾಗಿವೆ ಎಂದು ತಜ್ಞರು ಹೇಳುತ್ತಾರೆ.

**ಪರಿಣಾಮ ಬೀರದ ಕಾರ್ಯಪಡೆ:** ಕೋಮು ವಿರೋಧಿ ಕಾರ್ಯ ಪಡೆಯಂತಹ ಸರ್ಕಾರದ ಕ್ರಮಗಳು ಇನ್ನೂ ಯಾವುದೇ ಪರಿಣಾಮ ಬೀರುವುದಿಲ್ಲ. ಧರ್ಮಕ್ಕೆ ಸಂಬಂಧಿಸಿದ ಅಪರಾಧಗಳನ್ನು ವಿವಿಧ ಸೆಕ್ಷನ್‌ಗಳಡಿ ದಾಖಲು ಮಾಡಲಾಗುತ್ತಿದೆ. ಜಾತಿ ಆಧಾರಿತ, ಕೋಮುವಾದ, ಭಾಷಾವಾರು, ಪ್ರಾದೇಶಿಕ, ಧಾರ್ಮಿಕ, ಇತರ ವಿಷಯಗಳಾಗಿ ವರ್ಗೀಕರಿಸಲಾಗಿದೆ. ಈ ಕುರಿತು ರಾಜ್ಯದಲ್ಲಿ ಸೇವೆ ಸಲ್ಲಿಸುತ್ತಿರುವ ಪೊಲೀಸ್ ಕಮಿಷನರ್ ಒಬ್ಬರು TNIE ಜೊತೆಗೆ ಮಾತನಾಡಿದ್ದು, ಸಾಮಾಜಿಕ ಮಾಧ್ಯಮದಲ್ಲಿ ತಪ್ಪು ಮಾಹಿತಿ, ರಾಜಕೀಯ ವಿಭಜನೆ, ಐತಿಹಾಸಿಕ ಧಾರ್ಮಿಕ ಅಥವಾ ಜಾತಿಯ ಉದ್ವಿಗ್ನತೆಗಳು ಪ್ರಮುಖ ಕೊಡುಗೆಗಳಾಗಿವೆ ಎಂದು ಪುನರುಚ್ಚರಿಸಿದರು. ಆರೋಪಿಗಳನ್ನು ಬಂಧಿಸುವುದು ಅಥವಾ ತೊಂದರೆ ಕೊಡುವವರ ವಿರುದ್ಧ ಗೂಂಡಾ ಕಾಯ್ದೆಯಂತಹ ತಡೆಗಟ್ಟುವ ಕ್ರಮಗಳನ್ನು ತೆಗೆದುಕೊಳ್ಳುವಲ್ಲಿ ಪೊಲೀಸರು ವಿಫಲರಾಗಿದ್ದಾರೆ ಎಂದು ಕಮಿಷನರ್ ಹೇಳಿದರು.

**ಸಾಮಾಜಿಕ ಜಾಲತಾಣಗಳಿಂದ ಗಲಭೆಗೆ ಪ್ರಚೋದನೆ:** ಧಾರ್ಮಿಕ ಹಿಂಸಾಚಾರ, ಸಾಮಾಜಿಕ ಜಾಲತಾಣಗಳಿಂದ ಗಲಭೆಗೆ ಪ್ರಚೋದನೆಯಾಗುತ್ತಿದೆ.

ಕೆಲವೊಮ್ಮೆ ಸಾಮಾಜಿಕ ಮಾಧ್ಯಮದಲ್ಲಿ ಏನನ್ನಾದರೂ ಪೋಸ್ಟ್ ಮಾಡುವ ವ್ಯಕ್ತಿಯನ್ನು ತ್ವರಿತವಾಗಿ ಬಂಧಿಸಲಾದರೂ ಅದರಲ್ಲಿ ತೊಡಗಿಕೊಂಡ ವ್ಯಕ್ತಿ ರಾಜಕಾರಣಿಯಾಗಿದ್ದರೆ ಬಂಧನ ವಿಳಂಬವಾಗುತ್ತದೆ. ಯಾವುದೇ ಧಾರ್ಮಿಕ ಅಥವಾ ಕೋಮು ಸಮಸ್ಯೆ ಉದ್ಭವಿಸಿದರೆ ಅಲ್ಲಿ ರಾಜಕೀಯ ಪಕ್ಷದ ಬೆಂಬಲ ಇರುತ್ತದೆ. ಯಾವುದೇ ಪಕ್ಷ ಅಧಿಕಾರದಲ್ಲಿದ್ದರೂ ಕೋಮು ಅಪರಾಧಿಗಳಿಗೆ ರಾಜಕೀಯ ಪ್ರೋತ್ಸಾಹ ನೀಡುವುದು ರಾಜ್ಯದಲ್ಲಿ ಹೊಸ ವಿದ್ಯಮಾನವಲ್ಲ ಎಂದು ಅವರು ಹೇಳಿದರು.

## ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಜುಲೈ 8ರಂದು ಬಿಬಿಎಂಪಿ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘ

# ಹತ್ತು ಮಹಾನಗರ ಪಾಲಿಕೆಗಳು ಬೃಹತ್ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ತುಮಕೂರು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆ ನೌಕರರ ಸಂಘಗಳ ಪರಿಷತ್ತು (ರಿ)ತುಮಕೂರು ಜಿಲ್ಲಾ ಘಟಕದ ವತಿಯಿಂದ ಮಾಧ್ಯಮಗೋಷ್ಠಿ ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆಯ 10 ಮಹಾನಗರ ಪಾಲಿಕೆಯ ಅಧಿಕಾರಿ/ ನೌಕರರ ವಿವಿಧ ಬೇಡಿಕೆಗಳನ್ನು ಈಡೇರಿಸಲು ಆಗ್ರಹಿಸಿ, ಹಲವಾರು ಬಾರಿ ಮನವಿ ಪತ್ರಗಳನ್ನು ನಗರಾಭಿವೃದ್ಧಿ ಸಚಿವರು/ ಕಾರ್ಯದರ್ಶಿಗಳು ನಗರಾಭಿವೃದ್ಧಿ ಇಲಾಖೆ ರವರಿಗೆ ನೀಡಿದರು ಸಹ ಯಾವುದೇ ಸಕರಾತ್ಮಕವಾಗಿ ಸ್ಪಂಧಿಸದೆ ಇರುವುದರಿಂದ ದಿನಾಂಕ: 08-07-2025 ರಿಂದ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಎಲ್ಲಾ ಮಹಾನಗರ ಪಾಲಿಕೆಯ ಅಧಿಕಾರಿ ನೌಕರರು ಸಾಮೂಹಿಕ ರಜೆ ಹಾಕಿ ಕೆಲಸ ಕಾರ್ಯಗಳನ್ನು ಸ್ಥಗಿತ ಮಾಡಿ ಬೃಹತ್ ಪ್ರತಿಭಟನೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಇದರ ಕುರಿತು ರಾಜ್ಯಾಧ್ಯಕ್ಷರಾದ ಎ.ಅಮೃತ್ ರಾಜ್ ರವರು ತುಮಕೂರು ಜಿಲ್ಲಾ ಪ್ರತಿನಿಧಿಗಳು ಮಾಧ್ಯಮಗೋಷ್ಠಿ ಭಾಗವಹಿಸಿದ್ದರು

ರಾಜ್ಯ ಸರ್ಕಾರಿ ನೌಕರರಿಗೆ ಜಾರಿಗೊಳಿಸಿರುವ ಆರೋಗ್ಯ



ಉದಯವಾಹಿನಿ ಚಿತ್ರ

ಸೌಲಭ್ಯದ ಜ್ಯೋತಿ/ ಆರೋಗ್ಯ ಸಂಜೀವಿನಿಯನ್ನು ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆ ಅಧಿಕಾರಿ/ನೌಕರರಿಗೆ ಜಾರಿಗೊಳಿಸಬೇಕು. ರಾಜ್ಯ ಸರ್ಕಾರಿ ನೌಕರರಿಗೆ ಪ್ರತಿ ವರ್ಷ ಆಯೋಜಿಸುವ ಕ್ರೀಡೆಯನ್ನು ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆ ಅಧಿಕಾರಿ/ನೌಕರರಿಗೆ ಆಯೋಜಿಸಬೇಕು. ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆ ಅಧಿಕಾರಿ/ನೌಕರರು ಸುಮಾರು ವರ್ಷಗಳಿಂದ ವಿವಿಧ ವೃಂದದ ಹುದ್ದೆಗಳನ್ನು ಮುಂಬಡ್ತಿ ಪಡೆಯಲು ವಂಚಿತರಾಗಿರುವುದರಿಂದ ಕೂಡಲೇ ವೃಂದವಾರು ಮುಂಬಡ್ತಿ ನೀಡಬೇಕು ಎಂದು

ಬೃಹತ್ ಪ್ರತಿಭಟನೆಯನ್ನು ಜುಲೈ 8ರಂದು ಸ್ವಾತಂತ್ರ್ಯ ಉದ್ಯಾನವನ ಫ್ರೀಡಂ ಪಾರ್ಕ್‌ನಲ್ಲಿ ರಾಜ್ಯದ 10 ಮಹಾನಗರ ಪಾಲಿಕೆ ಸಾವಿರಾರು ಅಧಿಕಾರಿ, ನೌಕರರು ಭಾಗವಹಿಸಲಿದ್ದಾರೆ.

ಗೌರವಾಧ್ಯಕ್ಷರಾದ ಎಸ್.ಹೆಚ್.ಗುರುಮೂರ್ತಿ, ರಾಜ್ಯ ಉಪಾಧ್ಯಕ್ಷರುಗಳಾದ ಜಿ.ವೆಂಕಟ್ ರಾಮ್, ವೇಣುಗೋಪಾಲ್ ಬಿ.ಎನ್. ಮತ್ತು ಪ್ರಧಾನ ಕಾರ್ಯದರ್ಶಿ ಟಿ.ಸಿ.ಬಸವರಾಜಯ್ಯ, ಖಜಾಂಚಿ ರುದ್ರೇಶ್ ಬಿ, ರಾಜ್ಯ ಕಾರ್ಯದರ್ಶಿ ಪ್ರಹ್ಲಾದ್ ಕುಲಕರ್ಣಿ, ರಾಜ್ಯ ನಿರ್ದೇಶಕರುಗಳಾದ ಸಾಯಿಶಂಕರ್, ಜಗದೀಶ್ ಎಸ್, ಎ.ಜಿ.ಬಾಬು, ಶ್ರೀನಿವಾಸ್ ಕಟ್ಟಿ, ಬಾಬು ಪಿ, ನರಸಿಂಹ ಕೆ, ಶಾಂತಪ್ಪ ಮುಖೇಶಪ್ಪ ಪತ್ತಾರ, ರವೀಂದ್ರ ಶಿರಶ್ಯಾದ, 10 ಮಹಾನಗರ ಪಾಲಿಕೆ ಅಧ್ಯಕ್ಷರು, ಪದಾಧಿಕಾರಿಗಳು, ಸದಸ್ಯರುಗಳು ಪ್ರತಿಭಟನೆಯಲ್ಲಿ ಭಾಗವಹಿಸಲಿದ್ದಾರೆ.

> ರಾಜ್ಯಾಧ್ಯಕ್ಷರಾದ ಎ.ಅಮೃತ್ ರಾಜ್ ರವರು ಮಾತನಾಡಿ 7ನೇ ವೇತನ ಆಯೋಗದ ಸೌಲಭ್ಯವನ್ನು ರಾಜ್ಯ ಸರ್ಕಾರಿ ನೌಕರರಿಗೆ ವಿಸ್ತರಿಸಿರುವಂತೆ ಮಹಾನಗರ ಪಾಲಿಕೆ ಅಧಿಕಾರಿ ನೌಕರರಿಗೆ ಯಥಾವತ್ತಾಗಿ ಸರ್ಕಾರ ಆರ್ಥಿಕ ಇಲಾಖೆಯಿಂದಲೇ ಅನುಧಾನವನ್ನು ಬಿಡುಗಡೆ ಮಾಡಿ ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆ ವೃಂದ ಮತ್ತು ನೇಮಕಾತಿ ನಿಯಮಾವಳಿಗಳ ತಿದ್ದುಪಡಿ ಮಾಡಿ ಕರಡು ಅಧಿಸೂಚನೆಯನ್ನು ಪ್ರಕಟಿಸಬೇಕು. ಕರ್ನಾಟಕ ರಾಜ್ಯ ಸರ್ಕಾರಿ ನೌಕರರಿಗೆ ಜಾರಿ ಮಾಡಿರುವ ಕೆ.ಜಿ.ಐ.ಡಿ ಮತ್ತು ಜಿ.ಪಿ.ಎಫ್ ಸೌಲಭ್ಯವನ್ನು ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆ ಅಧಿಕಾರಿ/ನೌಕರರಿಗೆ ಜಾರಿಗೊಳಿಸಲು ಮನವಿ.

# ಶೀಘ್ರದಲ್ಲೇ ಮೈಸೂರು-ಚಾಮರಾಜನಗರ ನಡುವೆ ಎಲೆಕ್ಟ್ರಿಕಲ್ ರೈಲು

• ಉದಯವಾಹಿನಿ, ಮೈಸೂರು

ತಾಂತ್ರಿಕ ಕಾರಣಕ್ಕೆ ಎರಡು ವರ್ಷಗಳಿಂದ ನನೆಗುದಿಗೆ ಬಿದ್ದಿದ್ದ ಯೋಜನೆಗೆ ಪರಿಹಾರ ದೊರೆತಿರುವ ಕಾರಣ ಶೀಘ್ರದಲ್ಲೇ ಮೈಸೂರು-ಚಾಮರಾಜನಗರ ನಡುವೆ ಎಲೆಕ್ಟ್ರಿಕಲ್ ರೈಲು ಸಂಚರಿಸಲಿವೆ. ವಿಮಾನ ನಿಲ್ದಾಣದ ಪಕ್ಕದಲ್ಲಿನ 1.25 ಕಿ.ಮೀ. ಮಾರ್ಗಹೊರತುಪಡಿಸಿ ಮೈಸೂರು-ಚಾಮರಾಜನಗರ ನಡುವಿನ ರೈಲ್ವೆ ಮಾರ್ಗವನ್ನು ವಿದ್ಯುದೀಕರಣಗೊಳಿಸಲಾಗಿತ್ತು. ಆದರೆ, ಸುರಕ್ಷತೆ ದೃಷ್ಟಿಯಿಂದ ವಿಮಾನಯಾನ ಮತ್ತು ನಾಗರಿಕ ಸೇವೆಗಳ ಸಚಿವಾಲಯವು ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣ ವ್ಯಾಪ್ತಿಯ (1.25 ಕಿ. ಮೀ.)ಮಾರ್ಗದಲ್ಲಿ ರೈಲ್ವೆ ವಿದ್ಯುದೀಕರಣಕ್ಕೆ ಅನುಮತಿ ನೀಡಿರಲಿಲ್ಲ. ಇದೀಗ ರೈಲ್ವೆ ಇಲಾಖೆ ತಾಂತ್ರಿಕ ಸಿಬ್ಬಂದಿ ಹಾಗೂ ವಿಮಾನಯಾನ ಮತ್ತು ನಾಗರಿಕ ಸೇವೆಗಳ ಸಚಿವಾಲಯದ ನಡುವೆ ನಡೆದ ಮಾತುಕತೆ ಯಶಸ್ವಿಯಾಗಿದೆ. ಪರಿಣಾಮ ಸಚಿವಾಲಯವು ಅಪೂರ್ಣ ಕಾಮಗಾರಿ ಕೈಗೊಳ್ಳಲು ಅನುಮತಿ ನೀಡಿದೆ. ಅಧಿಕೃತವಾಗಿ ಎನ್‌ಒಸಿ ನೀಡುವುದಷ್ಟೇ ಬಾಕಿ ಇದೆ. ಹೀಗಾಗಿ ಮೈಸೂರು-ಚಾಮರಾಜನಗರ ನಡುವೆ ಬಹು ನಿರೀಕ್ಷಿತ ಎಲೆಕ್ಟ್ರಿಕ್ ರೈಲು ಸೇವೆ ಶೀಘ್ರದಲ್ಲೇ ಆರಂಭವಾಗಲಿದೆ, ಎಂದು ನೈರುತ್ಯ ರೈಲ್ವೆ ಮೈಸೂರು ವಿಭಾಗದ ಸಾರ್ವಜನಿಕ ಸಂಪರ್ಕ ಅಧಿಕಾರಿ ಮತ್ತು ಡಿಸಿಎಂ ಗಿರೀಶ್ ಕಲಗೊಂಡ ವಿಜಯ ಕರ್ನಾಟಕಕ್ಕೆ ತಿಳಿಸಿದರು.

**ಹೆಚ್ಚಾಗಲಿದೆ ರೈಲುಗಳ ಓಡಾಟ**

ಮೈಸೂರು-ಚಾಮರಾಜನಗರ ನಡುವಿನ 61 ಕಿ.ಮೀ.ವರೆಗಿನ 20 ಕೋಟಿ ರೂ. ವೆಚ್ಚದ ಎಲೆಕ್ಟ್ರಿಫಿಕೇಷನ್ ಕಾಮಗಾರಿ ಪೂರ್ಣಗೊಂಡು ಎರಡು ವರ್ಷವೇ ಆಗಿದೆ. ಕಡಕೊಳದ ಮಂಡಕಳ್ಳಿ ವಿಮಾನ ನಿಲ್ದಾಣವಿರುವಲ್ಲಿ ಅಂದಾಜು 1.25 ಕಿ. ಮೀ. ಜಾಗದಲ್ಲಿ ಮಾತ್ರ ವೈರಿಂಗ್ ಕಾಮಗಾರಿ ಬಾಕಿ ಉಳಿದಿತ್ತು. ವಿಮಾನ ನಿಲ್ದಾಣ ಅಭಿವೃದ್ಧಿ ಪ್ರಾಧಿಕಾರವು ವಿಮಾನ ಸಂಚಾರದ ಸಂದರ್ಭದಲ್ಲಿ ಸಿಗ್ನಲ್ ಸ್ವೀಕರಿಸುವ ವಿಚಾರ, ಇನ್ನಿತರ ಸುರಕ್ಷತೆ ನಿಯಮಗಳ ಹಿನ್ನೆಲೆಯಲ್ಲಿ ಕಾಮಗಾರಿ ಕೈಗೊಳ್ಳಲು ಎನ್‌ಒಸಿ ನಿರಾಕರಿಸಿತ್ತು.

**ಯೋಜನೆ 2 ವರ್ಷ ಸ್ಥಗಿತ:** ಮೈಸೂರು-ಚಾಮರಾಜನಗರ ನಡುವಿನ ರೈಲ್ವೆ ಮಾರ್ಗ 80 ವರ್ಷ ಹಳೆಯದಾಗಿದೆ. ಮೀಟರ್ ಗೇಜ್ ಇದ್ದ ಮಾರ್ಗವನ್ನು ಬ್ರಾಡ್‌ಗೇಜ್ ಆಗಿ ಬದಲಿಸಲಾಗಿದೆ. ಆದರೆ, ಮಾರ್ಗವನ್ನು ಯಾವುದೇ ರೀತಿಯಲ್ಲಿ ಬದಲಾವಣೆ ಮಾಡಿರಲಿಲ್ಲ. ರೈಲ್ವೆ ಇಲಾಖೆಯು ವಿಮಾನಯಾನ, ನಾಗರಿಕ ಸೇವೆಗಳ ಸಚಿವಾಲಯದಿಂದ ಎನ್‌ಒಸಿ ಪಡೆಯದೆ ಕಾಮಗಾರಿ ಆರಂಭಿಸಿದ್ದರಿಂದ ಈ ಯೋಜನೆ ಅಪೂರ್ಣ ಸ್ಥಿತಿಯಲ್ಲಿ ಎರಡು ವರ್ಷ ಉಳಿಯುವಂತಾಗಿತ್ತು.



ಉದಯವಾಹಿನಿ ಚಿತ್ರ

**ಹೆಚ್ಚಿದ ನಿರೀಕ್ಷೆ**

**ಈವರೆಗೆ ಈ ಮಾರ್ಗದಲ್ಲಿ ಕೇವಲ ಡೀಸೆಲ್ ಎಂಜಿನ್ ರೈಲುಗಳು ಮಾತ್ರವೇ ಸಂಚರಿಸಲು ಅವಕಾಶವಿದ್ದುದರಿಂದ ಮೈಸೂರು ಕೇಂದ್ರ ರೈಲ್ವೆ ನಿಲ್ದಾಣಕ್ಕೆ ಬರುವ ಎಲೆಕ್ಟ್ರಿಕ್ ರೈಲುಗಳನ್ನು ಚಾಮರಾಜನಗರಕ್ಕೆ ವಿಸ್ತರಿಸಲು ಸಾಧ್ಯವಿರಲಿಲ್ಲ. ಇದೀಗ ಈ ಸಮಸ್ಯೆ ಬಗೆಹರಿದ ಕಾರಣ ಮೈಸೂರು-ಚಾಮರಾಜನಗರ ನಡುವೆ ಮತ್ತಷ್ಟು ರೈಲು ಸೇವೆ ದೊರೆಯುವ ನಿರೀಕ್ಷೆ ಹೆಚ್ಚಾಗಿದೆ.**

ಒಂದು ಹಂತದಲ್ಲಿ ಎನ್‌ಒಸಿಯನ್ನು ನಿರಾಕರಿಸಿದ್ದರಿಂದ ಪರ್ಯಾಯ ಮಾರ್ಗಗಳ ಬಗ್ಗೆ ರೈಲ್ವೆ ಇಲಾಖೆ ಆಲೋಚಿಸಿತ್ತು. ಈ ಅಪೂರ್ಣ ಮಾರ್ಗದಲ್ಲಿ ಮಾತ್ರ ಡಿಸೆಲ್ ಎಂಜಿನ್ ಬಳಸಬಹುದೆ ಇನ್ಯಾವುದಾದರೂ ತಂತ್ರಜ್ಞಾನ ಬಳಸಬಹುದೇ ಎಂದು ರೈಲ್ವೆ ಅಧಿಕಾರಿಗಳು ಚರ್ಚಿಸಿ ನಾನಾ ರೀತಿಯ ಪ್ರಯತ್ನ ನಡೆಸಿದ್ದರು.

# ಶಾಸಕರ ಬಗ್ಗೆ ಲಾಟರಿ ಪದ ಬಳಕೆ ನಿಲ್ಲಿಸಿ

• ಉದಯವಾಹಿನಿ, ಮಂಡ್ಯ

ಪಿ.ರವಿಕುಮಾರ್ ಅವರು ಜನಬೆಂಬಲದೊಂದಿಗೆ ಶಾಸಕರಾಗಿರುವುದೇ ವಿನಃ ಯಾವುದೇ ಲಾಟರಿ ತರವಲ್ಲ, ಏಕೆಂದರೆ ನಿಖಿಲ್ ಕುಮಾರಸ್ವಾಮಿ ಅವರ ತಾತ ಎಚ್.ಡಿ.ದೇವೇಗೌಡ ಅವರು ಕಾಂಗ್ರೆಸ್‌ನ ಲಾಟರಿ ಎಂಬ ಬೆಂಬಲದೊಂದಿಗೆ ಆಶ್ಚರ್ಯಕರವಾಗಿ ಪ್ರಧಾನ ಮಂತ್ರಿ ಆಗಿದ್ದು ಎನ್ನುವುದನ್ನು ನಿಖಿಲ್ ಮತ್ತು ಅವರ ಅಭಿಮಾನಿಗಳು ಬೇರೆಯವರಿಗೆ ಲಾಟರಿ ಪದ ಬಳಸುವ ಮುನ್ನ ಯೋಚನೆ ಮಾಡಬೇಕು ಎಂದು ಕಾಂಗ್ರೆಸ್ ನಗರ ಘಟಕದ ಅಧ್ಯಕ್ಷ ಪಿ.ರುದ್ರಪ್ಪ ತಿರುಗೇಟು ನೀಡಿದರು. ಕಾಂಗ್ರೆಸ್ ಬೆಂಬಲದೊಂದಿಗೆ ಎಚ್.ಡಿ.ದೇವೇಗೌಡರು ಸೇರಿದಂತೆ ಎಚ್.ಡಿ.ಕುಮಾರಸ್ವಾಮಿ ಲಾಟರಿ ತರಹನೇ ಸಿಎಂ ಆಗಿದ್ದರು, ಇದು ಜಗತ್ತಿಗೆ ಗೊತ್ತಿದೆ. ದೇವೇಗೌಡರು ಪಕ್ಷದ ಸ್ವಂತ ಬಲದಿಂದ ಗೆದ್ದು ಪ್ರಧಾನಿಯಾದವರಲ್ಲ. ಹಾಗೆಯೇ, ಎಚ್.ಡಿ.ಕುಮಾರಸ್ವಾಮಿ ಅವರೂ ಜೆಡಿಎಸ್ ಬಹುಮತ ಸಾಧಿಸಿ ಸಿಎಂ ಗದ್ದುಗೆ ಏರಲಿಲ್ಲ. ತಂದೆ-ಮಗ ಇಬ್ಬರೂ ಕಾಂಗ್ರೆಸ್ ಬೆಂಬಲದೊಂದಿಗೆ ದೊಡ್ಡ ಹುದ್ದೆಗಳನ್ನು ಅಲಂಕರಿಸಿದವರು ಎಂದು ಪತ್ರಿಕಾಗೋಷ್ಠಿಯಲ್ಲಿ ಗುರುವಾರ ಆಕ್ರೋಶ ವ್ಯಕ್ತಪಡಿಸಿದರು. ನಮ್ಮ ಪಕ್ಷದ ಯಾರೊಬ್ಬರ ಬಗ್ಗೆಯೂ ಲಘುವಾಗಿ ಮಾತನಾಡುವ ನೈತಿಕತೆ ಜೆಡಿಎಸ್‌ನವರಿಗೆ ಇಲ್ಲ. ಜನಪ್ರತಿನಿಧಿಯೊಬ್ಬರ ಬಗ್ಗೆ ಮಾತನಾಡುವಾಗ ನಿಖಿಲ್ ಕುಮಾರಸ್ವಾಮಿ ಅವರು ಎಚ್ಚರಿಕೆಯಿಂದ ಮಾತನಾಡಬೇಕು. ಪಿ. ರವಿಕುಮಾರ್ ಯಾವುದೇ ರಾಜಕೀಯ ಕುಟುಂಬದ ಹಿನ್ನೆಲೆಯಿಂದ ಬಂದವರಲ್ಲ. ಮತ್ತೊಮ್ಮೆ ಹೀಗೆ ಮಾತನಾಡಿದರೆ ಕಾರ್ಯಕರ್ತರ ಜೊತೆ ಸೇರಿಕೊಂಡು ಪ್ರತಿಭಟನೆ ಮಾಡಬೇಕಾಗುತ್ತದೆ ಎಂದು ಎಚರಿಕೆ ನೀಡಿದರು.

# ಸಮಾನ ವೇತನಕ್ಕೆ ಆಗ್ರಹಿಸಿ ಕೆಲಸ ಸ್ಥಗಿತ

## ಪರವಾನಗಿ ಪಡೆದ ಭೂಮಾಪಕರಿಂದ ಪ್ರತಿಭಟನೆ, ಮನವಿ ಸಲ್ಲಿಸಿದರು ಕ್ಯಾರೆ ಅನ್ನದ ಅಧಿಕಾರಿಗಳು


• ಉದಯವಾಹಿನಿ, ರಾಮನಗರ

ಪೋಡಿ ಮುಕ್ತ ಗ್ರಾಮ ಇ - ಸ್ವತ್ತು ದರಾಖಾಸ್ತು ಆಂದೋಲನ ಸೇರಿದಂತೆ ವಿವಿಧ ರೀತಿಯಲ್ಲಿ ಭೂಮಾಪನ ಇಲಾಖೆಯ ಕೆಲಸ ಮಾಡುತ್ತಿರುವ ನಮಗೆ ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕು ಎಂದು ಆಗ್ರಹಿಸಿ ಜಿಲ್ಲೆಯ ಪರವಾನಗಿ ಭೂಮಾಪಕರಿಂದ ಮಾನ್ಯ ಭೂ ದಾಖಲೆಗಳ ಉಪ ನಿರ್ದೇಶಕರಿಗೆ ಕಳೆದವಾರ ಮನವಿ ಸಲ್ಲಿಸಿದರು ಕ್ಯಾರೆ ಅನ್ನದ ಅಧಿಕಾರಿಗಳು ಸರ್ಕಾರ. ಭೂ ದಾಖಲೆಗಳ ಉಪನಿರ್ಧಕ್ಷಕರು ಕಚೇರಿಗೆ ನಿಯೋಗದ ಮೂಲಕ ಭೇಟಿ ನೀಡಿದ ಪರವಾನಗಿ ಭೂ ಮಾಪಕರು.

**ಕೆಲಸಕ್ಕೆ ಸಮಾನ ವೇತನ ನೀಡಬೇಕು**

ನಮ್ಮ ಬೇಡಿಕೆ ಈಡೇರಿಕೆಗಾಗಿ ರಾಜ್ಯ ಘಟಕದ ಕರೆ ಮೇರೆಗೆ ಸಾಂಕೇತಿಕ ಪ್ರತಿಭಟನೆ ಆರಂಭಿಸಿದ್ದೇವೆ ಹಾಗೂ ಲಾಗಿನ್ಗಳನ್ನು ಸ್ಥಗಿತ ಗೊಳಿಸಿದ್ದೇವೆ ಎಂದು ತಿಳಿಸಲಾಗಿದೆ. ಸರ್ಕಾರಿ, ಖಾಸಗಿ ಜಮೀನು ಅಳತೆಯನ್ನು ಪರವಾನಗಿ ಭೂಮಾಪಕರು ಮಾಡುತ್ತಿದ್ದಾರೆ ಪ್ರತಿ ಕಡತಕ್ಕೆ ರೂ 1,200 ಮಾತ್ರ ನೀಡಲಾಗುತ್ತಿದೆ ಕಡತ ತಯಾರಿಸಲು ತಗಲುವ ವೆಚ್ಚವು ಹೆಚ್ಚಾಗಿದೆ.

ಅಗತ್ಯ ವಸ್ತುಗಳ ಬೆಲೆ ಹೆಚ್ಚಳವಾಗಿರುವ ಇಂದಿನ ದುಬಾರಿ ಯುಗದಲ್ಲಿ ಸರ್ಕಾರ ನೀಡುವ ಹಣ ಯಾವುದಕ್ಕೂ ಸಾಲುತ್ತಿಲ್ಲ. ಸರ್ಕಾರಿ ಭೂಮಾಪಕರ ರೀತಿಯಲ್ಲಿಯೇ ನಮಗೆ ತಿಂಗಳಿಗೆ ರೂ 50 ಸಾವಿರ ದಿಂದ 60 ಸಾವಿರ ಕನಿಷ್ಠ ವೇತನ ನೀಡಬೇಕು. ನಮ್ಮನ್ನು ಕಾಯಂ ನೇಮಕಾತಿ ಮಾಡಿಕೊಳ್ಳಬೇಕು ಎಂದು ಆಗ್ರಹಿಸಿದರು.



ಉದಯವಾಹಿನಿ ಚಿತ್ರ

**ವೇತನದಲ್ಲಿ ಸಾಕಷ್ಟು ತಾರತಮ್ಯ**

**ಜಿಲ್ಲೆಯಲ್ಲಿ ಸುಮಾರು 250 ಪರವಾನಗಿ ಭೂಮಾಪಕರು ಇದ್ದೇವೆ ಸರ್ಕಾರಿ ಭೂಮಾಪಕರು ಮಾಡುವ ಎಲ್ಲಾ ಕೆಲಸಗಳನ್ನು ನಾವು ಮಾಡುತ್ತಿದ್ದೇವೆ. ಆದರೆ ವೇತನದಲ್ಲಿ ಸಾಕಷ್ಟು ತಾರತಮ್ಯವಿದೆ ಹೀಗಾಗಿ ಕೆಲಸಕ್ಕೆ ತಕ್ಕಂತೆ ವೇತನ ನೀಡಬೇಕೆಂದು ಆಗ್ರಹಿಸಿ ಪ್ರತಿಭಟನೆ ಮಾಡುತ್ತಿದ್ದೇವೆ ಎಂದು ಪರವಾನಗಿ ಪಡೆದ ಭೂಮಾಪಕರು ತಿಳಿಸಿರುತ್ತಾರೆ.**

**ಸಮಾನ ಕೆಲಸಕ್ಕೆ ಕನಿಷ್ಠ 50 ಸಾವಿರದಿಂದ 60 ಸಾವಿರ ವೇತನ ನೀಡಬೇಕು. ನಮ್ಮನ್ನು ಕಾಯಂ ನೇಮಕಾತಿ ಮಾಡಿಕೊಳ್ಳಬೇಕು. ಒಂದು ವೇಳೆ ನಮ್ಮ ಮನವಿಗೆ ಸರ್ಕಾರ ಸ್ಪಂದಿಸದೇ ನಮ್ಮ ಬೇಡಿಕೆಗಳನ್ನು ಈಡೇರಿಸದಿದ್ದರೆ ಕರ್ನಾಟಕ ರಾಜ್ಯದ್ಯಂತ ಉಗ್ರವಾಗಿ ಪ್ರತಿಭಟಿಸುವುದಾಗಿ ಎಂದು ಎಚ್ಚರಿಸಿದ್ದಾರೆ.**
**-ರಘುಪತಿ ಎಂ. ಕೆ ತಾಲ್ಲೂಕು ಅಧ್ಯಕ್ಷರು**

# ಸಾರ್ವಜನಿಕ ಸಂಪರ್ಕದಲ್ಲಿ ಡಿಕೆಶಿ ವಿಫಲ, ಶಾಸಕರ ಬಲ ಕಮ್ಮಿ

• ಉದಯವಾಹಿನಿ, ರಾಮನಗರ



ಸ್ನೇಹಿತ ಡಿ.ಕೆ.ಶಿವಕುಮಾರ್ ಸಾರ್ವಜನಿಕ ಸಂಪರ್ಕದಲ್ಲಿ ವಿಫಲರಾಗಿದ್ದಾರೆ. ಶಾಸಕರನ್ನು ಕಂಡರೂ ಕಾಣದಂತೆ ಹೋಗುತ್ತಾರೆ. ನಡವಳಿಕೆಯೇ ಅವರಿಗೆ ತೊಡಕಾಗಿರುವುದರಿಂದ ಶಾಸಕರ ಬಲವು ಕಮ್ಮಿ ಇದೆ. ಅವರು ಸಿಎಂ ಆಗಬೇಕು ಎಂದು ನಾನು ಸಹ ಬಯಸುತ್ತೇನೆ. ಆದರೆ, ಈ ಅವಧಿಯಲ್ಲಿ ಆಗೋದು ಕಷ್ಟ ಎಂದು ಮಾಜಿ ಶಾಸಕ ಸಿ.ಎಂ. ಲಿಂಗಪ್ಪ ಅಭಿಪ್ರಾಯಪಟ್ಟರು.

ಮುಖ್ಯಮಂತ್ರಿ ಬದಲಾವಣೆ ಚರ್ಚೆ, ಡಿಕೆಶಿ ಸಿಎಂ ಆಗಬೇಕೆಂಬ ಒತ್ತಾಯದ ಕುರಿತು ಗುರುವಾರ ಪ್ರತಿಕ್ರಿಯಿಸಿದ ಅವರು, ಶಾಸಕರು, ಸಾರ್ವಜನಿಕರ ಜೊತೆ ಅವರಿಗಿರುವ ಸಂಪರ್ಕ ವ್ಯವಸ್ಥೆ ಸರಿ ಇಲ್ಲ. ಇದೇ ಕಾರಣಕ್ಕೆ ಅವರ ಪರ ಇರುವವರಿಂತ ವಿರುದ್ಧ ಇರುವವರೇ ಹೆಚ್ಚು. ಮುಂದೆ ಎತ್ತರಕ್ಕೆ ಬೆಳೆಯಬೇಕಿರುವ ನೀವು ಇದನ್ನು ಸರಿಪಡಿಸಿಕೊಳ್ಳಿ ಎಂದು ಅವರಿಗೆ ಹಲವು ಸಲ ಕಿವಿಮಾತು ಹೇಳಿದ್ದೇನೆ ಎಂದರು.

ಶಾಸಕರು ಒಟ್ಟಾಗಿದ್ದಾಗ ಶಿವಕುಮಾರ್ ಅವರು ಒಂದಿಬ್ಬರನ್ನು ಮಾತ್ರ ಮಾತನಾಡಿಸಿ, ಉಳಿದವರು ಗೊತ್ತಿದ್ದರೂ ಮಾತನಾಡಿಸದೆ ಕಾರು ಹತ್ತಿ ಹೋಗುವುದು ಸರಿಯಲ್ಲ. ಯಾರಾದರೂ ನಮಸ್ಕಾರ ಎಂದರೆ ಹಾ... ಎನ್ನುತ್ತಾರೆ. ಪ್ರತಿಯಾಗಿ ಅವರು ಸಹ ನಮಸ್ಕಾರ ಎನ್ನಬೇಕು. ಎಲ್ಲರನ್ನು ಮಾತನಾಡಿಸಬೇಕು. ಜನರ ಕಷ್ಟ-ಸುಖ ಕೇಳಲು ನಿತ್ಯ ಒಂದು ತಾಸು ಮೀಸಲಿಡಬೇಕು ಎಂದು ಹೇಳಿದ್ದೇನೆ.

ನನ್ನ ಈ ಮಾತಿನಿಂದ ಶಿವಕುಮಾರ್ ಅವರಿಗೆ ಬೇಸರವಾಗಬಹುದು. ಆದರೆ, ಇದು ಕಟು ಸತ್ಯ ಎಂದು ತಿಳಿಸಿದರು. ಶಿವಕುಮಾರ್ ಸಿಎಂ ಆಗಬೇಕು ಎಂದು ಕೆಲ ಆಪ್ತ ಶಾಸಕರು ಹೇಳುತ್ತಾರೆ. ಮತ್ತೊಂದೆಡೆ, ಸಿದ್ದರಾಮಯ್ಯ ಅವರು ಐದು ವರ್ಷ ನಾನೇ ಸಿಎಂ ಎನ್ನುತ್ತಿದ್ದಾರೆ. ಇದರ ನಡುವೆಯೇ ಶಿವಕುಮಾರ್ ಅವರು, ಸಿದ್ದರಾಮಯ್ಯ ಅವರಿಗೆ ಬೆಂಬಲವಾಗಿ ನಾನಿರುತ್ತೇನೆ ಎನ್ನುತ್ತಿದ್ದಾರೆ. ಈ ಬೆಳವಣಿಗೆ ನೋಡಿದರೆ, ಅವರು ಡಿಸಿಎಂ ಆಗಿಯೇ ಉಳಿಯುವಂತಿದೆ. ಪಕ್ಷದ ಹೈಕಮಾಂಡ್ ಮುಂದೆ ಅವರನ್ನು ಮತ್ತೆ ಕೆಪಿಸಿಸಿ ಅಧ್ಯಕ್ಷರನ್ನಾಗಿ ಮಾಡಿ, ಟಿಕೆಟ್ ಹಂಚಿಕೆ ಜವಾಬ್ದಾರಿ ಕೊಟ್ಟು ಪಕ್ಷವನ್ನು ಅಧಿಕಾರಕ್ಕೆ ತಂದು ಸಿಎಂ ಆಗಿ ಎಂದು ಹೇಳಬಹುದೇನೊ ಅನ್ನಿಸುತ್ತದೆ ಎಂದು ಹೇಳಿದರು.

**ಶಿವಕುಮಾರ್ ಅವರಿಗೆ ನಾನೀಗ ಏನು ಸಲಹೆ ಕೊಡಲ್ಲ. ಅದರಿಂದ ಪ್ರಯೋಜನವೂ ಆಗಲ್ಲ. ನನಗೆ ಅವರ ಮೇಲೆ ಯಾವುದೇ ಅಸಮಾಧಾನ ಮತ್ತು ಅತೃಪ್ತಿ ಇಲ್ಲ. ಅವರನ್ನು ಭೇಟಿ ಮಾಡುವುದೇ ಕಷ್ಟ. ಸಿಕ್ಕರೂ ನಾಳೆ ಸಿಗು ಅಂತಾರೆ**
**- ಸಿ.ಎಂ. ಲಿಂಗಪ್ಪ, ಮಾಜಿ ಶಾಸಕ**

# ವಿಧಾನಸಭಾ ಚುನಾವಣೆಗೆ ನಾನೇ ಅಭ್ಯರ್ಥಿ

• ಉದಯವಾಹಿನಿ, ತುರುವೇಕೆರೆ



2028ರ ವಿಧಾನಸಭಾ ಚುನಾವಣೆಯಲ್ಲಿ ತುರುವೇಕೆರೆ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ನಾನೇ. ಈ ಬಗ್ಗೆ ಕಾರ್ಯಕರ್ತರಲ್ಲಿ ಯಾವುದೇ ಗೊಂದಲ ಬೇಡ' ಎಂದು ಮಾಜಿ ಶಾಸಕ ಮಸಾಲ ಜಯರಾಂ ಸ್ಪಷ್ಟಪಡಿಸಿದರು. ಚಿಕ್ಕೋನಹಳ್ಳಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈಗಾಗಲೇ ರಾಷ್ಟ್ರ ಮತ್ತು ರಾಜ್ಯದ ಬಿಜೆಪಿ ನಾಯಕರು ಪಕ್ಷ ಸಂಘಟನೆಯಲ್ಲಿ ತೊಡಗಿಕೊಳ್ಳುವಂತೆ ಸೂಚಿಸಿದ್ದಾರೆ. ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ನೀನೇ ಅಭ್ಯರ್ಥಿಯಾಗಬೇಕು ಎಂದು ಹುಕುಂ ಹೊರಡಿಸಿದ್ದಾರೆ ಎಂದರು. ಕೆಲವು ವೈಯಕ್ತಿಕ ಕಾರಣಗಳಿಂದಾಗಿ ಪಕ್ಷ ಸಂಘಟನೆಯನ್ನು ಚುರುಕುಗೊಳಿಸಿರಲಿಲ್ಲ. ಈಗ ಸ್ಥಳೀಯ ಸಂಸ್ಥೆಗಳ ಚುನಾವಣೆಗಳು ಬರಲಿದ್ದು, ಸಂಘಟನೆಯಲ್ಲಿ ತೊಡಗಿಕೊಳ್ಳಲಾಗುವುದು. ವಿಧಾನಸಭೆ ಚುನಾವಣೆಯೂ ಬೇಗನೆ ಬರಬಹುದು. ಸಿಎಂ ಕುರ್ಚಿ ಕದನದಲ್ಲಿ ಯಾವುದೇ ಕ್ಷಣದಲ್ಲಿ ಕಾಂಗ್ರೆಸ್ ಸರ್ಕಾರ ಬೀಳಬಹುದು. ಬಿಜೆಪಿ ಕಾರ್ಯಕರ್ತರು ಚುನಾವಣೆ ಎದುರಿಸಲು ಸನ್ನದ್ಧರಾಗಿ ಎಂದರು.

ಮುಂಬರುವ ದಿನಗಳಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಇರಲಿದೆಯೇ ಎಂಬ ಪ್ರಶ್ನೆಗೆ ಉತ್ತರಿಸಿದ ಮಾಜಿ ಶಾಸಕ ಮಸಾಲ ಜಯರಾಂ, 'ನನಗೆ ಗೊತ್ತಿಲ್ಲ. ಅದನ್ನು ವರಿಷ್ಠರು ತೀರ್ಮಾನಿಸುತ್ತಾರೆ. ಈಗ ಪಕ್ಷ ಸಂಘಟನೆ ಮಾಡುವುದು ಮತ್ತು ಮುಂಬರುವ ಚುನಾವಣೆಗೆ ಈಗಿನಿಂದಲೇ ತಯಾರಿ ಆಗುವಂತೆ ಆದೇಶಿಸಿದ್ದಾರೆ ಎಂದರು.

ಇತ್ತೀಚೆಗೆ ನಡೆದ ಜೆಡಿಎಸ್ ಶಾಸಕ ಎಂ.ಟಿ.ಕೃಷ್ಣಪ್ಪ ಅವರ ಹುಟ್ಟುಹಬ್ಬ ಕಾರ್ಯಕ್ರಮದಲ್ಲಿ ಎಂ.ಟಿ.ಕೃಷ್ಣಪ್ಪ ಅವರು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ, ಎಚ್.ಡಿ.ಕುಮಾರಸ್ವಾಮಿ ಮುಂಬರುವ ವಿಧಾನಸಭಾ ಚುನಾವಣೆಗೆ ತಾವೇ ಸ್ಪರ್ಧಿಸಬೇಕು ಎಂದು ಒತ್ತಾಯಿಸುತ್ತಿರುವುದರಿಂದ ತಾವು ಚುನಾವಣೆಗೆ ಸ್ಪರ್ಧಿಸುತ್ತಿರುವುದಾಗಿ ಹೇಳಿದ್ದರು.

# ಕೈವಾರ ಪ್ರಾಥಾಮಿಕ ಆರೋಗ್ಯ ಕೇಂದ್ರ ಮೇಲ್ದರ್ಜೆಗೆ

• ಉದಯವಾಹಿನಿ, ಚಿಂತಾಮಣಿ

ತಾಲ್ಲೂಕಿನ ಪ್ರಸಿದ್ಧ ಯಾತ್ರಾಸ್ಥಳ, ಪ್ರವಾಸಿ ಕೇಂದ್ರ ಕೈವಾರದ ಸರ್ಕಾರಿ ಪ್ರಾಥಮಿಕ ಕೇಂದವನ್ನು ಸಮುದಾಯ ಆರೋಗ್ಯ ಕೇಂದ್ರವನ್ನಾಗಿ ಮೇಲ್ದರ್ಜೆಗೇರಿಸಲು ನಂದಿಯಲ್ಲಿ ನಡೆದ ಸಚಿವ ಸಂಪುಟದ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಗಿದೆ. ಸಮುದಾಯ ಆರೋಗ್ಯ ಕೇಂದ್ರ ಆಗುವ ಎಲ್ಲಾ ಅರ್ಹತೆಯನ್ನು ಕೈವಾರದ ಪ್ರಾಥಮಿಕ ಆರೋಗ್ಯ ಕೇಂದ್ರ ಹೊಂದಿದೆ ಎಂದು ದಶಕದ ಹಿಂದೆಯೇ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸಲ್ಲಿಸಲಾಗಿತು. 10-12 ವರ್ಷಗಳಿಂದಲೂ ಯಾವುದೇ ಸ್ಪಂದನೆ ದೊರೆತಿರಲಿಲ್ಲ. ಧಾರ್ಮಿಕ, ಪ್ರವಾಸಿ ತಾಣ, ಹೋಬಳಿ ಕೇಂದ್ರವಾಗಿರುವ ಕೈವಾರ ತಾಲ್ಲೂಕಿನಲ್ಲಿ ಅತ್ಯಂತ ದೊಡ್ಡ ಗ್ರಾ. ಪಂ. ಆಗಿದೆ. ಹೆಚ್ಚಿನ ಜನಸಂಖ್ಯೆ, ವ್ಯಾಪಾರ ವಹಿವಾಟು ಇಲ್ಲಿ ನಡೆಯುತ್ತದೆ. ಕೈವಾರ ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯಾಪ್ತಿಯಲ್ಲಿ ಕೈವಾರ, ಮಸ್ತೇನಹಳ್ಳಿ, ಪೆರಮಾಚನಹಳ್ಳಿ ಗ್ರಾಮ ಪಂಚಾಯಿತಿಗಳ 32 ಗ್ರಾಮಗಳಿವೆ. 2011 ಜನಗಣತಿ ಪ್ರಕಾರ 30 ಸಾವಿರಕ್ಕೂ ಹೆಚ್ಚು ಜನಸಂಖ್ಯೆ ಹೊಂದಿದೆ. ಇಷ್ಟೊಂದು ಗ್ರಾಮಗಳು ಮತ್ತು ಜನಸಂಖ್ಯೆಗೆ ಕೇವಲ ಒಬ್ಬ ವೈದ್ಯ, ಕಡಿಮೆ ವೈದ್ಯಕೀಯ ಮೂಲ ಸೌಲಭ್ಯ ಸಾಲದು ಎಂದು ಸ್ಥಳೀಯರು ಅಸಮಾಧಾನ ವ್ಯಕ್ತಪಡಿಸುತ್ತಿದ್ದರು. 2012ರಲ್ಲಿ ಅಂದಿನ ಶಾಸಕ ಡಾ.ಎಂ.ಸಿ.ಸುಧಾಕರ್ ಕೈವಾರದ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಮುದಾಯ ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೆ ಏರಿಸಲು ಪಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದರು. ನಂತರ 2013, 2018ರ ಚುನಾವಣೆಯಲ್ಲಿ ಅವರು ಸೋತಿದ್ದರಿಂದ ಪ್ರಸ್ತಾವನೆ ನೆನಗುದಿಗೆ ಬಿದ್ದಿತ್ತು. ಈಗ ಅನುಮೋದನೆ ದೊರೆತಿದೆ.



ಉದಯವಾಹಿನಿ ಚಿತ್ರ

**ದಶಕದ ಬೇಡಿಕೆಗೆ ಸ್ಪಂದನೆ**

**ಏನೇನು ಸೌಲಭ್ಯ?**

**ಸಮುದಾಯ ಆರೋಗ್ಯ ಕೇಂದ್ರವಾದರೆ ಐದು ತಜ್ಞ ವೈದ್ಯರ ಹುದ್ದೆ ಸೃಷ್ಟಿಯಾಗುತ್ತವೆ. ಮಕ್ಕಳ ತಜ್ಞ ಸ್ತ್ರೀರೋಗ ತಜ್ಞ ಅರಿವಳಿಕೆ ತಜ್ಞರು. ಜತೆಗೆ ಒಬ್ಬ ಸೀನಿಯರ್ ಮೆಡಿಕಲ್ ಆಫೀಸರ್ ಒಬ್ಬ ದಂತ ವೈದ್ಯರು ಇರುತ್ತಾರೆ. ನರ್ಸ್ ಮತ್ತು ಸಿಬ್ಬಂದಿಯ ಸಂಖ್ಯೆಯು ಹೆಚ್ಚಾಗುತ್ತದೆ. ದಿನದ 24 ಗಂಟೆಯೂ ಆರೋಗ್ಯ ಸೇವೆ ಸಿಗುತ್ತದೆ. ವೈದ್ಯರು ಪಾಳಿ ಪದ್ಧತಿಯಲ್ಲಿ ಕಾರ್ಯನಿರ್ವಹಿಸಿ ರಾತ್ರಿ ವೇಳೆಯಲ್ಲೂ ವೈದ್ಯರ ಸೇವೆ ದೊರೆಯುತ್ತದೆ ಎಂದು ಆರೋಗ್ಯ ಇಲಾಖೆಯ ಮೂಲಗಳು ತಿಳಿಸಿವೆ.**

# ಕೊಡಗಿನಲ್ಲಿ ಹೆಚ್ಚಿದ ಮಳೆ: 'ರೆಡ್ ಅಲರ್ಟ್' ಘೋಷಣೆ

• ಉದಯವಾಹಿನಿ, ಮಡಿಕೇರಿ

ಕೊಡಗು ಜಿಲ್ಲೆಯ ಹಲವೆಡೆ ಬಿರುಸಿನ ಮಳೆ ಮುಂದುವರಿದಿದೆ. ಹವಾಮಾನ ಇಲಾಖೆಯು ಶುಕ್ರವಾರ ಬೆಳಿಗ್ಗೆ 8.30ರವರೆಗೂ ರೆಡ್ ಅಲರ್ಟ್ ಘೋಷಿಸಿದೆ. ಭಾರಿ ಮಳೆಯಿಂದ ಜಿಲ್ಲೆಯ ಎಲ್ಲಾ ಶಾಲೆಗಳು ಹಾಗೂ ಪಿಯು ಕಾಲೇಜುಗಳಿಗೆ ರಜೆ ಘೋಷಿಸಲಾಗಿತ್ತು. ಮಡಿಕೇರಿ ನಗರದಲ್ಲಿ ಬುಧವಾರ ತಡರಾತ್ರಿಯಿಂದ ಗುರುವಾರ ಮಧ್ಯಾಹ್ನದವರೆಗೂ ಮಳೆ ಅಬ್ಬರಿಸಿತು. ಇದರಿಂದ ಹಾರಂಗಿ ಜಲಾಶಯದ ಒಳ ಹರಿವು ಹೆಚ್ಚಾಗಿದ್ದು, ನದಿಗೆ 10ಸಾವಿರ ಕ್ಯುಸೆಕ್ ನೀರನ್ನು ಹರಿಸಲಾಯಿತು. ನಾಪೋಕ್ಲು ಭಾಗದಲ್ಲಿ ನದಿ, ತೊರೆಗಳು ತುಂಬಿ ಹರಿಯುತ್ತಿವೆ. ಕಾವೇರಿ ನದಿಯಲ್ಲಿ ನೀರಿನ ಪ್ರಮಾಣ ಹೆಚ್ಚಾಗಿದೆ. ಶಾಂತಳ್ಳಿಯಲ್ಲಿ 14 ಸೆಂ.ಮೀ. ಮಳೆಯಾಗಿದೆ. ಭಾಗಮಂಡಲ, ಸೋಮವಾರಪೇಟೆ 8, ಶನಿವಾರಸಂತೆ 6, ಮಡಿಕೇರಿ, ನಾಪೋಕ್ಲು, ಸಂಪಾಜೆ, ವಿರಾಜಪೇಟೆ, ಹುದಿಕೇರಿಯಲ್ಲಿ ತಲಾ 5 ಸೆಂ.ಮೀ. ಮಳೆ ಸುರಿದಿದೆ.



# ರೈತರ ಫ್ರೀಡಂ ಪಾರ್ಕ್ ಹೋರಾಟಕ್ಕೆ ಬೆಂಬಲ

• ಉದಯವಾಹಿನಿ, ಶಿಡ್ಲಘಟ್ಟ

ದೇವನಹಳ್ಳಿ ತಾಲ್ಲೂಕಿನ ಚನ್ನರಾಯಪಟ್ಟಣ ಹೋಬಳಿಯ 13 ಹಳ್ಳಿಗಳ ರೈತರ ವಿರೋಧದ ನಡುವೆಯೂ ಬಲವಂತವಾಗಿ ರೈತರ ಜಮೀನುಗಳನ್ನು ಸ್ವಾಧೀನಪಡಿಸಿಕೊಳ್ಳಲು ಮುಂದಾದ ಸರ್ಕಾರದ ಕ್ರಮವು ಖಂಡನೀಯ ಎಂದು ಜೀವಿಕ ತಾಲ್ಲೂಕು ಸಂಚಾಲಕ ಶ್ರೀನಿವಾಸ್ ಹೇಳಿದರು.

ನಗರದ ಪತ್ರಕರ್ತರ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ದೇವನಹಳ್ಳಿ ತಾಲ್ಲೂಕಿನ ಚನ್ನರಾಯಪಟ್ಟಣ ಭೂ ಸ್ವಾಧೀನ ವಿರೋಧಿಸಿ ಇದೇ 14ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಡೆಯಲಿರುವ ಅನಿರ್ದಿಷ್ಟಾವಧಿ ಧರಣಿಯಲ್ಲಿ ಜೀವಿಕ, ಕರ್ನಾಟಕ ಜೀತದಾಳುಗಳ ಕೃಷಿ ಕಾರ್ಮಿಕ ಒಕ್ಕೂಟವು ಪಾಲ್ಗೊಳ್ಳಲಿದೆ ಎಂದರು. ಕೆಐಎಡಿಬಿ ನಿರ್ಮಾಣ ಮಾಡುವ ಕೈಗಾರಿಕೆಗಳಿಂದ ಈ ಭಾಗದ ರೈತರಿಗೆ ಏನೂ ಉಪಯೋಗವಿಲ್ಲ. ಇದರಿಂದ ವಿದೇಶಿ ಹಾಗೂ ಕಾರ್ಪೊರೇಟ್ ಸಂಸ್ಥೆಗಳಿಗೆ ಲಾಭವಾಗಲಿದೆ. ರೈತಪರ ನಿಲ್ಲಬೇಕಾದ ಸರ್ಕಾರವು ಕಾರ್ಪೊರೇಟ್ ಸಂಸ್ಥೆಗಳ ಪರ ನಿಂತಿರುವುದು ದುರದೃಷ್ಟಕರ.

ಇಡೀ ದೇಶಕ್ಕೆ ಅನ್ನ ನೀಡುವ ರೈತರು ತಮ್ಮ ಭೂಮಿ ಉಳಿಸಿಕೊಳ್ಳಲು ಉಪವಾಸ ಸತ್ಯಾಗ್ರಹಕ್ಕೆ ಕುಳಿತುಕೊಳ್ಳುವ ಅನಿವಾರ್ಯತೆ ಎದುರಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು. ರೈತರ ಹೆಸರಿನಲ್ಲೇ ಭೂಮಿಯನ್ನು ಉಳಿಸಿಕೊಂಡು ಕೈಗಾರಿಕೆಗಳನ್ನು ಸ್ಥಾಪಿಸಿಕೊಳ್ಳಬಹುದು. ಆದರೆ, ರೈತರ ಜಮೀನುಗಳನ್ನು ಬಲವಂತವಾಗಿ ಕಸಿದು ಕೊಳ್ಳುವುದು ಸರಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.



ಉದಯವಾಹಿನಿ ಚಿತ್ರ

# ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಯದುವೀರ್

## ಮೊದಲ ಆಷಾಢ ಶುಕ್ರವಾರದಂದು ಬೆಟ್ಟಕ್ಕೆ ಬಂದಿದ್ದ ಭಕ್ತರಿಗೆ ಸಾಕಷ್ಟು ಅನಾನುಕೂಲ ಆಗಿರುವ ಬಗ್ಗೆ ನಮ್ಮ ಕಚೇರಿಗೆ ದೂರುಗಳು ಬಂದಿವೆ

• ಉದಯವಾಹಿನಿ, ಮೈಸೂರು

ನಾಡ ದೇವತೆ ಚಾಮುಂಡೇಶ್ವರಿ ತಾಯಿಯನ್ನು ಆಷಾಢ ಶುಕ್ರವಾರ ದರ್ಶನ ಮಾಡಲು ಬರುವ ಭಕ್ತರಿಗೆ ಸಕಲ ವ್ಯವಸ್ಥೆ ಕಲ್ಪಿಸಿಕೊಡಬೇಕು. ಯಾವುದೇ ಲೋಪ-ದೋಷಗಳು ಉಂಟಾಗದಂತೆ ನೋಡಿಕೊಳ್ಳುವಂತೆ ಅಧಿಕಾರಿಗಳು, ಸ್ಥಳೀಯ ಆಡಳಿತಕ್ಕೆ ಸೂಚಿಸಲಾಗಿದೆ ಎಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದರು. ಆಷಾಢ ಶುಕ್ರವಾರದ ಕಾರಣದಿಂದ ಚಾಮುಂಡಿ ಬೆಟ್ಟದಲ್ಲಿ ಕೈಗೊಂಡಿರುವ ಸಿದ್ಧತೆಗಳನ್ನು ಗುರುವಾರ ಪರಿಶೀಲಿಸಿದ ಬಳಿಕ ಪತ್ರಕರ್ತರೊಂದಿಗೆ ಅವರು ಮಾತನಾಡಿದರು. ಮೊದಲ ಆಷಾಢ ಶುಕ್ರವಾರದಂದು ಬೆಟ್ಟಕ್ಕೆ ಬಂದಿದ್ದ ಭಕ್ತರಿಗೆ ಸಾಕಷ್ಟು ಅನಾನುಕೂಲ ಆಗಿರುವ ಬಗ್ಗೆ ನಮ್ಮ ಕಚೇರಿಗೆ ದೂರುಗಳು ಬಂದಿವೆ. ಈ ಕಾರಣದಿಂದ ಬೆಟ್ಟಕ್ಕೆ ಆಗಮಿಸಿ, ಇಲ್ಲಿ ನಡೆದಿರುವ ಸಿದ್ಧತೆ ಹಾಗೂ ಭಕ್ತರಿಗೆ ಮಾಡಲಾಗಿರುವ ವ್ಯವಸ್ಥೆಯನ್ನು ಪರಿಶೀಲಿಸಿದ್ದೇನೆ. ಕೆಲವೊಂದು ಪರಿಣಾಮಕಾರಿ ಕ್ರಮಗಳನ್ನು ತೆಗೆದುಕೊಳ್ಳುವಂತೆ ತಿಳಿಸಲಾಗಿದೆ ಎಂದರು. ಪ್ರಮುಖವಾಗಿ ವಿಶೇಷ ದರ್ಶನಕ್ಕೆ 2ಸಾವಿರ ನಿಗದಿಪಡಿಸಿರುವ ಬಗ್ಗೆ ದೂರುಗಳು ಕೇಳಿಬಂದಿವೆ. ಅಧಿಕಾರಿಗಳೊಂದಿಗೆ ಈ ಬಗ್ಗೆ ಮಾತನಾಡಿದ್ದೇನೆ. ಟಿಕೆಟ್ ದರವನ್ನು ಕಡಿಮೆ ಮಾಡುವ ಬಗ್ಗೆ ಚರ್ಚಿಸಲಾಗಿದೆ. ಈ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲಿ ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು' ಎಂದು ಸ್ಪಷ್ಟಪಡಿಸಿದರು.

**ಅರಿಸಿನ-ಕುಂಕುಮ:** ಬೆಟ್ಟದ ಮೇಲೆ ರಾಸಾಯನಿಕಯುಕ್ತ ಅರಿಸಿನ-ಕುಂಕುಮ ಮಾರಾಟ ಮಾಡುತ್ತಿರುವ ಬಗ್ಗೆಯೂ ಗಮನಹರಿಸಲಾಗಿದೆ. ಪ್ಲಾಸ್ಟಿಕ್ ಮುಕ್ತಗೊಳಿಸಿದಂತೆ ಬೆಟ್ಟದ ಮೇಲಿರುವ ಎಲ್ಲಾ ಅಂಗಡಿಗಳು ರಾಸಾಯನಿಕೇತರ ಸಾವಯವ ಅರಿಸಿನ-ಕುಂಕುಮವನ್ನು ಕಡ್ಡಾಯವಾಗಿ ಮಾರುವಂತೆ ನಿರ್ದೇಶನ ನೀಡಲಾಗಿದೆ ಎಂದು ಮಾಹಿತಿ ನೀಡಿದರು. ಚಾಮರಾಜನಗರ ಜಿಲ್ಲೆಯಲ್ಲಿ ಇತ್ತೀಚಿಗಿನ ಹುಲಿಗಳ ಸಾವು ಹಾಗೂ ಕೋತಿಗಳ ಮಾರಣ ಹೋಮ ಘಟನೆಗಳು ಖಂಡನೀಯ. ಹುಲಿಗಳ ಸಂರಕ್ಷಣೆ ಆಗಬೇಕಾಗಿದೆ. ಪ್ರವಾಸೋದ್ಯಮ ಅಭಿವೃದ್ಧಿಪಡಿಸಬೇಕು ಹಾಗೂ ನಮ್ಮ ವನ ಸಂಪತ್ತು ಹೆಚ್ಚಿಸಬೇಕಾದ ನಿಟ್ಟಿನಲ್ಲಿ ಅರಣ್ಯ ಇಲಾಖೆ ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಎಂದು ಸಂಸದರು ಒತ್ತಾಯಿಸಿದರು.

ಇದಕ್ಕೂ ಮುನ್ನ ಅವರು, ಬೆಟ್ಟದಲ್ಲಿ ಭಕ್ತರು ದರ್ಶನ ಮಾಡಲು ಕಲ್ಪಿಸಿರುವ ವ್ಯವಸ್ಥೆಯ ಬಗ್ಗೆ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಎಂ.ಜೆ.ರೂಪಾ ಅವರಿಂದ ಮಾಹಿತಿ ಪಡೆದುಕೊಂಡರು.

**ವಸ್ತ್ರಸಂಹಿತೆಗೆ ಬೆಂಬಲ:** ಚಾಮುಂಡಿಬೆಟ್ಟದಲ್ಲಿ ವಸ್ತ್ರಸಂಹಿತೆಯನ್ನು ಜಾರಿಗೆ ತರಬೇಕಾಗಿದೆ. ಇದಕ್ಕೆ ನನ್ನ ಬೆಂಬಲ ಸದಾ ಇರುತ್ತದೆ ಎಂದು ಯದುವೀರ್ ಹೇಳಿದರು. ನಮ್ಮ ಸಂಸ್ಕೃತಿ ಸಂಪ್ರದಾಯ ಪದ್ಧತಿಗಳನ್ನು ಮುಂದಿನ ಪೀಳಿಗೆಗೆ ತಿಳಿಸಬೇಕಾಗಿದೆ. ದೇಗುಲಕ್ಕೆ ಬರಬೇಕಾದಾಗ ಕೆಲವು ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕಾಗಿದೆ. ಇದನ್ನು ಪಾಲಿಸಬೇಕು ಎಂಬುದು ನಮ್ಮಲ್ಲಿಯೇ ಬರಬೇಕು. ಧಾರ್ಮಿಕ ಸ್ಥಳಕ್ಕೆ ಹೇಗೆ ಬರಬೇಕೋ ಅದೇ ರೀತಿಯಲ್ಲೇ ಜನರು ಬರಬೇಕು. ಇದು ಧಾರ್ಮಿಕತೆ ರಕ್ಷಣೆಗೂ ಸಹಕಾರಿಯಾಗಲಿದೆ ಎಂದು ಪ್ರತಿಪಾದಿಸಿದರು. ಬೆಟ್ಟದ ಮೇಲಿರುವ ಜಾಗದ ಮಿತಿಯನ್ನು ಎಲ್ಲರೂ ತಿಳಿದುಕೊಳ್ಳಬೇಕು. ಅನ್ನದಾಸೋಹ ಪಾರ್ಕಿಂಗ್ ವಿಚಾರದಲ್ಲಿ ಜನರು ಕೂಡ ಅರ್ಥ ಮಾಡಿಕೊಳ್ಳಬೇಕು. ಅನ್ನ ದಾಸೋಹ ಮಾಡಬೇಕು ಎನಿಸುವವರು ಆಡಳಿತಾಧಿಕಾರಿ ಅನುಮತಿ ಪಡೆದು ಸೂಕ್ತ, ನಿಗದಿತ ಸ್ಥಳದಲ್ಲಿ ನಡೆಸಬೇಕು ಎಂದು ಸಲಹೆ ನೀಡಿದರು.

**ಮುಖ್ಯಮಂತ್ರಿ ನಡವಳಿಕೆಯೇ ಕಾರಣ:** ಧಾರವಾಡದ ಪೊಲೀಸ್ ಅಧಿಕಾರಿ ನಾರಾಯಣ ಭರಮನಿ ಸ್ವಯಂ ನಿವೃತ್ತಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಡವಳಿಕೆಯೇ ಕಾರಣ. ಅವರ ಮೇಲೆ ಮುಖ್ಯಮಂತ್ರಿ ವೇದಿಕೆಯಲ್ಲೇ ಗದರಿದ್ದರು. ಅಧಿಕಾರಿಗಳು ತಪ್ಪು ಮಾಡಿದರೆ ಕಾನೂನು ಚೌಕಟ್ಟಿನಲ್ಲಿ ಕ್ರಮ ಆಗಬೇಕು. ಅದನ್ನ ಬಿಟ್ಟು ಬಹಿರಂಗವಾಗಿ ಅವಮಾನಿಸುವುದು ಸರಿಯಲ್ಲ ಎಂದು ಯದುವೀರ್ ಪ್ರತಿಕ್ರಿಯಿಸಿದರು. ಅಧಿಕಾರಿಗಳು-ಜನಪ್ರತಿನಿಧಿಗಳು ಪರಸ್ಪರ ಗೌರವ ಕೊಟ್ಟು ಕೆಲಸ ಮಾಡಬೇಕು ಎಂದರು.



ಉದಯವಾಹಿನಿ ಚಿತ್ರ

**ಆಷಾಢ ಶುಕ್ರವಾರದಂದು ಬಾದಾಮಿ ಹಾಲು ಡ್ರೈ ಫ್ರೂಟ್ಸ್ ಒಂದಷ್ಟು ಜನರಿಗೆ ಸಿಕ್ಕಿದೆ. ಸಾಕಷ್ಟು ಜನರಿಗೆ ಸಿಕ್ಕಿಲ್ಲ. ಈ ಗೊಂದಲ ಸರಿಪಡಿಸುವ ಬಗ್ಗೆ ಪ್ರಾಧಿಕಾರ ತಿಳಿಸಿದೆ**
**- ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್**

**ದೇಗುಲದಲ್ಲಿ ಮೊಬೈಲ್ ಫೋನ್ ಬ್ಯಾನ್ ಚಿಂತನೆ**

**ತಿರುಪತಿ ಮಾದರಿಯಲ್ಲಿ ನಮ್ಮ ಚಾಮುಂಡಿ ಬೆಟ್ಟದಲ್ಲೂ ಮೊಬೈಲ್ ಫೋನ್ ಹಾಗೂ ಇತರ ವಿದ್ಯುನ್ಮಾನ ಸಾಧನಗಳನ್ನು ನಿಷೇಧಿಸಬೇಕು ಎಂಬುದು ನಮ್ಮ ಆಶಯವಾಗಿದೆ. ಈ ನಿಟ್ಟಿನಲ್ಲಿ ಅತಿ ಶೀಘ್ರದಲ್ಲೇ ನಿರ್ಧಾರ ಹೊರಬೀಳಲಿದೆ ಎಂದು ಯದುವೀರ್ ತಿಳಿಸಿದರು. ದೇವಿಯ ಫೋಟೊ ಯಾರು ಫೋನ್‌ನಲ್ಲಿ ತೆಗೆಯಬಾರದು. ಕೆಲವರಿಗೆ ಚಾಮುಂಡಿ ತಾಯಿಯ ಫೋಟೊ ಮೊಬೈಲ್ ಫೋನ್‌ನಲ್ಲಿ ಇಟ್ಟುಕೊಳ್ಳಬೇಕೆಂಬ ಆಸೆ ಇರುತ್ತದೆ. ಅಂಥವರಿಗೆ ಫೋಟೊಗಳು ಬೇರೆ ವಿಧಾನದಲ್ಲಿ ದೊರೆಯುವಂತೆ ಮಾಡಲಾಗುವುದು ಎಂದರು.**

# ಮಿನಿ ನ್ಯೂಸ್

## ಬೆಟ್ಟ ಹತ್ತಿ ಚಾಮುಂಡಿ ಬೆಟ್ಟಕ್ಕೆ ಬರುವ ಭಕ್ತರಿಗೆ ಗುಡ್ ನ್ಯೂಸ್

• ಉದಯವಾಹಿನಿ, ಮೈಸೂರು

ಆಷಾಢ ಮಾಸದಲ್ಲಿ ಚಾಮುಂಡಿ ಬೆಟ್ಟಕ್ಕೆ ಮೆಟ್ಟಿಲು ಮೂಲಕ ಹತ್ತಿ ಬರುವ ಭಕ್ತರ ಅನುಕೂಲಕ್ಕಾಗಿ ಧರ್ಮದರ್ಶನ ಸರತಿ ಸಾಲಿನಲ್ಲಿ ನಿಂತು ದರ್ಶನ ಮಾಡಬಹುದಾಗಿದೆ. ಮೊದಲ ಆಷಾಡ ಶುಕ್ರವಾರ ಮೆಟ್ಟಿಲುಗಳ ಮೂಲಕ ನಿರೀಕ್ಷೆಗೂ ಮೀರಿ ಹೆಚ್ಚು ಜನರ ಬಂದ ಕಾರಣ ಜನಸಂದಣಿಯಿಂದಾಗಿ ದೇವರ ದರ್ಶನಕ್ಕೆ ಮೆಟ್ಟಿಲು ಹತ್ತಿ ಬಂದ ಭಕ್ತರಿಗೆ ತಡವಾಗಿರುತ್ತದೆ. ಆದರೆ ಧರ್ಮದರ್ಶನ ಅಥವಾ ಟಿಕೆಟ್ ಪಡೆದು ದರ್ಶನ ಪಡೆದವರು ತ್ವರಿತಗತಿಯಲ್ಲಿ ದೇವಿಯ ದರ್ಶನ ಪಡೆದು ವಾಪಸ್ಸಾಗಿರುತ್ತಾರೆ. ಈ ಹಿನ್ನೆಲೆಯಲ್ಲಿ ಮೆಟ್ಟಿಲು ಹತ್ತಿ ಬರುವ ಭಕ್ತರಿಗೆ ಆಗಬಹುದಾದ ಅನಾನೂಕೂಲವನ್ನು ತಪ್ಪಿಸಲು ಜಿಲ್ಲಾಡಳಿತ ಚಾಮುಂಡಿ ಬೆಟ್ಟದಲ್ಲಿ ಸಾಕಷ್ಟು ಸುಧಾರಿತ ಕ್ರಮಗಳನ್ನು ತೆಗೆದುಕೊಂಡಿದೆ.

ಮುಂದಿನ ಎರಡನೇ ಆಷಾಢ ಹಾಗೂ ಉಳಿದ ಆಷಾಡ ಮಾಸದ ಶುಕ್ರವಾರಗಳಲ್ಲಿ ಮೆಟ್ಟಿಲು ಹತ್ತಿ ಬಂದ ಭಕ್ತರು ಧರ್ಮ ದರ್ಶನದ ಸರತಿ ಸಾಲಿನಲ್ಲಿ ನಿಂತು ದರ್ಶನ ಮಾಡಬಹುದಾಗಿದೆ. ಭಕ್ತರಿಗೆ ನಾಡದೇವಿಯ ಸುಗಮ ದರ್ಶನಕ್ಕಾಗಿ ಲಲಿತಮಹಲ್ ಪ್ಯಾಲೇಸ್ ಆವರಣದಿಂದ ಉಚಿತ ಬಸ್ ವ್ಯವಸ್ಥೆ ಮಾಡಲಾಗಿದ್ದು ಭಕ್ತಾಧಿಗಳು ಉಚಿತ ಬಸ್ ಸೇವೆ ಪಡೆದು ಕಡಿಮೆ ಸಮಯದಲ್ಲಿ ಸುಗಮವಾಗಿ ದೇವರ ದರ್ಶನ ಪಡೆದುಕೊಳ್ಳಬಹುದಾಗಿದೆ. ಆದುದರಿಂದ ಭಕ್ತಾಧಿಗಳು ಉಚಿತ ಬಸ್ ಸೇವೆಯ ಸದುಪಯೋಗವನ್ನು ಮಾಡಿಕೊಂಡು ದೇವರ ದರ್ಶನ ಮಾಡಬಹುದು ಎಂದು ಶ್ರೀ ಚಾಮುಂಡೇಶ್ವರಿ ಅಭಿವೃದ್ಧಿ ಪ್ರಾಧಿಕಾರ ಪ್ರಕಟಣೆಯಲ್ಲಿ ತಿಳಿಸಿದೆ.

## ಕಾರ್ಮಿಕರ ಮಕ್ಕಳಿಗೆ ವಸತಿ ಶಾಲೆ ಸಂಪುಟ ತೀರ್ಮಾನ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿ ನೋಂದಾಯಿತರಾಗಿರುವ ಕಾರ್ಮಿಕರ ಮಕ್ಕಳಿಗಾಗಿ ಒಟ್ಟು 1,125 ಕೋಟಿ ವೆಚ್ಚದಲ್ಲಿ ಜಿಲ್ಲೆಗೊಂದರಂತೆ ವಸತಿ ಶಾಲೆ ಆರಂಭಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ. ನಂದಿಬೆಟ್ಟದಲ್ಲಿ ನಡೆದ ಸಚಿವ ಸಂಪುಟ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಿಎಂ ಸಿದ್ದರಾಮಯ್ಯ ಈ ವಿಷಯ ತಿಳಿಸಿದರು. ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಕೇಂದ್ರ ಲೋಕಸೇವಾ ಆಯೋಗದ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಪಡೆಯುವುದಕ್ಕೆ ಅನುಕೂಲವಾಗುವಂತೆ ಬೆಂಗಳೂರಿನಲ್ಲಿ 10 ಕೋಟಿ ವೆಚ್ಚದಲ್ಲಿ ಎರಡು ವಸತಿ ನಿಲಯ ನಿರ್ಮಿಸಲಾಗುವುದು ಎಂದೂ ಅವರು ತಿಳಿಸಿದರು. ಆರೋಗ್ಯ, ಶಿಕ್ಷಣ, ಕೃಷಿ, ತೋಟಗಾರಿಕೆ, ಪ್ರವಾಸೋದ್ಯಮ, ನೀರಾವರಿ, ರಸ್ತೆ ಅಭಿವೃದ್ಧಿಗೆ ಸಂಬಂಧಿಸಿದ 3,400 ಕೋಟಿ ವೆಚ್ಚದ ಹಲವು ಯೋಜನೆಗಳಿಗೆ ಅನುಮೋದನೆ ನೀಡಿದ್ದೇವೆ ಎಂದರು.

## ಗ್ರಾಮ ಆಡಳಿತಾಧಿಕಾರಿ ನಾಗರಾಜ್ ಲೋಕಾಯುಕ್ತ ಬಲೆಗೆ

• ಉದಯವಾಹಿನಿ, ಗುಡಿಬಂಡೆ

ಜಮೀನು ಪೋಡಿ ಮಾಡಿಕೊಡಲು ರೈತರೊಬ್ಬರಿಂದ 55 ಸಾವಿರ ಲಂಚ ಪಡೆದ ಗ್ರಾಮ ಆಡಳಿತಾಧಿಕಾರಿಯು ಲೋಕಾಯುಕ್ತ ಅಧಿಕಾರಿಗಳಿಗೆ ಗುರುವಾರ ಸಿಕ್ಕಿಬಿದ್ದಿದ್ದಾರೆ. ಗುಡಿಬಂಡೆ ತಾಲ್ಲೂಕು ಕಚೇರಿಯ ಹಂಪಸಂದ್ರ, ಕಂದಾಯ ವೃತ್ತದ ಗ್ರಾಮ ಆಡಳಿತಾಧಿಕಾರಿ ನಾಗರಾಜ್ ಲೋಕಾಯುಕ್ತರಿಂದ ಬಂಧನವಾದರು. ಮಂಜುನಾಥ ಎಂಬುವರು ತಮ್ಮ ತಂದೆಗೆ ಸೇರಿದ 2.20 ಎಕರೆ ಜಮೀನು ಪೋಡಿ ಮಾಡಿಸಿಕೊಳ್ಳಲು ಮುಂದಾಗಿದ್ದರು.

ಪೋಡಿ ಮಾಡಿಕೊಡಲು ಮಂಜುನಾಥ್ ಅವರ ಬಳಿ ಗ್ರಾಮ ಆಡಳಿತಾಧಿಕಾರಿ ನಾಗರಾಜ್ 55 ಸಾವಿರಕ್ಕೆ ಬೇಡಿಕೆ ಇಟ್ಟಿದ್ದರು. ಈ ಪ್ರಕಾರ ಮಂಜುನಾಥ್ ಅವರು ಗುಡಿಬಂಡೆಯ ಐಬಿ ರಸ್ತೆಯ ಖಾಸಗಿ ಕಚೇರಿಯಲ್ಲಿ ನಾಗರಾಜ್ ಅವರಿಗೆ ಹಣ ನೀಡಿದ್ದರು. ಈ ವೇಳೆ ದಾಳಿ ನಡೆಸಿದ ಲೋಕಾಯುಕ್ತ ಅಧಿಕಾರಿಗಳು, ನಾಗರಾಜ್ ಅವರನ್ನು ಬಂಧಿಸಿದ್ದಾರೆ. ಲೋಕಾಯುಕ್ತ ಡಿವೈಎಸ್‌ಪಿ ವೀರೇಂದ್ರ ಕುಮಾರ್. ಪಿ, ಇನ್ಸ್‌ಪೆಕ್ಟರ್ ನಿರ್ಮಲಾ ಅವರು ದಾಳಿ ನಡೆಸಿದ್ದರು.

## ಬಯಲುಸೀಮೆ ರೈತರ ಆರ್ಥಿಕ ಸದೃಢತೆಗೆ ಹಿಪ್ಪುನೇರಳೆ ಸೂಕ್ತ

• ಉದಯವಾಹಿನಿ, ಕೊಡಿಗೇನಹಳ್ಳಿ

ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆಯಡಿ ರೈತರು ಹಿಪ್ಪುನೇರಳೆ ನಾಟಿ ಮಾಡಿ ರೇಷ್ಮೆ ಬೆಳೆ ಬೆಳೆದು ಆರ್ಥಿಕವಾಗಿ ಸದೃಢರಾಗಬಹುದು ಎಂದು ರೇಷ್ಮೆ ಉಪ ನಿರ್ದೇಶಕ ಟಿ.ಲಕ್ಷ್ಮೀನರಸಯ್ಯ ತಿಳಿಸಿದರು. ಪುರವರ ಹೋಬಳಿ ಬ್ಯಾಲ್ಯ ಗ್ರಾಮದಲ್ಲಿ ನಡೆದ ರೇಷ್ಮೆ ಗುಂಪು ಸಭೆಯಲ್ಲಿ ಅವರು ಮಾತನಾಡಿದರು. ಒಂದು ಎಕರೆಯಲ್ಲಿ 4 x 4 ಅಂತರದಲ್ಲಿ ನಾಟಿ ಮಾಡಿದಲ್ಲಿ ಕೂಲಿವೆಚ್ಚ, ಸಾಮಗ್ರಿ, ವೆಚ್ಚ ಸೇರಿ 60,000 ಸೌಲಭ್ಯ ಪಡೆಯಬಹುದಾಗಿದೆ. ಜಿಲ್ಲೆಯು ದ್ವಿತಳಿ ರೇಷ್ಮೆ ಗೂಡು ಉತ್ಪಾದನೆಯಲ್ಲಿ ಮಂಚೂಣಿಯಲ್ಲಿದ್ದು, ಹಾಲಿ ರೇಷ್ಮೆ ಗೂಡಿನ ದರ ಪ್ರತಿ ಕ್ವಿಂಟಲ್‌ಗೆ 50,000ದಿಂದ 65,000 ಇದೆ. ಸಮಗ್ರ ಕೃಷಿ ಪದ್ಧತಿಯಲ್ಲಿ ರೇಷ್ಮೆ ಬೆಳೆದಲ್ಲಿ ರೈತರು ಆರ್ಥಿಕ ಸ್ವಾವಲಂಬನೆ ಪಡೆಯಬಹುದಾಗಿದೆ. ಇಲಾಖೆಯಿಂದ ರೇಷ್ಮೆ ಹುಳು ಸಾಕಣೆ, ಮನೆ, ಹನಿ ನೀರಾವರಿ ಘಟಕಗಳಿಗೆ, ಹುಳು ಸಾಕಣೆ ಸಲಕರಣೆಗಳಿಗೆ ಸಹಾಯಧನ ನೀಡಲಾಗುವುದು. ದ್ವಿತಳಿ ಬೆಳೆಗಾರರಿಗೆ ಉಚಿತ ಸೋಂಕು ನಿವಾರಕಗಳನ್ನು ಇಲಾಖೆಯಿಂದ ವಿತರಿಸಲಾಗುವುದು ಎಂದು ವಿವರಿಸಿದರು.

## ಜೆಜೆಎಂ ಅನುಷ್ಠಾನಕ್ಕೆ ಸೀಗಲಹಳ್ಳಿ ಗ್ರಾಮಸ್ಥರ ವಿರೋಧ

• ಉದಯವಾಹಿನಿ, ಶಿರಾ

ತಾಲ್ಲೂಕಿನ ಸೀಗಲಹಳ್ಳಿ ಗ್ರಾಮದಲ್ಲಿ ಜಲಜೀವನ್ ಮಿಷನ್ ಮನೆ ಮನೆಗೆ ಗಂಗೆ ಯೋಜನೆ ಅನುಷ್ಠಾನಕ್ಕೆ ಗ್ರಾಮಸ್ಥರು ಅಸಮ್ಮತಿ ಸೂಚಿಸಿ, ಕಾಮಗಾರಿ ನಡೆಸದಂತೆ ಪಟ್ಟು ಹಿಡಿದಿದ ಕಾರಣ ಯೋಜನೆ ಅನುಷ್ಠಾನ ಕೈಬಿಡಲು ತೀರ್ಮಾನಿಸಲಾಯಿತು. ಸೀಗಲಹಳ್ಳಿ ಗ್ರಾಮದ ಗಣೇಶ ದೇವಸ್ಥಾನದ ಬಳಿ ಗುರುವಾರ ನಾದೂರು ಗ್ರಾ.ಪಂ. ಅಧ್ಯಕ್ಷೆ ತುಳಸಿ ಮಧುಸೂದನ್ ಅಧ್ಯಕ್ಷತೆಯಲ್ಲಿ ನಡೆದ ವಿಶೇಷ ಗ್ರಾಮಸಭೆಯಲ್ಲಿ ಯೋಜನೆಯ ಅನುಷ್ಠಾನಕ್ಕೆ ತೀವ್ರ ವಿರೋಧ ವ್ಯಕ್ತವಾಯಿತು. ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅನುದಾನದಡಿಯಲ್ಲಿ ಯೋಜನೆ ಜಾರಿಯಾಗುತ್ತಿದ್ದು, ಪ್ರತಿಯೊಂದು ಮನೆಗೆ ನೀರು ಕೊಡುವುದು ಸರ್ಕಾರದ ಉದ್ದೇಶ. ಕಾಮಗಾರಿಗೆ ಅವಕಾಶ ಮಾಡಿಕೊಡುವಂತೆ ಅಧಿಕಾರಿಗಳು ಮನವಿ ಮಾಡಿದರು. ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆ ಎಂಜಿನಿಯರ್ ಸಣ್ಣಚಿತ್ತಯ್ಯ ಮಾತನಾಡಿ, ಗ್ರಾಮದಲ್ಲಿ 46.80ಲಕ್ಷ ವೆಚ್ಚದಲ್ಲಿ ಕಾಮಗಾರಿ ಕೈಗೊಳ್ಳಲಿದ್ದು ಗ್ರಾಮಸ್ಥರು ಯೋಜನೆಯೇ ಬೇಡ ಎಂದರೆ ಮತ್ತೆ ಅನುದಾನ ಲಭ್ಯವಾಗುದಿಲ್ಲ ಎಂದು ಸಭೆಯ ಗಮನಕ್ಕೆ ತಂದರು.

ಅಂತರಾಳದಿಂದ... EDITORIAL

# ಜನಸಂದಣಿ ನಿರ್ವಹಣೆಯ ಸವಾಲು: ಪೊಲೀಸರಿಗೆ ಜನರ ಸಹಕಾರ ಅಗತ್ಯ



ಹಬ್ಬಗಳು, ರ್‍ಯಾಲಿಗಳು, ಕ್ರೀಡೆಗಳು ಮುಂತಾದ ಬೃಹತ್ ಸಾರ್ವಜನಿಕ ಕಾರ್ಯಕ್ರಮಗಳಲ್ಲಿ ಜನಸಂದಣಿಯನ್ನು ನಿರ್ವಹಿಸುವುದು ಸುಲಭವಲ್ಲ. ಕಾನೂನು, ಸುವ್ಯವಸ್ಥೆಯಲ್ಲಿ ಕೊಂಚ ಏರುಪೇರಾದರೂ ಅಪಾಯ ಸಂಭವಿಸುವ ಸಾಧ್ಯತೆಯಿರುತ್ತದೆ. ಜನಸಂದಣಿಯನ್ನು ಪರಿಣಾಮಕಾರಿಯಾಗಿ ನಿರ್ವಹಿಸುವುದರೊಂದಿಗೆ ಸಂಭಾವ್ಯ ಅಪಾಯಗಳನ್ನು ತಪ್ಪಿಸುವುದು ಹೊಸ ಎಸ್‌ಒಪಿಯ ಉದ್ದೇಶವಾಗಿದೆ.

**ಸಾರ್ವಜನಿಕ ಸಮಾರಂಭಗಳಲ್ಲಿ ಜನಸಂದಣಿ ನಿಯಂತ್ರಣಕ್ಕಾಗಿ ಪೊಲೀಸ್ ಇಲಾಖೆ ಹೊಸ ಪ್ರಮಾಣೀಕೃತ ಕಾರ್ಯಾಚರಣೆ ವಿಧಾನವನ್ನು (ಎಸ್‌ಒಪಿ) ರೂಪಿಸಿರುವುದು ತೀರಾ ಅಗತ್ಯವಾಗಿದ್ದ ಕ್ರಮ. ಐಪಿಎಲ್ ಟಿ-20 ಕ್ರಿಕೆಟ್ ಟೂರ್ನಿಯ ಹದಿನೆಂಟನೇ ಆವೃತ್ತಿಯಲ್ಲಿ 'ರಾಯಲ್ ಚಾಲೆಂಜರ್ಸ್ ಬೆಂಗಳೂರು' ತಂಡ ಚಾಂಪಿಯನ್ ಆದುದನ್ನು ಸಂಭ್ರಮಿಸುವ ವಿಜಯೋತ್ಸವ ಆಚರಣೆಯ ಸಂದರ್ಭದಲ್ಲಿ, ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತದಲ್ಲಿ ಹನ್ನೊಂದು ಮಂದಿ ಸಾವಿಗೀಡಾಗಿದ್ದರು. ಆ ದುರಂತದ ಹಿನ್ನೆಲೆಯಲ್ಲಿ ಜಾಗೃತಗೊಂಡಿರುವ ಪೊಲೀಸ್ ಇಲಾಖೆ ಹೊಸ 'ಎಸ್‌ಒಪಿ' ರಚಿಸಿದೆ. ಹೆಚ್ಚಿನ ಸಂಖ್ಯೆಯಲ್ಲಿ ಜನ ಸೇರುವ ಬೃಹತ್ ಕಾರ್ಯಕ್ರಮಗಳು, ಸಭೆ ಹಾಗೂ ವಿಜಯೋತ್ಸವದಂಥ ಕಾರ್ಯಕ್ರಮಗಳಲ್ಲಿ ಸಂಭವಿಸಬಹುದಾದ ಅಹಿತಕರ ಘಟನೆಗಳನ್ನು ತಡೆಗಟ್ಟುವ ಉದ್ದೇಶದಿಂದ ಹೊಸ 'ಎಸ್‌ಒಪಿ' ರಚಿಸುವುದಾಗಿ ಗೃಹ ಸಚಿವರು ತಿಳಿಸಿದ್ದರು.**

ಸುರಕ್ಷತಾ ಕ್ರಮಗಳ ಪರಿಶೀಲನೆಯಲ್ಲಿ ಸೂಕ್ತವೆಂದು ಕಂಡುಬಾರದ ಸ್ಥಳಗಳಲ್ಲಿ ಬೃಹತ್ ಕಾರ್ಯಕ್ರಮಗಳ ಆಯೋಜನೆಗೆ ನಿರಾಕರಣೆ, ಬೆಂಕಿ ಮತ್ತು ಕಾಲ್ತುಳಿತದಂತಹ ಅವಘಡಗಳ ನಿಯಂತ್ರಣಕ್ಕೆ ತುರ್ತು ಸಿದ್ಧತೆ ಮಾಡಿಕೊಳ್ಳುವುದು ಜನಸಮೂಹದ ವರ್ತನೆಯ ಪರಿಶೀಲನೆ, ಜನಸಂದಣಿ ನಿರ್ವಹಣೆಗೆ ಪೂರ್ವ ತಯಾರಿ, ಆಯೋಜಕರೊಂದಿಗೆ ಸಮನ್ವಯ ಸೇರಿದಂತೆ, ಜನಸಂದಣಿ ನಿರ್ವಹಣೆಗೆ ಅಗತ್ಯವಾದ ಅನೇಕ ಅಂಶಗಳನ್ನು ಮಾರ್ಗಸೂಚಿ ಒಳಗೊಂಡಿದೆ.

ತುರ್ತು ಸಂದರ್ಭದಲ್ಲಿ ವ್ಯಕ್ತಿಯ ಜೀವ ಉಳಿಸಲು 'ಕಾರ್ಡಿಯೊ ಪಲ್ಮನರಿ ರಿಸಸಿಟೇಶನ್' (ಸಿಪಿಆರ್) ಕುರಿತು ಪೊಲೀಸರಿಗೆ ತರಬೇತಿ ನೀಡಲು ಇಲಾಖೆ ಉದ್ದೇಶಿಸಿದೆ. ಇದರಿಂದಾಗಿ ತುರ್ತು ಸನ್ನಿವೇಶದಲ್ಲಿ ವ್ಯಕ್ತಿಯ ಜೀವ ಉಳಿಸಲು ಅಗತ್ಯವಾದ ಪ್ರಥಮ ಚಿಕಿತ್ಸೆಯನ್ನು ನೀಡಲು ಪೊಲೀಸರಿಗೆ ಸಾಧ್ಯವಾಗಲಿದೆ. ಭಾರಿ ಜನಸಂದಣಿ ಸೇರುವ ಸಂದರ್ಭದಲ್ಲಿ ಅಹಿತಕರ ಘಟನೆಗಳು ಹಾಗೂ ಸಾವುನೋವಿಗೆ ಕಾರಣವಾಗಬಹುದಾದ ಕಾಲ್ತುಳಿತ ಸಂಭವಿಸುವುದು ಇತ್ತೀಚೆಗೆ ಹೆಚ್ಚಾಗಿದೆ. ವಿವಿಧ ಉದ್ದೇಶಗಳಿಂದ ನಡೆಯುವ ಸಮಾವೇಶಗಳಲ್ಲಿ ದೊಡ್ಡ ಸಂಖ್ಯೆಯಲ್ಲಿ ಜನ ಸೇರುವುದಿದೆ. ಲಕ್ಷಾಂತರ ಮಂದಿ ಸೇರುವ ಜಾತ್ರೆಗಳು ನಾಡಿನ ವಿವಿಧ ಭಾಗಗಳಲ್ಲಿ ನಡೆಯುತ್ತವೆ.

ಇಂಥ ಸಂದರ್ಭಗಳಲ್ಲಿ ಜನಸಂದಣಿಯ ನಿರ್ವಹಣೆ ಪೊಲೀಸರಿಗೆ ದೊಡ್ಡ ಸವಾಲು. ಜನಸಂದಣಿಯನ್ನು ನಿರ್ವಹಿಸುವುದರ ಜೊತೆಗೆ ದುರ್ಘಟನೆಗಳು ಸಂಭವಿಸದಂತೆ ನೋಡಿಕೊಳ್ಳಲು ಪೊಲೀಸ್ ಇಲಾಖೆ ಹೊಸ 'ಎಸ್‌ಒಪಿ' ಜಾರಿಗೆ ತಂದಿರುವುದು ಮಹತ್ವದ ಕ್ರಮ. ಆದರೆ, ಈ ಮಾರ್ಗಸೂಚಿ ಕಡತದಲ್ಲಷ್ಟೇ ಉಳಿಯದೆ ಕಟ್ಟುನಿಟ್ಟಾಗಿ ಅನುಷ್ಠಾನಕ್ಕೆ ತರುವ ಇಚ್ಛಾಶಕ್ತಿಯನ್ನು ಇಲಾಖೆ ಪ್ರದರ್ಶಿಸಬೇಕು. ರಾಜಕಾರಣಿಗಳು, ಅಧಿಕಾರಿಗಳು, ಪ್ರಭಾವಿ ವ್ಯಕ್ತಿಗಳ ಇಶಾರೆಗೆ ಓಗೊಡದೆ ಕರ್ತವ್ಯವನ್ನು ನಿರ್ವಹಿಸುವುದು ಪೊಲೀಸರಿಗೆ ಸಾಧ್ಯವಾದರೆ, ಅಪಾಯಗಳ ಪ್ರಮಾಣ, ಪರಿಣಾಮ ಸಾಕಷ್ಟು ಕಡಿಮೆಯಾಗುತ್ತದೆ. ಕಾಲ್ತುಳಿತ ದುರಂತದಂತಹ ಬಹುತೇಕ ಘಟನೆಗಳಲ್ಲಿ ಪೊಲೀಸ್ ವೈಫಲ್ಯದ ಜೊತೆಗೆ ಆಯೋಜಕರ



ನಿರ್ಲಕ್ಷ್ಯವೂ ಮುಖ್ಯ ಪಾತ್ರ ವಹಿಸುತ್ತದೆ. ಕಾನೂನು ಮತ್ತು ಸುವ್ಯವಸ್ಥೆಯ ವಿವೇಚನೆಯಿಲ್ಲದೆ ಅತಿ ಉತ್ಸಾಹದಿಂದ ಜನ ಸೇರಿಸುವವರೂ ಇದ್ದಾರೆ. ಇಂಥ ಕಾರ್ಯಕ್ರಮಗಳ ಆಯೋಜನೆಯ ಹಿಂದೆ ಕೆಲವೊಮ್ಮೆ ಸರ್ಕಾರದ ನೇರ ಅಥವಾ ಪರೋಕ್ಷ ಪಾತ್ರವೂ ಇರುತ್ತದೆ. ಪೊಲೀಸ್ ಇಲಾಖೆ ಸಿದ್ಧಪಡಿಸಿರುವ ಹೊಸ ಎಸ್‌ಒಪಿ ಜನರ ಸುರಕ್ಷತೆಗೆ ಒತ್ತು ನೀಡುವಂತಿದೆ. ಭಾರಿ ಸಂಖ್ಯೆಯಲ್ಲಿ ಜನರನ್ನು ಸೇರಿಸುವುದು ಬಹು ದೊಡ್ಡ ಹೊಣೆಗಾರಿಕೆ ಎನ್ನುವುದನ್ನು ಸಂಘಟಕರು ಅರ್ಥ ಮಾಡಿಕೊಂಡು ಕಾರ್ಯಕ್ರಮಗಳನ್ನು ಆಯೋಜಿಸಿದರೆ, ಅಹಿತಕರ ಘಟನೆಗಳ ಸಾಧ್ಯತೆ ಸಾಕಷ್ಟು ಕಡಿಮೆಯಾಗುತ್ತದೆ. ಹೆಚ್ಚಿನ ಸಂಖ್ಯೆಯಲ್ಲಿ ಜನ ಒಂದೆಡೆ ಸೇರಿದಾಗ ವಿವೇಚನೆಯಿಂದ ವರ್ತಿಸುವ ಹೊಣೆಗಾರಿಕೆ ನಾಗರಿಕರದ್ದೂ ಆಗಿದೆ.

# ರಾಮಾಯಣ



## ಭರದ್ವಾಜ ಮುನಿಯಿಂದ ಭರತಾದಿಗಳಿಗೆ ಔತಣ

• ಹಿಂದಿನ ಸಂಚಿಕೆಯಿಂದ **91 ನೆಯ ಅಧ್ಯಾಯ**


ದಿವ್ಯವಾದ ಶ್ರೀಗಂಧವೃಕ್ಷಗಳುಳ್ಳ ಮಲಯ ದುರ್ಧರ ಪರ್ವತಗಳನ್ನು ಸೋಂಕಿ ಶೈತ್ಯಸೌರಭ್ಯ ಮಾಂದ್ಯಯುಕ್ತವಾದ ತಂಗಾಳಿಯು ಶರೀರಕ್ಕೆ ಸುಖವಾಗಿ ಬೀಸತೊಡಗಿತು. ದೇವತೆಗಳು ಪರಿಮಳವುಳ್ಳ, ಪುಷ್ಪವೃಷ್ಟಿಯನ್ನು ಕರೆಯತೊಡಗಿದರು. ದೇವದುಂದುಭಿಯು ಧ್ವನಿಗೈಯತೊಡಗಿತು. ಅಪ್ಸರ ಸ್ತ್ರೀಯರು ನೃತ್ಯ ಮಾಡಲಾರಂಭಿಸಿದರು. ದೇವಗಂಧರ್ವರು ವೀಣೆಗಳನ್ನು ಬಾರಿಸುತ್ತ ಗಾನ ಮಾಡಲಾರಂಭಿಸಿದರು.

ಆ ವಾದ್ಯಗಾನ ವೀಣಾಧ್ವನಿಯು ಭೂಲೋಕ ಸ್ವರ್ಗಲೋಕಗಳನ್ನು ವ್ಯಾಪಿಸಿ ಸಮಸ್ತ ಪ್ರಾಣಿಗಳ ಕಿವಿಗಳಿಗೂ ವಿಶ್ವಕರ್ಮನು ಅತ್ಯಂತ ವೈಭವಯುಕ್ತವಾದ ಬಿಡಾರಗಳನ್ನು ನಿರ್ಮಿಸಿ ಸಕಲ ಪರಿಕರಗಳಿಂದಲೂ ಸಜ್ಜುಗೊಳಿಸಿದನು. ಭರತನು ಆ ದಿವ್ಯಭವನಗಳನ್ನು ಕಂಡು ಆಶ್ಚರ್ಯಪಟ್ಟು ಅತಿಹರ್ಷದಿಂದ ಭರದ್ವಾಜಮುನೀಶ್ವರನ ಅಪ್ಪಣೆಯಂತೆ ತನ್ನ ಬಿಡಾರದ ಮನೆಯನ್ನು ಪ್ರವೇಶಿಸಿದನು. ಆಮೇಲೆ ಪುರೋಹಿತರು ಮಂತ್ರಿಗಳು ಮಿತ್ರವರ್ಗಗಳು ಮೊದಲಾದವರು ಭರತನೊಡನೆ ಬಿಡಾರದ ಮನೆಗಳನ್ನು ಪ್ರವೇಶಿಸಿ ಅಲ್ಲಿದ್ದ ಚಿತ್ರಗಳನ್ನು ನೋಡಿ ಅತ್ಯಂತ ಸಂತೋಷಯುಕ್ತರಾದರು. ಭರತನು ತನ್ನ ಬಿಡಾರದ ಮನೆಯಲ್ಲಿ ನಿರ್ಮಿಸಿದ್ದ ರಾಜಯೋಗ್ಯವಾದ ಸಿಂಹಾಸನ ಬೀಸಣಿಗೆ ಸುಪ್ಪತ್ತಿಗೆ ಮೊದಲಾದುವನ್ನು ಕಂಡನು. ಅವನು ಮಂತ್ರಿಗಳನ್ನು ಕೂಡಿಕೊಂಡು ಶ್ರೀರಾಮನ ಧ್ಯಾನಮಾಡುತ್ತ ಆ ಸಿಂಹಾಸನ ಮೊದಲಾದ ರಾಜಚಿಹ್ನೆಗಳಿಗೆ ಪ್ರದಕ್ಷಿಣ ನಮಸ್ಕಾರಗಳನ್ನು ಮಾಡಿ ಅವಕ್ಕೆ ಪೂಜೆಮಾಡಿದನು. ಕೈಯಲ್ಲಿ ಬೀಸಣಿಗೆಯನ್ನು ತೆಗೆದುಕೊಂಡು ಆ ಸಿಂಹಪೀಠದಲ್ಲಿ ಶ್ರೀರಾಮನಿರುವುದಾಗಿ ಭಾವಿಸಿ ಬೀಸಣಿಗೆಯನ್ನು ಬೀಸುತ್ತ ಮಂತ್ರಿಗಳ ಸ್ಥಾನದಲ್ಲಿ ಕುಳಿತುಕೊಂಡನು. ಆಮೇಲೆ ಮಂತ್ರಿಗಳು ತಮ್ಮ ತಮ್ಮ ಸ್ಥಳಗಳಲ್ಲಿ ಕುಳಿತುಕೊಂಡರು. ಸೇನಾಪತಿ ಮೊದಲಾದ ಅಧಿಕಾರಿಗಳು ಅವರವರ ಸ್ಥಳಗಳಲ್ಲಿ ಕುಳಿತರು.

ಆಗ ಕ್ಷಣಮಾತ್ರದಲ್ಲಿ ಪಾಯಸದ ನದಿಗಳು ಸಿದ್ಧವಾದವು. ನಾರದ ತುಂಬುರರು ಸೂರಪ್ರಭೆಯಂತೆ ತೇಜಸ್ವಿಗಳಾಗಿ ಗಾನಮಾಡುತ್ತಿದ್ದರು. ಅಲಂಬುಸೆ ಮಿಶ್ರಕೇಶಿ ಪುಂಡರಿಕೆ ವಾಮನೆ ಮೊದಲಾದ ದೇವಸ್ತ್ರೀಯರು ಭರತನ ಸಂಮುಖದಲ್ಲಿ ನರ್ತನ ಮಾಡತೊಡಗಿದರು. ಕುಬೇರನ ಚೈತ್ರರಥವೆಂಬ ಉದ್ಯಾನವನ ದಲ್ಲಿದ್ದ ಪುಷ್ಪಮಾಲಿಕೆಗಳು ಭರದ್ವಾಜಮುನಿಯ ಪ್ರಭಾವದಿಂದ ಭರತನ ಬಿಡಾರದ ಮನೆಯಲ್ಲಿ ಕಂಗೊಳಿಸಿದವು. ಆಶ್ರಮದಲ್ಲಿದ್ದ ಲತಾವೃಕ್ಷಗಳು ಪರಿಚಾರಕರ ರೂಪವನ್ನು ಧರಿಸಿ ಅವರೆಲ್ಲರ ಸೇವೆಮಾಡಿದವು. ಇದೆಲ್ಲವೂ ಭರದ್ವಾಜಮಹಾಮುನಿಯ ತಪಃಪ್ರಭಾವದಿಂದ ನಡೆಯಿತು. ಈ ರೀತಿಯಲ್ಲಿ ಭರದ್ವಾಜಮುನಿಯು ಔತಣವನ್ನು ಮಾಡಲು ಭರತನ ಪಾಳೆಯದಲ್ಲಿದ್ದ ಭಟರು ತಮ್ಮ ತಮ್ಮ ಜಾತ್ಯಾಚಾರಕ್ಕೆ ತಕ್ಕಹಾಗೆ ಬಿಡಾರಗಳಲ್ಲಿಳಿದುಕೊಂಡು ಮನಸ್ಸಿಗೆ ಬಂದಂತೆ ಭೋಜನ ಮಾಡಲಾರಂಭಿಸಿದರು. ಕೆಲವರು ಹಸಿವಿನಿಂದ ಬರಿಯ ಕಡ್ಡಾಯಗಳನ್ನು ಭಕ್ಷಣ

ಮುಂದುವರಿಯುವುದು...

# ಹಂಗಾಮಿ ಮಾಜಿ ಪ್ರಧಾನಿ ಗುಲ್ಜಾರಿ ಲಾಲ್ ನಂದರವರ 127ನೇ ವರ್ಷದ ಜನ್ಮಜಯಂತಿ





ಕಲಾ ಸಾಹಿತ್ಯ

**ಕೃಷ್ಣಪ್ಪ**
ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

• **ಉದಯವಾಹಿನಿ, ವಿಶೇಷ**

ಗುಲ್ಜಾರಿಲಾಲ್ ನಂದ ಅವರು 1898 ಜುಲೈ 4 ರಂದು ಪಂಜಾಬಿನ ಸಿಯಲ್ಕೋಟ್ ಎಂಬಲ್ಲಿ ಜನಿಸಿದರು.

ಅವರ ವಿದ್ಯಾಭ್ಯಾಸ ಲಾಹೋರ್, ಆಗ್ರಾ ಮತ್ತು ಅಲಹಾಬಾದ್ ನಡೆಯಿತು. ಅವರು ಅಲಹಾಬಾದ್ ವಿಶ್ವವಿದ್ಯಾಲಯದಲ್ಲಿ ಕಾರ್ಮಿಕರ ಸಮಸ್ಯೆಗಳ ಬಗ್ಗೆ ಸಂಶೋಧನಾತ್ಮಕ ಅಭ್ಯಾಸ ನಡೆಸಿದರು. ಆ ಬಳಿಕ ಮುಂಬೈ ವಿಶ್ವವಿದ್ಯಾಲಯದಲ್ಲಿ ಅರ್ಥಶಾಸ್ತ್ರದ ಪ್ರಾಧ್ಯಾಪಕರಾದರು. ನಂತರ ಅಸಹಕಾರ ಚಳುವಳಿಯಲ್ಲಿ ಭಾಗವಹಿಸಿದರು.

ಅಹಮದಾಬಾದ್ ಬಟ್ಟೆಗಿರಣಿ ಕಾರ್ಮಿಕ ಸಂಘದ ಕಾರ್ಯದರ್ಶಿಗಳಾಗಿದ್ದರು. ಸತ್ಯಾಗ್ರಹದಲ್ಲಿ ಪಾಲ್ಗೊಂಡಿದಕ್ಕಾಗಿ 3 ವರ್ಷಗಳ ಕಾಲ ಸೆರೆಮನೆ ವಾಸವನ್ನು ಅನುಭವಿಸುವಂತಾಯಿತು 1937 ರಲ್ಲಿ ಮುಂಬೈ ಶಾಸನ ಸಭಾ ಸದಸ್ಯರಾಗಿ ಚುನಾಯಿತರಾದರು. ಮುಂದೆ ಮುಂಬೈ ಸರ್ಕಾರದ ಪಾರ್ಲಿಮೆಂಟರಿ ಕಾರ್ಯದರ್ಶಿಯಾಗಿ, ಅನಂತರದಲ್ಲಿ ಕಾರ್ಮಿಕ ಮಂತ್ರಿಗಳಾದರು.

1947 ರಲ್ಲಿ ನಂದ ಅವರು ಜಿನೀವಾದಲ್ಲಿ ನಡೆದ ಅಂತರಾಷ್ಟ್ರೀಯ ಕಾರ್ಮಿಕರ ಸಮ್ಮೇಳನದಲ್ಲಿ ಸರ್ಕಾರದ ಪ್ರತಿನಿಧಿಗಳಾಗಿ ಭಾಗವಹಿಸಿದ್ದರು. ಅವರು ಸ್ವೀಡನ್, ಫ್ರಾನ್ಸ್, ಬೆಲ್ಜಿಯಂ ಮತ್ತು ಇಂಗ್ಲೆಂಡ್ ದೇಶಗಳಲ್ಲಿ ಸಂಚರಿಸಿ ಅಲ್ಲಿನ ಕಾರ್ಮಿಕರ ಸ್ಥಿತಿಗತಿಗಳನ್ನು ಅರಿತರು.

1950 ರಲ್ಲಿ ರಾಷ್ಟ್ರೀಯ ಯೋಜನಾ ಮಂಡಳಿಯ ಉಪಾಧ್ಯಕ್ಷರಾದರು. ಬಳಿಕ ನಂದವರನ್ನು ಕೇಂದ್ರ ಸಚಿವ ಸಂಪುಟದಲ್ಲಿ ಯೋಜನಾ ಮಂತ್ರಿಯಾಗಿ ನೇಮಕ ಮಾಡಲಾಯಿತು. ಜೊತೆಗೆ ನೀರಾವರಿ ಮತ್ತು ವಿದ್ಯುತ್ ಖಾತೆಗಳ ಹೊಣೆಗಾರಿಕೆಯನ್ನು ಅವರಿಗೆ ನೀಡಲಾಗಿತ್ತು.

1952, 1957, 1962 ಮತ್ತು 1977ರಲ್ಲಿ ನಡೆದ ಲೋಕಸಭೆ ಮಹಾಚುನಾವಣೆಯಲ್ಲಿ ಮುಂಬೈ ಮತ್ತು ಗುಜರಾತ್ ಕ್ಷೇತ್ರದಿಂದ ಸ್ಪರ್ಧಿಸಿ ಆಯ್ಕೆಯಾಗಿ ಕೇಂದ್ರದಲ್ಲಿ ಕಾರ್ಮಿಕ- ಉದ್ಯೋಗ ಮತ್ತು ಯೋಜನಾ ಮಂತ್ರಿ ಹಾಗೂ ಗೃಹಮಂತ್ರಿ ಆಗಿದ್ದರು. 1964 ರಲ್ಲಿ ಪ್ರಧಾನಿ ನೆಹರು ಅವರ ನಿಧನದಿಂದಾಗಿ ನಂದ ಅವರು ತಾತ್ಕಾಲಿಕವಾಗಿ ಭಾರತದ ಪ್ರಧಾನ ಮಂತ್ರಿಗಳಾದರು.


ಮತ್ತೊಮ್ಮೆ ಪ್ರಧಾನಿ ಶಾಸ್ತ್ರಿಯವರು 1966ರಲ್ಲಿ ನಿಧನದಿಂದಾಗಿ ಅವರು ಪುನಃ ತಾತ್ಕಾಲಿಕವಾಗಿ ಪ್ರಧಾನ ಮಂತ್ರಿಗಳಾದರು. ನಂದಾ ಅವರು ಗಾಂಧೀಜಿಯವರ ಅನುಯಾಯಿಗಳಾಗಿದ್ದು, ಗಾಂಧಿ ತತ್ವಗಳನ್ನು ತಮ್ಮ ಬದುಕಿನುದ್ದಕ್ಕೂ ಕಟ್ಟುನಿಟ್ಟಾಗಿ ಅನುಸರಿಸಿದರು.

ಅವರದು ಸರಳ, ಶುದ್ಧ, ನಿಸ್ವಾರ್ಥ, ಪ್ರಾಮಾಣಿಕ ಬದುಕಾಗಿತ್ತು. 1997 ರಲ್ಲಿ ಭಾರತ ಸರ್ಕಾರ ಭಾರತರತ್ನ ಪ್ರಶಸ್ತಿ ನೀಡಿ ಗೌರವಿಸಿತು. 1998 ಜನವರಿ 15 ರಂದು ಗುಲ್ಜಾರಿ ಲಾಲ್ ನಂದಾ ಅವರು ಅಹಮದಾಬಾದ್‌ನಲ್ಲಿ ವಯೋಸಹಜವಾಗಿ ನಿಧನಹೊಂದಿದರು. ಆಗ ಅವರು ಶತಾಯುಷಿಗಳಾಗಿದ್ದರು.

ಗುಲ್ಜಾರಿ ಲಾಲ್ ನಂದಾ ರವರು ಶ್ರೇಷ್ಠ ವ್ಯಕ್ತಿತ್ವ ಹಾಗೂ ಉತ್ತಮ ಮಾನವೀಯ ಗುಣವುಳ್ಳವರು, ಹಾಗೂ ದಕ್ಷ ಪ್ರಮಾಣಿಕ ಆಡಳಿತಗಾರರಾಗಿದ್ದರು.

ನಂದರವರ 127 ನೇ ವರ್ಷದ ಜನ್ಮ ಜಯಂತಿಯ ದಿನವಾದ ಇಂದು ಭಾರತೀಯರಾದ ನಾವುಗಳು ಸ್ಮರಿಸಿ ನೆನೆಯುತ್ತಾ ಅವರ ಆತ್ಮಕ್ಕೆ ಶಾಂತಿ ಮತ್ತು ಸದ್ಗತಿ ದೊರಕಲೆಂದು ಆ ಭಗವಂತನಲ್ಲಿ ಪ್ರಾರ್ಥಿಸೋಣ.

# ದೈವ ದರ್ಶನ ನಂತರ ಗುಡಿಯಲ್ಲಿ ಕುಳಿತುಕೊಳ್ಳಬೇಕು ಏಕೆ?




**ವಿಶ್ವಾಸ್.ಡಿ.ಗೌಡ**

• **ಉದಯವಾಹಿನಿ, ವಿಶೇಷ**



ಸ್ಥಿರಚಿತ್ತದಿಂದ ಐಹಿಕತ್ವವನ್ನು ಮರೆತು ಮೌನಯೋಗದಿಂದ ಭವಬಂಧನಗಳನ್ನು ದೂರಕ್ಕೆ ತಳ್ಳಿ ಪರಮಾತ್ಮನನ್ನು ನೆನೆಯುತ್ತಾ ಸ್ವಲ್ಪ ಸಮಯ ದೇವಸ್ಥಾನದಲ್ಲಿ ಕುಳಿತು ಬರುವುದು ಸತ್ ಸಂಪ್ರದಾಯ ಪದ್ಧತಿ.

ದೇವಸ್ಥಾನದಲ್ಲಿ ಎಂದರೆ ದೇವರಿಗೆ ಎದುರಲ್ಲಿ ಎಂದು ಅರ್ಥವಲ್ಲ, ದೇವಸ್ಥಾನದ ಪ್ರಾಂಗಣದಲ್ಲಿ ಎಲ್ಲಾದರೂ ಮೌನದಿಂದ ಕಣ್ಣುಮುಚ್ಚಿಕೊಂಡು ಮನಸ್ಸನ್ನು ದೈವದ ಜೊತೆ ಒಂದು ಮಾಡಬೇಕು, ಆಲಯ ಪ್ರವೇಶಕ್ಕೆ ಕೆಲವು ನಿಯಮಗಳಿವೆ...

ದೇವಸ್ಥಾನ ಪ್ರವೇಶಕ್ಕೆ ಮೊದಲು ನಮ್ಮ ಮನಸ್ಸು ಪ್ರಶಾಂತವಾಗಿರಬೇಕು. ನಮ್ಮ ಅಂತಸ್ತು, ಶ್ರೀಮಂತಿಕೆ, ಶ್ರೇಷ್ಠತೆ, ಅಹಂಕಾರ, ಸಿಟ್ಟು, ಅಧಿಕಾರ ಇವೆಲ್ಲವೂ ನಮ್ಮ ಹತ್ತಿರಕ್ಕೂ ಸುಳಿಯಬಾರದು.

ದೇವರಿಗೆ ಶ್ರೀಮಂತನೂ ದರಿದ್ರ ನೂ ಒಂದೇ ಈ ವಿಷಯನ್ನು ಯಾರೂ ಮರೆಯಬಾರದು. ಆಲಯದಲ್ಲಿ ಲಂಚ ಕೊಟ್ಟು ನಮ್ಮ ಸಿರಿವಂತಿಕೆಯನ್ನು ತೋರಿಸಿಕೊಳ್ಳ ಬಾರದು. ನಮ್ಮಿಂದ ಯಾವ ಭಕ್ತನಿಗೆ ತೊಂದರೆಯಾದರೂ ಇದು ದೇವರಿಗೆ ತೊಂದರೆ ಕೊಟ್ಟಂತೆ, ಅಪರಾಧ ಮಾಡಿದಂತೆ ಆಗುವುದು. ಇದನ್ನು ಎಲ್ಲರೂ ನೆನಪಿನಲ್ಲಿಟ್ಟುಕೊಳ್ಳಬೇಕು. ದೇವರ ಸನ್ನಿಧಿಯಲ್ಲಿ ಎಂಥವರೂ ದೊಡ್ಡಸ್ತಿಕೆಯನ್ನು ಪ್ರದರ್ಶಿಸ ಬಾರದು.

ಈ ವಿಷಯನ್ನು ಎಲ್ಲರೂ ತಿಳಿಯಬೇಕು, ಎಲ್ಲರೂ ಆಚರಿಸಬೇಕು.

1) ದೇವರು ಎಲ್ಲರಿಗೂ ದೇವರೇ!
2) ದೈವ ಕಾರ್ಯಗಳಿಗೆ ಎಲ್ಲರೂ ಹಿರಿಯರೇ!
3) ದೈವ ಪ್ರೀತಿಗೆ ಎಲ್ಲರೂ ಪಾತ್ರರೇ!
4) ದೈವ ಪೂಜೆಗೆ ಎಲ್ಲರೂ ಅರ್ಹರೇ!
5) ದೈವ ದರ್ಶನಕ್ಕೆ ಎಲ್ಲರೂ ಸಮಾನರೇ!
6) ಸರ್ವಭೂತ ಸಮಾನತೆಯನ್ನು ಸದ್ವಿಚಾರ ಆಚರಣೆಯನ್ನು ಮನಗಂಡು ಮನ್ನಿಸಿದವನೇ ದೇವರಿಗೆ ಪ್ರಿಯ ಭಕ್ತನಾಗುತ್ತಾನೆ.
7) ದೇವರೆಂದರೆ ಶ್ರೀಮಂತರ ಜೀತದಾಳಲ್ಲ,
8) ದೇವರೆಂದರೆ ಅಧಿಕಾರಿಗಳ ಆಸ್ತಿಯಲ್ಲ,
9) ದೇವರೆಂದರೆ ರಾಜಕೀಯ ಪುಡಾರಿಗಳ ಸ್ವತ್ತಲ್ಲ.
10) ದೇವರು ದೀನರ ಗೆಳೆಯ!
11) ದೇವರು ದುಃಖಿತರ ಮಿತ್ರ!
12) ದೇವರು ಬಡವರ ಬಂಧು!
13) ದೇವರು ಆರ್ತರ ಭೃತ್ಯು!
14) ದೇವರು ನೀತಿ ನಿಯಮವಂತರ ತಂದೆ!
15) ದೇವರು ಸೇವಕರ ಸೇವಕ!
16) ದೇವರು ಆಪತ್ಬಾಂಧವ!
17) ದೇವರು ಶೋಷಿತರ ಮಿತ್ರ!

ಹೊಸಬಟ್ಟೆಗಳನ್ನುಟ್ಟು ನಾಮ ಗಳನ್ನಿಟ್ಟು, ಅಧಿಕಾರ ಮದವನು, ಸಿರಿವಂತಿಕೆಯ ಸೊಕ್ಕನ್ನು ಅಗ್ರವರ್ಣದ ಅಹಂಕಾರವನ್ನು ತೋರಿಸುವವರಿಗೆ ಎಂದೂ ದೇವರು ಪ್ರಸನ್ನನಾಗುವುದಿಲ್ಲ. ಅವರ ಪ್ರಾರ್ಥನೆಯನ್ನು ಕೇಳುವುದಿಲ್ಲ ದೇವರ ಮುಂದೆ ಅಧಿಕ್ಯತೆಯನ್ನು ಅಂತಸ್ತನ್ನು ತೋರಿಸುವುದು ಮಹಾಪಚಾರ ದೇವರ ಮುಂದೆ ಢಂಬಾಚಾರ ಪ್ರದರ್ಶನ ಮಹಾಪಾಪ. ನಾವು ದೈವ ಸೇವಕರೇ ನಿಜ ಆದರೆ ದೇವರು ದೀನಜನ ಸೈನಿಕನು ಪೀಡಿತ ತಾಡಿತ ಶೋಷಿತರ ಪ್ರಿಯ ಗೆಳೆಯನು!

- **ದೇವರಿಗೆ ಕುಲವಿಲ್ಲ !**
- **ದೇವರಿಗೆ ಆಚಾರವಿಲ್ಲ!**
- **ದೇವರಿಗೆ ಬೇಧವಿಲ್ಲ!**
- **ದೇವರಿಗೆ ಕ್ರೋಧವಿಲ್ಲ!**
- **ದೇವರು ದಯಾಮಯನು!**
- **ದೇವರು ಸರ್ವರಕ್ಷಕನು!**

**ದೇವರು ಯಾರಿಗೂ ಸ್ವಂತವಲ್ಲ! ಯಾರ ಸ್ವತ್ತೂ ಅಲ್ಲ..!:** ದೇವರಿಗೆ ಕಾಯಿ ಕರ್ಪೂರಗಳು, ಹೂವಿನ ಹಾರ, ತುರಾಯಿಗಳು, ಕಪ್ಪ ಕಾಣಿಕೆಗಳು, ಪಾಯಸಾನ್ನಗಳು, ಪಂಚಾಮೃತಗಳು, ಬಂಗಾರದ ಆಭರಣಗಳು ಬೇಕಿಲ್ಲ. ಈ ಸರ್ವವೂ ಸಹ ಅವನದೇ, ಸೃಷ್ಟಿಯೇ ಅವನದ್ದಾಗಿದೆಯಲ್ಲವೇ ಕೆರೆಯ ನೀರನ್ನು ಕೆರೆಗೆ ಚೆಲ್ಲುವುದರಲ್ಲಿ ವಿಶೇಷವೇನಿಲ್ಲ, ಅಲ್ಲವೇ.


ದೇವರಿಗೆ ಏನು ಬೇಕು? ಅರ್ಪಣಾ ಭಾವನೆ ಬೇಕು! ಶರಣಾಗತಿ ಬೇಕು! ಅಹಂಕಾರವಿಲ್ಲದ ಮನಸ್ಸು ಬೇಕು, ನಿರ್ಮಲ ಭಕ್ತಿ ಬೇಕು! ನಂಬಿಕೆ ಬೇಕು! ಆರಾಧನಾ ಭಾವನೆ ಬೇಕು ಕೋರಿಕೆಗಳಿಲ್ಲದ ಅರ್ಚನೆ ಬೇಕು!

**ನೆನಪಿಡಿ;** ನಿಮ್ಮ ಅತ್ಯಾಶೆಗಳನ್ನು ದೇವರು ಮನ್ನಿಸುವುದಿಲ್ಲ, ಅಸಂಬದ್ಧ ಬಯಕೆಗಳನ್ನು ಈಡೇರಿಸುವುದಿಲ್ಲ. ಶುಷ್ಕಭಕ್ತಿಯಿಂದ, ಆಡಂಬರ ಬುದ್ಧಿಯಿಂದ, ಅತ್ಯಾಸೆಯಿಂದ, ಅನ್ಯ ಮನಸ್ಸಿನಿಂದ, ಅರ್ಹತೆಯಿಲ್ಲದ ಬಯಕೆಗಳಿಂದ ಎಂದೂ ದೇವರನ್ನು ಪೂಜಿಸಬಾರದು. ನಮಗೆ ಏನು ಕೊಡಬೇಕು, ಎಲ್ಲಿ ಕೊಡಬೇಕು, ಯಾವಾಗ ಕೊಡಬೇಕು ಅನ್ನುವುದು ಅವನಿಗೆ ಚೆನ್ನಾಗಿಗೊತ್ತು.

ದೇವಸ್ಥಾನಕ್ಕೆ ಹೋಗಿ ದರ್ಶನದ ನಂತರ ಯಾಕೆ ಕುಳಿತುಕೊಳ್ಳಬೇಕು? ದೇವರ ಸನ್ನಿಧಿಗೆ ಹೋಗುವುದು ಕೇವಲ ದರ್ಶನಕ್ಕೆ ಅಲ್ಲ, ದೈವ ದರ್ಶನದ ನಂತರ ದೇವಸ್ಥಾನದ ಪ್ರಾಂಗಣದಲ್ಲಿ ಎಲ್ಲಾದರೂ ಕುಳಿತು ಸ್ವಲ್ಪ ಸಮಯ ದೈವ ಧ್ಯಾನದಲ್ಲಿ ಕಳೆಯಬೇಕು.

ಹೀಗೆ ಕುಳಿತುಕೊಳ್ಳುವುದರಿಂದ ಮನಸ್ಸಿಗೆ ಸ್ವಸ್ಥತೆ ಬರುತ್ತದೆ. ದೇಹಕ್ಕೆ ಶಕ್ತಿ ಸಿಗುತ್ತದೆ. ಮಾನಸಿಕ ಒತ್ತಡ ಕಡಿಮೆ ಯಾಗುತ್ತದೆ. ಯೋಚನೆಗಳೆಲ್ಲವೂ ಸಕ್ರಮ ವಾಗುತ್ತವೆ. ನಿರ್ಧಾರಗಳು ದೃಢವಾಗುತ್ತವೆ. ದೇವಸ್ಥಾನದ ಸ್ಥಳ ಪ್ರಭಾವವು ನಮ್ಮ ದೇಹದೊಳಗೆ ಪ್ರವೇಶಿಸಿ ನಮ್ಮಲ್ಲಿ ಹೊಸ ಚೈತನ್ಯ ಮೂಡುತ್ತದೆ. ಎಂದೂ ಅವಸರದಿಂದ ದೈವ ದರ್ಶನವನ್ನು ಮಾಡಬಾರದು. ಕೌಟುಂಬಿಕ ವಿಷಯಗಳನ್ನು ಗುಡಿಯಲ್ಲಿ ಚರ್ಚಿಸಬಾರದು. ಹಾಸ್ಯ ಪ್ರಸಂಗಗಳನ್ನು ಮಾಡಬಾರದು. ಯಾರ ಮೇಲೆಯೂ ಸಿಟ್ಟು ಮಾಡಬಾರದು.

ಯಾರನ್ನೂ ಅಸಹ್ಯದಿಂದ ನೋಡಬಾರದು. ಅಂಗವಿಕಲರನ್ನು ಮನೋರೋಗಿ ಗಳನ್ನು ನೋಡಿ ನಗಬಾರದು. ಅವರಿಗೆ ದೇವರ ದರ್ಶನಕ್ಕೆ ಇತರರು ಮೊದಲು ಅವಕಾಶ ಮಾಡಿಕೊಡಬೇಕು. ದೇವಸ್ಥಾನಕ್ಕೆ ಬರುವ ಮಹಿಳೆಯರನ್ನು ವಿಕೃತ ಮನೋಭಾವದಿಂದ ನೋಡಬಾರದು. ವೃದ್ಧರು, ಮಹಿಳೆಯರನ್ನು ಗೌರ ವಿಸಬೇಕು. ಅವರಿಗೆ ದೇವರ ದರ್ಶನಕ್ಕೆ ಮೊದಲ ಆದ್ಯತೆ ನೀಡಬೇಕು. ಎದೆಯುಬ್ಬಿಸಿ ತಲೆ ಎತ್ತಿ ನಡೆಯಬಾರದು, ನೋಡಬಾರದು. ಆವರಣದ ಮೌನಕ್ಕೆ ಭಂಗ ತರ ಬಾರದು. ತಮ್ಮ ಜಾತಿ, ಹಣ, ದೊಡ್ಡಸ್ಥಿಕೆಗಳನ್ನು ದೇವರ ಮುಂದೆ ಪ್ರದರ್ಶಿಸ ಬಾರದು. ದೇವರ ಮೇಲೆ ನಂಬಿಕೆ, ಭಕ್ತಿ ಇಲ್ಲದವರು ದೈವಸನ್ನಿಧಿಗೆ ಹೋಗಲೇಬಾರದು.



ಲಿಪ್‌ಸ್ಟಿಕ್ ಹಚ್ಚಿಕೊಳ್ಳೊದ್ರಿಂದ ಮುಖದ ಅಂದ ಹೆಚ್ಚುತ್ತೆ ಅನ್ನೋದ್ರಲ್ಲಿ ಎರಡು ಮಾತಿಲ್ಲ. ನಿಮ್ಮ ಲಿಪ್‌ಸ್ಟಿಕ್ ತುಟಿಯ ಮೇಲೆ ಹೆಚ್ಚುಕಾಲ ಉಳಿಯಬೇಕಾದರೆ ಇಲ್ಲಿದೆ ಕೆಲವೊಂದು ಟಿಪ್ಸ್. ನೀವೂ ಇದನ್ನು ಟ್ರೈ ಮಾಡಿ ನೋಡಿ.

ಈಗಿನ ಕಾಲದಲ್ಲಂತೂ ಪ್ರತಿ ಮಹಿಳೆಯರು ಲಿಪ್‌ಸ್ಟಿಕ್ ಹಚ್ಚಿಕೊಳ್ಳುತ್ತಾರೆ. ಲಿಪ್‌ಸ್ಟಿಕ್ ಮುಖದ ಅಂದವನ್ನು ಹೆಚ್ಚಿಸುತ್ತದೆಯಾದರೂ ಅದರಲ್ಲಿರುವ ರಾಸಾಯನಿಕಗಳು ಚರ್ಮಕ್ಕೆ ಒಳ್ಳೆಯದಲ್ಲ. ಆದರೂ ಬಹಳಷ್ಟು ಮಂದಿ ಇದನ್ನು ಬಳಸುತ್ತಾರೆ. ಪ್ರತಿನಿತ್ಯ ಆಫೀಸ್‌ಗೆ ಹೋಗುವವರು ಲಿಪ್‌ಸ್ಟಿಕ್ ಬಳಸದೇ ಇರುವವರು ಬಹಳ ಕಡಿಮೆ. ನೀವು ಗಮನಿಸಿರಬಹುದು ಕೆಲವರ ಲಿಪ್‌ಸ್ಟಿಕ್ ಬೆಳಗ್ಗೆ ಹಚ್ಚಿದಾಗ ಹೇಗಿರುತ್ತೋ ಸಂಜೆವರೆಗೂ ಹಾಗೆಯೇ ಇರುತ್ತದೆ. ಇದಕ್ಕೆ ಕಾರಣವೇನು ಗೊತ್ತಾ?

# ಬೆಳಗ್ಗಿನಿಂದ ಸಂಜೆವರೆಗೆ ಲಿಪ್‌ಸ್ಟಿಕ್ ಹಾಗೇ ತುಟಿ ಮೇಲೆ ಇರಬೇಕಂದ್ರೆ ಇಲ್ಲಿದೆ ಟಿಪ್ಸ್

**ಲಿಪ್‌ಸ್ಟಿಕ್ ದೀರ್ಘಕಾಲ ಉಳಿಯುವುದು ಹೇಗೆ:** ಅನೇಕ ಮಹಿಳೆಯರು ಬೆಳಗ್ಗೆ ಹಚ್ಚಿಕೊಂಡಿರುವ ಲಿಪ್‌ಸ್ಟಿಕ್ ಸಂಜೆ ಹೊತ್ತಿಗೆ ಮಾಸಿರುತ್ತದೆ. ಆದರೆ ಇನ್ನೂ ಕೆಲವರ ಲಿಪ್‌ಸ್ಟಿಕ್ ಹಾಗೆಯೇ ಇರುತ್ತದೆ. ಹಾಗಾದ್ರೆ, ಅವರು ಒಳ್ಳೆ ಬ್ರಾಂಡ್‌ನ ದುಬಾರಿ ಲಿಪ್‌ಸ್ಟಿಕ್ ಬಳಸುತ್ತಾರೇನೋ ಅನಿಸುವುದು ಸಹಜ. ಆದರೆ ಅದೆಲ್ಲವೂ ನಾವು ಆಯ್ಕೆ ಮಾಡಿಕೊಳ್ಳುವ ಲಿಪ್‌ಸ್ಟಿಕ್ ಹಾಗೂ ಅದನ್ನು ಯಾವ ರೀತಿ ಹಚ್ಚುತ್ತೇವೆ, ಮೈಂಟೈನ್ ಮಾಡುತ್ತೇವೆ ಎನ್ನುವುದರ ಮೇಲೆ ನಿಂತಿದೆ.

**ಹಚ್ಚುವ ವಿಧಾನ**

**ಲಿಕ್ವಿಡ್ ಲಿಪ್‌ಸ್ಟಿಕ್‌ಗಳು ಅಥವಾ ಸಾಂಪ್ರದಾಯಿಕ ಲಾಂಗ್ ವೇರ್ ಬುಲೆಟ್ ಲಿಪ್‌ಸ್ಟಿಕ್‌ಗಳು ಆಗಾಗ್ಗೆ ಟಚ್-ಅಪ್‌ಗಳಿಲ್ಲದೆ ಬಹಳ ಗಂಟೆಗಳ ಕಾಲ ಉಳಿಯುತ್ತದೆ. ಸರಿಯಾದ ಹಚ್ಚುವ ಕಡೆ ಗಮನಹರಿಸಬೇಕು. ತುಟಿಗಳನ್ನು ಎಫ್ಫೋಲಿಯೇಟ್ ಮಾಡುವುದು, ಲಿಪ್ ಲೈನರ್ ಅನ್ನು ಬಳಸುವುದು ಮತ್ತು ತೆಳುವಾದ ಪದರಗಳ ನಡುವೆ ಬ್ಲಾಟ್ ಮಾಡುವುದು ಲಿಪ್‌ಸ್ಟಿಕ್ ದೀರ್ಘಾವಧಿವರೆಗೆ ಉಳಿಯುವಂತೆ ಮಾಡುತ್ತದೆ.**

**ಫಾರ್ಮುಲಾ ಪ್ರಕಾರಕ್ಕೆ ಆದ್ಯತೆ ನೀಡಿ:** ಲಿಪ್‌ಸ್ಟಿಕ್‌ನ ದೀರ್ಘಾಯುಷ್ಯದ ದೊಡ್ಡ ಸೂಚಕವೆಂದರೆ ಅದರ ಸೂತ್ರೀಕರಣ. ಲಿಕ್ವಿಡ್ ಲಿಪ್‌ಸ್ಟಿಕ್‌ಗಳು ದೀರ್ಘಕಾಲ ಬಾಳಿಕೆ ಬರುವವು, ಸಾಮಾನ್ಯವಾಗಿ ದೀರ್ಘಕಾಲದವರೆಗೆ ಅಂಟಿಕೊಳ್ಳುವ ಮ್ಯಾಟ್ ಫಿನಿಶ್‌ಗೆ ಒಣಗಬಹುದು. ಆದರೆ ಬುಲೆಟ್ ಅಥವಾ ಸ್ಟಿಕ್‌ಗಳು ನಿಮಗೆ ಮ್ಯಾಟ್ ಫಿನಿಶ್ ನೀಡುತ್ತದೆ ಆದರೆ ಕಡಿಮೆ ಉಳಿಯುವ ಶಕ್ತಿಯನ್ನು ನೀಡುತ್ತದೆ.

**ಟ್ರಾನ್ಸ್‌ಫರ್ ಪ್ರೂಫ್ ಪರಿಶೀಲಿಸಿ:** ನಿಜವಾಗಿಯೂ ದೀರ್ಘಕಾಲ ಬಾಳಿಕೆ ಬರುವ ಲಿಪ್‌ಸ್ಟಿಕ್ ಸ್ಪ್ರೆಡ್ ಆಗೋದಿಲ್ಲ. ಅವುಗಳನ್ನು ಆ ರೀತಿ ತಯಾರಿಸಲಾಗಿರುತ್ತದೆ. ಅವು ನೀವು ಕಪ್‌ನಲ್ಲಿ ಕಾಫಿ ಕುಡಿದರೂ ಕಪ್‌ಗೆ ಅಂಟಿಕೊಳ್ಳೋದಿಲ್ಲ. ಯಾವುದೇ ಬಟ್ಟೆಗೂ ಅಂಟಿಕೊಳ್ಳೋದಿಲ್ಲ. ನಿಮ್ಮ ತುಟಿಯಲ್ಲಿ ಹಾಗೆಯೇ ಉಳಿದುಕೊಳ್ಳುತ್ತದೆ.



**ಅದರಲ್ಲಿರುವ ಪದಾರ್ಥಗಳನ್ನು ನೋಡಿ:** ಹೆಚ್ಚಿನ ವರ್ಣದ್ರವ್ಯದ ಪ್ರತಿಫಲವನ್ನು ಹೊಂದಿರುವ ಲಿಪ್‌ಸ್ಟಿಕ್‌ಗಳು ತುಟಿಗಳಿಗೆ ಉತ್ತಮವಾಗಿ ಅಂಟಿಕೊಳ್ಳುತ್ತವೆ ಮತ್ತು ಪದೇ ಪದೇ ಹಚ್ಚಬೇಕೆಂದೇನಿಲ್ಲ. ಅಲ್ಲದೆ ಉತ್ತಮ ಸ್ಯಾಚುರೇಟೆಡ್ ಬಣ್ಣವನ್ನು ನೀಡುತ್ತವೆ. ಸಾಂಪ್ರದಾಯಿಕವಾಗಿ ದೀರ್ಘಕಾಲ ಬಾಳಿಕೆ ಬರುವ ಲಿಪ್‌ಸ್ಟಿಕ್‌ಗಳು ಒಣಗುತ್ತಿರಬಹುದು. ಆಧುನಿಕ ಸೂತ್ರೀಕರಣಗಳು ದೀರ್ಘಾಯುಷ್ಯದ ಜೊತೆಗೆ ಆರಾಮವನ್ನು ನೀಡಲು ಹೈಲುರಾನಿಕ್ ಆಮ್ಲ, ವಿಟಮಿನ್ ಇ ಯಂತಹ ಪೌಷ್ಟಿಕ ಪದಾರ್ಥಗಳನ್ನು ಒಳಗೊಂಡಿರುತ್ತವೆ.

# ಕಲಾವಿದೆ ಸುಪ್ರೀತಳ ಆಹ್ಲಾದಕರ ನೃತ್ಯ ಸಂಜೆ






ಕಲಾ ಸಾಹಿತ್ಯ

**ವೈ.ಕೆ. ಸಂಧ್ಯಾ ಶರ್ಮ**
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು

ಮನಮೋಹಕ ಅಭಿನಯ ಮತ್ತು ನೃತ್ಯ-ನಟುವಾಂಗಗಳಿಗೆ ಹೆಸರಾದ ನೃತ್ಯಗುರು ಡಾ. ಶ್ರುತಿ ಎನ್. ಮೂರ್ತಿ 'ನಾಟ್ಯಭೈರವಿ ನೃತ್ಯಶಾಲೆ'ಯ ಹೆಸರಾಂತ ಗುರು. ಇತ್ತೀಚೆಗೆ ಇವರ ನುರಿತ ಗರಡಿಯಲ್ಲಿ ರೂಹುತಳೆದ ನೃತ್ಯಶಿಲ್ಪ ಕು. ಸುಪ್ರೀತಾ, ಬೆಂಗಳೂರಿನ ವಿವೇಕ ಆಡಿಟೋರಿಯಂನಲ್ಲಿ ವಿದ್ಯುಕ್ತವಾಗಿ ರಂಗಪ್ರವೇಶ ನೆರವೇರಿಸಿಕೊಂಡು ಅತ್ಯಂತ ಮೋಹಕ ಕೃತಿಗಳನ್ನು ವರ್ಣರಂಜಿತವಾಗಿ ಪ್ರದರ್ಶಿಸಿದಳು. ಸುಂದರ ಅಭಿನಯ, ಸೊಗಸಾದ ನೃತ್ತ ಸೌಂದರ್ಯದಿಂದ ಕೂಡಿದ ನಾಟ್ಯ ಮಯೂರಿ ಸುಪ್ರೀತಳ ನೃತ್ಯವೈವಿಧ್ಯ ಕಲಾರಸಿಕರನ್ನು ರಂಜಿಸಿತು.

ಕಲಾತ್ಮಕ 'ಪುಷ್ಪಾಂಜಲಿ'ಯಿಂದ ನೃತ್ಯದ ಶುಭಾರಂಭ ಮಾಡಿ ಗಣೇಶವಂದನೆಯನ್ನು ವಿಶಿಷ್ಟವಾಗಿ ಕಣ್ಮನ ಸೆಳೆದ ಭಾವ-ಭಂಗಿಗಳಿಂದ ನಿರೂಪಿಸಿದಳು. ಆಕೆಯ ಅಂಗಶುದ್ಧ ನರ್ತನವು 'ಅಲರಿಪು' ವಿನ ಆಂಗಿಕಾಭಿನಯಕ್ಕೆ ಕಳೆಗೊಟ್ಟಿತು. ಗುರು ಶ್ರುತಿ ಅವರ ಲಯಾತ್ಮಕ ನಟುವಾಂಗದ ಬನಿ ಅವಳ ಪಾದಚಲನೆಗೆ, ನೃತ್ತಗಳ ನಿರೂಪಣೆಗೆ ಅಮಿತ ಸ್ಫೂರ್ತಿ ನೀಡಿತು. ಮುಂದೆ ಸಾದರಪಡಿಸಿದ ಕಾಲಭೈರವಾಷ್ಟಕಂ ಪರಿಣಾಮಕಾರಿಯಾಗಿ ಝೇಂಕರಿಸಿ, ವಿವಿಧ ಭಾವಗಳ ಸಾಂದ್ರತೆ ಮಡುಗಟ್ಟಿತ್ತು. ಕಲಾವಿದೆಯ ಪ್ರಖರ ಅಭಿನಯ ಶಕ್ತಿಗೆ ಕನ್ನಡಿ ಹಿಡಿಯಿತು.

ಪ್ರಸ್ತುತಿಯ ಕೇಂದ್ರಭಾಗ- ಸ್ವಾಮಿಯೇ ವರ ಸೊಲ್ಲಡಿ ಎಂಬ ಶೃಂಗಾರ ಮಿಳಿತ- ವಿಪ್ರಲಂಭ ಶೃಂಗಾರದ ವರ್ಣ ನಾಯಕಿಯ ವಿರಹವೇದನೆಯನ್ನು ಸಮರ್ಥವಾಗಿ ಅಭಿವ್ಯಕ್ತಿಸಿತು. ಕಲಾವಿದೆ, ತಾನೇ ಪಾತ್ರವಾಗಿ, ತನ್ಮಯತೆಯಿಂದ ಇಡೀ ರಂಗಾವರಣದ ತುಂಬಾ ತನ್ನ ಹೆಜ್ಜೆ-ಗೆಜ್ಜೆಗಳ ಕಲರವಿಸಿ, ತನ್ನ ಗತ ಪ್ರೀತಿಯ ಮಧುರ ಕಥಾನಕವನ್ನು ನಾಟಕೀಯ ಸಂಚಾರಿಯಲ್ಲಿ ಕಟ್ಟಿಕೊಟ್ಟದ್ದು ಹೃದಯ ಕಲಕಿತು. ಹರಿತ ನೃತ್ತಗಳ ವಿನ್ಯಾಸ, ಕಲಾವಿದೆಯ ಚೈತನ್ಯ- ನರ್ತನ ಪ್ರತಿಭೆ ಮನಸೂರೆಗೊಂಡು, ಅವಳ ಲೀಲಾಜಾಲ ನೃತ್ಯಾರ್ಪಣೆಗೆ ಸಾಕ್ಷಿ ನುಡಿಯಿತು. ನಡುನಡುವೆ ಮೂಡಿಬಂದ ಶೃತಿಯವರ ಸುಸ್ಪಷ್ಟ- ಖಚಿತ ನಟುವಾಂಗ ಕೂಡ ಗಮನ ಸೆಳೆಯಿತು.

ಮುಂದೆ ಕಲಾವಿದೆ ಅಚ್ಯುತಂ ಕೇಶವ ರಾಮನಾರಾಯಣನನ್ನು ದಶಾವತಾರದಲ್ಲಿ ಸಾಕ್ಷಾತ್ಕರಿಸಿದ ಬಗೆ ಮುದನೀಡಿತು. ಅನಂತರ ಮನಮೋಹಕ ಏರಾ ರಾರಾ ಎಂದು ವಿಲಪಿಸುವ ನಾಯಕಿ ಜಾವಳಿಯಲ್ಲಿ ಕಲಾವಿದೆ ಚಿತ್ರಿಸಿದ ಪ್ರಣಯರಾಗದ ವಿವಿಧ ದೃಶ್ಯಗಳು, ಮನ್ಮಥ ಕಾಡುವ ಭಾವಗುಚ್ಛಗಳ, ಇನಿಯನ ಅಗಲಿಕೆಯ ನೋಟದ ಗಾಢ ಚಿತ್ರಣಗಳು ಬಹು ಹೃದಯಸ್ಪರ್ಶಿಯಾಗಿದ್ದವು.

ನಂತರ ಕಲಾವಿದೆಯ ಅನುಪಮ ಅಭಿನಯದಲ್ಲಿ ಮೈತಳೆದ ಅಣ್ಣಮಾಚಾರ್ಯರ ಕೃತಿ ಮೈನವಿರೆಳಿಸಿತು. ಅಂತ್ಯದಲ್ಲಿ ಉಲ್ಲಾಸಭರಿತ ಸಂಭ್ರಮದ ಜತಿಗಳ ಲಾಸ್ಯದೊಂದಿಗಿನ ತಿಲ್ಲಾನದೊಂದಿಗೆ ಸುಪ್ರೀತಾ ತನ್ನ ಪ್ರಸ್ತುತಿಯನ್ನು ರೋಮಾಂಚಕವಾಗಿ ಸಂಪನ್ನಗೊಳಿಸಿದಳು. ಅಂದು ಭರವಸೆಯ ಕಲಾವಿದೆಯಾಗಿ ಹೊರಹೊಮ್ಮಿದ ಸುಪ್ರೀತಾಳ ಪ್ರತಿಭಾ ನೈಪುಣ್ಯ, ಚೇತೋಹಾರಿ ಅಭಿನಯ ಚಿರಸ್ಮರಣೀಯವಾಗಿತ್ತು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಬೆಳಿಗ್ಗೆ | 03:00 ರಿಂದ 04:30 |

**ಮೇಷ** ಧೂಮಪಾನ ತ್ಯಜಿಸುವುದು ನೀವು ದೈಹಿಕವಾಗಿ ಆರೋಗ್ಯವಾಗಿ ಉಳಿಯಲು ಸಹಾಯ ಮಾಡುತ್ತದೆ. ನೀವು ಸ್ವಲ್ಪ ಹೆಚ್ಚುವರಿ ಹಣ ಮಾಡಲು ಯೋಜಿಸುತ್ತದ್ದಲ್ಲಿ ಸುಭದ್ರ ಆರ್ಥಿಕ ಯೋಜನೆಗಳಲ್ಲಿ ಹೂಡಿಕೆ ಮಾಡಿ.

**ವೃಷಭ** ನೀವು ನಿಮ್ಮ ಮಕ್ಕಳ ಮೇಲೆ ಹೆಮ್ಮೆಯನ್ನು ಅನುಭವಿಸುವಿರಿ. ದೂರದ ಸ್ಥಳದ ಸಂಬಂಧಿಗಳು ನಿಮ್ಮನ್ನು ಸಂಪರ್ಕಿಸಬಹುದು. ನೀವು ಮತ್ತು ನಿಮ್ಮ ಪ್ರೀತಿ ಸಂಗಾತಿ ಪ್ರೀತಿಯ ಸಾಗರದಲ್ಲಿ ತೇಲುತ್ತೀರಿ.

**ಮಿಥುನ** ಇಂದು ಧಾರ್ಮಿಕ ಮತ್ತು ಆಧ್ಯಾತ್ಮಿಕ ಆಸಕ್ತಿಗಳನ್ನು ಅನುಸರಿಸಲೂ ಒಂದು ಒಳ್ಳೆಯ ದಿನ. ನೀವು ಭೂಮಿ, ವಸತಿ, ಅಥವಾ ಸಾಂಸ್ಕೃತಿಕ ಯೋಜನೆಗಳಿಗೆ ಸಂಬಂಧಿಸಿದ ಸಮಸ್ಯೆಗಳಿಗೆ ಗಮನ ನೀಡಬೇಕು.

**ಕರ್ಕಾಟಕ** ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ.

**ಸಿಂಹ** ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ಕೆಲಸದ ನಡುವೆ ಸಾಧ್ಯವಾದಷ್ಟೂ ವಿಶ್ರಾಂತಿ ಪಡೆಯಲು ಪ್ರಯತ್ನಿಸಿ. ನೀವು ಹಣಕ್ಕೆ ಸಂಬಂಧಿಸಿದ ಸಮಸ್ಯೆಯ ಕಾರಣದಿಂದ ತೊಂದರೆಗೊಳಗಾಗಬಹುದು.

**ಕನ್ಯಾ** ನಿಮ್ಮಿಂದ ನಿರ್ಲಕ್ಷ್ಯ ದುಬಾರಿ ಎನಿಸಬಹುದು. ನೀವು ನಿಮ್ಮ ಜೀವನದಲ್ಲಿ ನಿಜವಾದ ಪ್ರೀತಿಯ ಅನುಪಸ್ಥಿತಿಯನ್ನು ಅನುಭವಿಸುತ್ತೀರಿ. ಚಿಂತಿಸಬೇಡಿ, ಕಾಲಕಳೆದಂತೆ ಎಲ್ಲವೂ ಬದಲಾಗುತ್ತದೆ, ನಿಮ್ಮ ಪ್ರಣಯ ಜೀವನವೂ ಸಹ.

**ತುಲಾ** ಈ ರಾಶಿಚಕ್ರದ ಗೃಹಿಣಿಯರು ಇಂದು ಉಚಿತ ಸಮಯದಲ್ಲಿ ಟಿವಿ ಅಥವಾ ಮೊಬೈಲ್‌ನಲ್ಲಿ ಚಲನಚಿತ್ರವನ್ನು ವೀಕ್ಷಿಸಬಹುದು. ನಿಮ್ಮ ಸಂಗಾತಿಯ ಒಂದು ಕೆಲಸದ ಬಗ್ಗೆ ನಿಮಗೆ ಇರುಸುಮುರುಸಾಗಬಹುದು.

**ವೃಶ್ಚಿಕ** ಭಾವನಾತ್ಮಕ ತೊಂದರೆಗಳು ನಿಮ್ಮನ್ನು ಕಾಡುತ್ತವೆ. ಮನರಂಜನೆ ಮತ್ತು ಉಲ್ಲಾಸಕ್ಕಾಗಿ ಒಳ್ಳೆಯ ದಿನವಾದರೂ ನೀವು ಕೆಲಸ ಮಾಡುತ್ತಿದ್ದಲ್ಲಿ ನೀವು ನಿಮ್ಮ ವ್ಯವಹಾರಗಳನ್ನು ಎಚ್ಚರಿಕೆಯಿಂದ ಗಮನಿಸಬೇಕು.

**ಧನಸ್ಸು** ನೀವು ಮಾನಸಿಕವಾಗಿ, ದೈಹಿಕವಾಗಿ ಸ್ವಲ್ಪ ಸುಸ್ತನ್ನು ಅನುಭವಿಸಬಹುದು ನಿಮ್ಮ ಚೈತನ್ಯವನ್ನು ಹೆಚ್ಚಿಸಲು ಸ್ವಲ್ಪ ವಿಶ್ರಾಂತಿ ಮತ್ತು ಪೌಷ್ಟಿಕ ಆಹಾರ ಬಹಳ ಸಹಾಯ ಮಾಡುತ್ತದೆ.

**ಮಕರ** ನಿಮ್ಮ ಅಸೂಯೆ ವರ್ತನೆ ನಿಮ್ಮನ್ನು ದುಃಖಿಗಳಾಗಿಯೂ ಮತ್ತು ಖಿನ್ನರಾಗಿಯೂ ಮಾಡಬಹುದು. ಆದರೆ ಇದು ಒಂದು ಸ್ವಯಂಕೃತ ಗಾಯವಾಗಿರುವುದರಿಂದ ಇದರ ಬಗ್ಗೆ ಪ್ರಲಾಪಿಸುವ ಅಗತ್ಯವಿಲ್ಲ.

**ಕುಂಭ** ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ.

**ಮೀನ** ಇಂದು ನಿಮ್ಮ ಕಚೇರಿಯ ಸಹೋದ್ಯೋಗಿ ನಿಮ್ಮ ಅಮೂಲ್ಯವಾದ ವಸ್ತುವನ್ನು ಕದಿಯಬಹುದು, ಆದ್ದರಿಂದ ಇಂದು ನೀವು ನಿಮ್ಮ ವಸ್ತುವನ್ನು ಎಚ್ಚರಿಕೆಯಿಂದ ಇಟ್ಟುಕೊಳ್ಳಬೇಕು.

### ಮಳೆ ಮತ್ತು ಗುಡ್ಡ ಕುಸಿತ ಭೀತಿ ಕಾರಣದಿಂದಾಗಿ ಪ್ರವಾಸಿಗರ ಸಂಖ್ಯೆಯಲ್ಲಿ ಕಡಿಮೆಯಾಗಿದೆ


# ಉತ್ತರ ಕನ್ನಡದಲ್ಲಿ ಪ್ರವಾಸೋದ್ಯಮ ನಿರ್ಲಕ್ಷ್ಯ

• ಉದಯವಾಹಿನಿ ಕಾರವಾರ

ಕರಾವಳಿ ಪ್ರವಾಸೋದ್ಯಮ ನಿರ್ವಹಣೆಯಲ್ಲಿನ ಅವ್ಯವಸ್ಥೆ, ಅತಿಯಾದ ಮಳೆ, ಗುಡ್ಡ ಕುಸಿತ ಭೀತಿಯ ಪರಿಣಾಮ ಪ್ರವಾಸಿಗರ ಕೊರತೆಯಾಗಿ ಉತ್ತರ ಕನ್ನಡ ಜಿಲ್ಲೆಯಲ್ಲಿ ಮದ್ಯ ಮಾರಾಟ ಕುಸಿಯುತ್ತಿದ್ದು, ರಾಜ್ಯದ ಬೊಕ್ಕಸಕ್ಕೆ ಕೋಟ್ಯಂತರ ರೂ.ಆದಾಯ ನಷ್ಟವಾಗುತ್ತಿದೆ.

- ಉತ್ತರ ಕನ್ನಡ ಜಿಲ್ಲೆಯ ಪ್ರವಾಸೋದ್ಯಮದಲ್ಲಿ ಅತಿಯಾದ ಮಳೆ ಮತ್ತು ಗುಡ್ಡ ಕುಸಿತ ಭೀತಿ ಕಾರಣದಿಂದಾಗಿ ಪ್ರವಾಸಿಗರ ಸಂಖ್ಯೆಯಲ್ಲಿ ಕಡಿಮೆಯಾಗಿದೆ
- ಇದರಿಂದ ಮದ್ಯ ಮಾರಾಟದಲ್ಲಿ ಶೇ.14.86 ರಷ್ಟು ಕೊರತೆಯಾಗಿದೆ.
- 2024-25ನೇ ಸಾಲಿಗೆ ಜಿಲ್ಲೆಗೆ 12.64 ಲಕ್ಷ ಪೆಟ್ಟಿಗೆ ಮದ್ಯ ಮಾರಾಟ ಗುರಿ ನೀಡಲಾಗಿತ್ತು, ಆದರೆ ಈ ಆರ್ಥಿಕ ವರ್ಷದಲ್ಲಿ ಕೇವಲ 11.05 ಲಕ್ಷ ಪೆಟ್ಟಿಗೆ ಮಾರಾಟವಾಗಿದೆ

ಮುರುಡೇಶ್ವರದಲ್ಲಿ ಜಲಸಾಹಸ ಕ್ರೀಡೆ ನಿಂತು ಎರಡು ವರ್ಷವಾಗಿದೆ. ಸ್ಕೂಬಾ ಡೈವ್ ಬಿಟ್ಟು ಇನ್ಯಾವುದೇ ಜಲಸಾಹಸ ನಡೆದಿಲ್ಲ.


ಉದಯವಾಹಿನಿ ಚಿತ್ರ

> ಜಿಲ್ಲೆಯಲ್ಲಿ ಕೆಲವು ಕಡೆ ಜಲಸಾಹಸ ಕ್ರೀಡೆ ನಡೆಯದೇ ಇರುವುದರಿಂದ ಮತ್ತು ಅತಿಯಾದ ಮಳೆಯಿಂದ ಜಿಲ್ಲೆಯಲ್ಲಿ ತಂಗುವ ಪ್ರವಾಸಿಗರ ಪ್ರಮಾಣ ಕಡಿಮೆಯಾಗಿದೆ. ಅಂಥ ಪ್ರದೇಶಗಳಲ್ಲಿ ಮದ್ಯ ಮಾರಾಟ ಕಡಿಮೆಯಾಗಿದೆ
> -ಅಮಾನುಲ್ಲಾ ಖಾನ್, ಅಬಕಾರಿ ಇಲಾಖೆ ಉಪ ಆಯುಕ್ತ.

ಹೊನ್ನಾವರದಲ್ಲಿಯೂ ಬೋಟಿಂಗ್‌ಗೆ ಅನುಮತಿ ಕೊಡದೆ ಅತಂತ್ರ ಸ್ಥಿತಿಯಲ್ಲಿ ನಡೆದಿದೆ. ಗೋಕರ್ಣದಲ್ಲಿಯೂ ಜಲಸಾಹಸ ಚಟುವಟಿಕೆಯಲ್ಲಿ ಗೊಂದಲಗಳಿವೆ. ಕಾರವಾರದಲ್ಲಿ ವಾರ್‌ಶಿಫ್, ಯುದ್ಧ ವಿಮಾನ ಸಂಗ್ರಹಾಲಯ, ರಾಕ್ ಗಾರ್ಡನ್ ಎಲ್ಲವೂ ಅರೆಬರೆ ಸ್ಥಿತಿಯಲ್ಲಿರುವುದರಿಂದ ಪ್ರವಾಸೋದ್ಯಮ ಆಕರ್ಷಣೆ ಕಳೆದುಕೊಂಡಿದೆ.

ತಂಗುವ ಪ್ರವಾಸಿಗರ ಸಂಖ್ಯೆ ಕಡಿಮೆ

ಇದರ ಜತೆಗೆ ಕಳೆದ ವರ್ಷ ಹಲವು ಕಡೆ ಗುಡ್ಡ ಕುಸಿತ, ಅತಿಯಾದ ಮಳೆಯಿಂದ ಜಿಲ್ಲೆಯಲ್ಲಿ ತಂಗುವ ಪ್ರವಾಸಿಗರ ಸಂಖ್ಯೆ ಕಡಿಮೆಯಾಗಿದೆ. ಜಿಲ್ಲೆಗೆ ಭೇಟಿ ನೀಡಿದ ಪ್ರವಾಸಿಗರ ಸಂಖ್ಯೆ ಹೆಚ್ಚಾದರೂ, ಅವರಲ್ಲಿ ಹೋಟೆಲ್‌ಗಳಲ್ಲಿ ಉಳಿದುಕೊಂಡವರು ಕಡಿಮೆ. ಇದೆಲ್ಲ ಕಾರಣದಿಂದ ಮದ್ಯಕ್ಕೆ ನಿರೀಕ್ಷಿತ ಬೇಡಿಕೆ ಸೃಷ್ಟಿಯಾಗಿಲ್ಲ. ಅದರಿಂದ ಅಬಕಾರಿ ಇಲಾಖೆಗೆ ಮದ್ಯ ಮಾರಾಟದಲ್ಲಿ ವಾರ್ಷಿಕ ಗುರಿ ತಲುಪಲು ಆಗಿಲ್ಲ. ಇದರಿಂದ ವಿವಿಧ ಮೂಲಗಳ ರಾಜಸ್ವ ಸಂಗ್ರಹಣೆಯಲ್ಲಿಯೂ ಕೊರತೆಯಾಗಿದೆ. ಈ ವರ್ಷ ಕೂಡ ಪರಿಸ್ಥಿತಿ ಸುಧಾರಿಸಿಲ್ಲ. ಏಪ್ರಿಲ್‌ನಿಂದ ಜೂನ್ ವರೆಗೆ 2.52 ಲಕ್ಷ ಪೆಟ್ಟಿಗೆ ಮದ್ಯವಷ್ಟೇ ಮಾರಾಟವಾಗಿದೆ. ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಮದ್ಯ ಮಾರಾಟದಲ್ಲಿಶೇ.14.86 ರಷ್ಟು ಕೊರತೆಯಾಗಿದೆ. ಬಿಯರ್ ಮಾರಾಟ ಕೂಡ ಶೇ.27.87 ರಷ್ಟು ಕಡಿಮೆಯಾಗಿದೆ. ಈವರೆಗೆ 1.50 ಕೋಟಿ ರೂ. ರಾಜಸ್ವ ಸಂಗ್ರಹಣೆ ಮಾಡಲಾಗಿದೆ ಎಂದು ಅಬಕಾರಿ ಇಲಾಖೆ ಮಾಹಿತಿ ನೀಡಿದೆ. ಜಿಲ್ಲೆಯಲ್ಲಿಗೋವಾ ಮದ್ಯ ಕಳ್ಳ ಮಾರಾಟ ಕೂಡ ಹೆಚ್ಚಾಗಿ ಪತ್ತೆಯಾಗುತ್ತಿವೆ.

**ಆದಾಯ ಖೋತಾ:** ಉತ್ತರ ಕನ್ನಡ ಜಿಲ್ಲೆಯ ಬಹುತೇಕ ಆರ್ಥಿಕ ಚಟುವಟಿಕೆಗಳು ಪ್ರವಾಸೋದ್ಯಮವನ್ನು ಅವಲಂಬಿಸಿವೆ. ಜಿಲ್ಲೆಯ ಘಟ್ಟದ ಮೇಲಿನ ಭಾಗದಲ್ಲಿ ಪ್ರವಾಸೋದ್ಯಮ ಸಹಜವಾಗಿ ನಡೆಯುತ್ತಿದ್ದು, ಅಲ್ಲಿ ಮದ್ಯ ಮಾರಾಟದಲ್ಲಿ ಅಂಥ ವ್ಯತ್ಯಾಸ ಆಗಿಲ್ಲ. ಕರಾವಳಿ ಭಾಗದಲ್ಲಿ ಮಾತ್ರ ವಿಪರೀತ ವ್ಯತ್ಯಾಸವಾಗಿದೆ.

**ಶೇ.87.43 ರಷ್ಟು ಗುರಿ ಸಾಧನೆ**

ಜಿಲ್ಲೆಯಲ್ಲಿ 2024-25ನೇ ಸಾಲಿಗೆ 12.64 ಲಕ್ಷ ಪೆಟ್ಟಿಗೆ ಮದ್ಯ ಮಾರಾಟ ಗುರಿ ನೀಡಲಾಗಿತ್ತು. ಆದರೆ, ಆರ್ಥಿಕ ವರ್ಷಾಂತ್ಯಕ್ಕೆ 11.05 ಲಕ್ಷ ಪೆಟ್ಟಿಗೆ ಮದ್ಯವಷ್ಟೇ ಎತ್ತುವಳಿಯಾಗಿದೆ. ಅಂದರೆ, ಶೇ.87.43 ರಷ್ಟು ಗುರಿ ಸಾಧನೆ ಆಗಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ, 15,900 ಪೆಟ್ಟಿಗೆ ಕಡಿಮೆ ಮಾರಾಟವಾಗಿದೆ. 8.70 ಲಕ್ಷ ಪೆಟ್ಟಿಗೆ ಬಿಯರ್ ಎತ್ತುವಳಿಯಾಗಿದ್ದು, ಕಳೆದ ವರ್ಷಕ್ಕಿಂತ 3587 ಪೆಟ್ಟಿಗೆ ಬಿಯರ್ ಹೆಚ್ಚು ಮಾರಾಟವಾಗಿದೆ. ಒಟ್ಟಾರೆ, ಲೆಕ್ಕದಲ್ಲಿ ಸಾಧನೆ ಕಡಿಮೆಯಾಗಿದೆ.

**ಮದ್ಯ ಮಾರಾಟವೂ ಕುಸಿತ**

**2024-25ನೇ ಸಾಲಿನ ಮದ್ಯ ಮಾರಾಟ**

ವಾರ್ಷಿಕ ಗುರಿ- 12.64 ಲಕ್ಷ ಪೆಟ್ಟಿಗೆ
ವಾರ್ಷಿಕ ಮಾರಾಟ- 11.05 ಲಕ್ಷ ಪೆಟ್ಟಿಗೆ, ಶೇಕಡಾ ಸಾಧನೆ- 87.43

## ನಗರಸಭೆ ಚುಕ್ಕಾಣಿ: ಜೆಡಿಎಸ್‌ಗೆ

• ಉದಯವಾಹಿನಿ ಚಿಕ್ಕಮಗಳೂರು

ಸುಜಾತಾ ಶಿವಕುಮಾರ್ ರಾಜೀನಾಮೆಯಿಂದ ತೆರವಾಗಿರುವ ನಗರಸಭೆ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆ ದಿನಾಂಕ ನಿಗದಿಯಾಗಿದ್ದು, ರಾಜಕೀಯ ಚಟುವಟಿಕೆ ಗರಿಗೆದರಿದೆ. ಬಿಜೆಪಿ-ಜೆಡಿಎಸ್ ಮೈತ್ರಿಕೂಟದ ಆಂತರಿಕ ಒಪ್ಪಂದದ ಪ್ರಕಾರ ಈ ಬಾರಿ ಜೆಡಿಎಸ್‌ಗೆ ಅಧಿಕಾರ ಸಿಗುವುದು ಬಹುತೇಕ ಖಚಿತವಾಗಿದೆ.

ಸ್ಥಳೀಯ ಸಂಸ್ಥೆಗಳಲ್ಲೂ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಮುಂದುವರಿಸಿವೆ. ಒಟ್ಟು 35 ಸದಸ್ಯ ಬಲದ ನಗರಸಭೆಯಲ್ಲಿ ಬಿಜೆಪಿಯ 18 ಸದಸ್ಯರಿದ್ದರು. ಮಾಜಿ ಅಧ್ಯಕ್ಷ ವರಸಿದ್ಧಿ ವೇಣುಗೋಪಾಲ್ ಅವರನ್ನು ಬಿಜೆಪಿಯಿಂದ ಅಮಾನತು ಮಾಡಲಾಗಿದೆ. ಇದರಿಂದ ಬಿಜೆಪಿ ಸದಸ್ಯರ ಸಂಖ್ಯೆ ಈಗ 17ಕ್ಕೆ ಇಳಿದಿದೆ. ಜೆಡಿಎಸ್‌ನ ಇಬ್ಬರು ಮತ್ತು ಜೆಡಿಎಸ್ ಬೆಂಬಲಿತ ಒಬ್ಬರು ಸೇರಿ ಮೂವರಿದ್ದಾರೆ. ಒಟ್ಟು 20 ಸದಸ್ಯ ಬಲವನ್ನು ಜೆಡಿಎಸ್ ಮತ್ತು ಬಿಜೆಪಿ ಮೈತ್ರಿ ಹೊಂದಿದೆ. ಬಿಜೆಪಿ ಆಂತರಿಕ ಒಪ್ಪಂದದ ಪ್ರಕಾರ ರಾಜೀನಾಮೆ ನೀಡಲು ಹಿಂದೇಟು ಹಾಕಿ ಅಧಿಕಾರ ನಡೆಸಿದ ವರಸಿದ್ಧಿ ವೇಣುಗೋಪಾಲ್ ನಡೆಯಿಂದ ಎಚ್ಚೆತ್ತುಕೊಂಡ ಬಿಜೆಪಿ, ಬಳಿಕ ಎಚ್ಚರಿಕೆ ಹೆಜ್ಜೆ ಇಟ್ಟಿತು. ಅಷ್ಟರಲ್ಲಿ ಜೆಡಿಎಸ್-ಬಿಜೆಪಿ ರಾಜ್ಯ ಮಟ್ಟದಲ್ಲಿ ಹೊಂದಾಣಿಕೆ ಮಾಡಿಕೊಂಡಿತ್ತು. ನಗರಸಭೆಯಲ್ಲೂ ಎರಡೂ ಪಕ್ಷಗಳು ಮೈತ್ರಿ ಮಾಡಿಕೊಂಡಿವೆ.

## ಸಕಾಲದಲ್ಲಿ ಸಾಲ ಮರುಪಾವತಿಸಿ

• ಉದಯವಾಹಿನಿ ಸಾಸ್ವೆಹಳ್ಳಿ

ರೈತರಿಂದ, ರೈತರಿಗಾಗಿ, ರೈತರಿಗೋಸ್ಕರ ಸ್ಥಾಪನೆಗೊಂಡ ಕೃಷಿ ಪತ್ತಿನ ಸಹಕಾರ ಸಂಘಗಳು ರೈತರ ಕೃಷಿ ಚಟುವಟಿಕೆಗಳಿಗೆ ಸಹಕಾರಿಯಾಗಿವೆ ಎಂದು ಹೊನ್ನಾಳಿಯ ಸಿ.ಡಿ.ಒ ನವೀನ್ ಹೇಳಿದರು. ಸಮೀಪದ ಬೀರಗೊಂಡನಹಳ್ಳಿ ಗ್ರಾಮದ ಕೃಷಿ ಪತ್ತಿನ ಸಹಕಾರ ಸಂಘದ ಆವರಣದಲ್ಲಿ ನಡೆದ ಪದಾಧಿಕಾರಿಗಳ ಸಭೆಯಲ್ಲಿ ಮಾತನಾಡಿದರು. ಜಮೀನು ಸಾಲ ಪಡೆದವರು ಮತ್ತು ಅಂಗಡಿ ವ್ಯವಹಾರಕ್ಕೆ ಸಾಲ ಪಡೆದವರು ಕೃಷಿ ಪತ್ತಿನ ಸಂಘಕ್ಕೆ ಸಕಾಲದಲ್ಲಿ ಮರುಪಾವತಿ ಮಾಡುವುದನ್ನು ಮರೆಯಬಾರದು ಎಂದರು.

## ಮಹಿಬೂಬ ನಗರದಿಂದ ಬಿದರಕುಂದಿಗೆ ಸಿಟಿ ಸಾರಿಗೆ

• ಉದಯವಾಹಿನಿ ಮುದ್ದೇಬಿಹಾಳ

ಮುದ್ದೇಬಿಹಾಳ ಪಟ್ಟಣದ ಮಹಿಬೂಬ ನಗರದಿಂದ ಬಿದರಕುಂದಿ ಗ್ರಾಮಕ್ಕೆ ನಗರ ಸಾರಿಗೆ ( ಸಿಟಿ ಬಸ್ ) ಸೇವೆಗೆ ಗುರುವಾರ ಚಾಲನೆಯನ್ನು ಪುರಸಭೆ ಅಧ್ಯಕ್ಷ ಮಹಿಬೂಬ ಗೊಳಸಂಗಿ ನೀಡಿದರು.

ಈ ವೇಳೆ ಮಾತನಾಡಿದ ಅವರು ಈಗಾಗಲೇ ಪಟ್ಟಣದ ಮಾರುತಿ ನಗರದಿಂದ ಹಡಲಗೇರಿ ಗ್ರಾಮಕ್ಕೆ ನಗರ ಸಾರಿಗೆ ವ್ಯವಸ್ಥೆ ಮಾಡಲಾಗಿದೆ ಇದೀಗ ಪಟ್ಟಣದ ಮಹಿಬೂಬ ನಗರದ ನಿವಾಸಿಗಳ ಬೇಡಿಕೆಯ ಮೇರೆಗೆ ಶಾಸಕ ಸಿ.ಎಸ್ ನಾಡಗೌಡ ಅಪ್ಪಾಜಿ ಅವರು ಕಾಳಜಿಪೂರ್ವಕವಾಗಿ ಸಿಟಿ ಸಾರಿಗೆ ಅಸ್ತು ನೀಡಿ ಇಂದಿನಿಂದ ಸಿಟಿ ಸಾರಿಗೆಗೆ ಚಾಲನೆಯನ್ನು ನೀಡಲಾಗಿದೆ ಸಿಟಿ ಸಾರಿಗೆ ಆದಾಯವನ್ನು ನೋಡಿಕೊಂಡು ಪಟ್ಟಣದಲ್ಲಿ ಇನ್ನೂ ಯಾವೆಲ್ಲಾ ಬಡಾವಣೆಗೆ ಸಿಟಿ ಬಸ್ ವ್ಯವಸ್ಥೆ ಕಲ್ಪಿಸಲು ಸಾಧ್ಯವಾಗುತ್ತದೆ ಎಂದರು. ಕಸಾಪ ತಾಲ್ಲೂಕು ಅಧ್ಯಕ್ಷ ಕಾಮರಾಜ ಬಿರಾದಾರ ಮಾತನಾಡಿ ಪಟ್ಟಣದಲ್ಲಿ ನಗರ ಸಾರಿಗೆ ವ್ಯವಸ್ಥೆಯನ್ನು ಶಾಸಕರಾದ ಅಪ್ಪಾಜಿ ನಾಡಗೌಡರ ದೂರದೃಷ್ಟಿ ಮತ್ತು ಜನರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಆರಂಭಿಸಿರುವುದು ಸ್ಥಳೀಯ ನಿವಾಸಿಗಳಿಗೆ ಶಾಲಾ ವಿದ್ಯಾರ್ಥಿಗಳಿಗೆ ಮತ್ತು ವಯೋವೃದ್ದರಿಗೆ ಗ್ರಾಮಾಂತರ ಜನರಿಗೆ ಸರಕಾರಿ ಆಸ್ಪತ್ರೆಗೆ ಹೋಗಲು ಸಹಾಯವಾಗಿದೆ. ಜನರು ಹೆಚ್ಚು ಸಿಟಿ ಬಸ್‌ನಲ್ಲಿ ಪ್ರಯಾಣಿಸಿದರೆ ಇನ್ನೂ ಹೆಚ್ಚಿನ ನಗರ ಸಾರಿಗೆ ವ್ಯವಸ್ಥೆಯನ್ನು ಮಾಡಬಹುದು ನಗರ ಸಾರಿಗೆ ಸಂಚಾರಕ್ಕೆ ನಾಗರಿಕರು ಸಹಕಾರ ನೀಡಬೇಕೆಂದು ಮನವಿ ಮಾಡಿಕೊಂಡರು. ಈ ವೇಳೆ ಸಿಟಿ ಸಾರಿಗೆ ಚಾಲಕ ನಿರ್ವಾಹಕರಿಗೆ ಮಹಿಬೂಬ ನಗರದ ಬಡಾವಣೆ ನಿವಾಸಿಗಳಿಂದ ಸನ್ಮಾನ ಮಾಡಲಾಯಿತು. ಪುರಸಭೆ ಸ್ಥಾಯಿ ಸಮಿತಿಯ ಅಧ್ಯಕ್ಷ ಯಲ್ಲಪ್ಪ ನಾಯಕಮಕ್ಕಳ. ನಾಮನಿರ್ದೇಶಿತ ಸದಸ್ಯ ಸಂತೋಷ ನಾಯ್ಕೋಡಿ, ಹುಸೇನ್ ಮುಲ್ಲಾ,ಸಾಹೇಬಲಾಲ ದೇಸಾಯಿ, ಶ್ರೀಶೈಲ ಪೂಜಾರಿ, ಸಂಗಣ್ಣ ಮೇಲಿನಮನಿ,ಉದಯಸಿಂಗ್ ರಾಯಚೂರು, ಬಬ್ಬು ಹುಣಚಗಿ,ಯಾಸೀನ್ ಅತ್ತಾರ, ಜಬ್ಬರ ಗೋಲದಾಂಜ,ಅಲ್ಲಾಭಕ್ಷ ಟಕ್ಕಳಕಿ ಪಾಲ್ಗೊಂಡಿದ್ದರು.


ಉದಯವಾಹಿನಿ ಚಿತ್ರ

ಮಹಿಬೂಬ ನಗರದಿಂದ ಹೋರಡುವ ನಗರ ಸಾರಿಗೆ ಬಸ್ ಗ್ರಾಮದೇವತೆ ಕಟ್ಟೆ ಮಾರ್ಗವಾಗಿ , ಬಸವೇಶ್ವರ ವೃತ್ತ, ಬಸ್ ನಿಲ್ದಾಣ, ಹುಡ್ಕೋಗೇಟ್, ವಿಬಿಸಿ ಹೈಸ್ಕೂಲ್, ಓಂ ಶಾಂತಿ, ಎಂಜಿವಿಸಿ ಕಾಲೇಜು ಪೂಲೀಸ್ ಸ್ಟೇಷನ್ ಮಾರ್ಗವಾಗಿ ಬಿದರಕುಂದಿ ಗೆ ಹೋಗುತ್ತದೆ, ಮಹಿಬೂಬ ನಗರದಿಂದ ಬಸ್ ನಿಲ್ದಾಣ 12 ರೂ , ಬಸ್ ನಿಲ್ದಾಣದಿಂದ ಬಿದರಕುಂದಿ 12 ರೂ, ಪ್ರತಿ ಸ್ಟಾಪ್‌ಗೆ 6 ರೂ ದರ ನಿಗದಿಪಡಿಸಲಾಗಿದೆ.

**ಪ್ರತಿ ಸ್ಟಾಪ್‌ಗೆ 6 ರೂ. ದರ ನಿಗದಿ**

## ಹೆದ್ದಾರಿ ಪ್ರಯಾಣ ಪ್ರಯಾಸಕ್ಕೆ ದಾರಿ

• ಉದಯವಾಹಿನಿ ಕಾರ್ಕಳ


ಉದಯವಾಹಿನಿ ಚಿತ್ರ

ತಾಲ್ಲೂಕಿನ ಹೆದ್ದಾರಿಗಳಲ್ಲಿ ಇದೀಗ ಪ್ರಯಾಣಿಸುವುದು ಸಂಕಷ್ಟದಾಯಕವೆನಿಸಿದ್ದು, ಸಾಣೂರು ಬಿಕರ್ನಕಟ್ಟೆ ಚತುಷ್ಪಥ ಹೆದ್ದಾರಿಯು ಸಮಸ್ಯೆಗಳ ಆಗರವಾಗಿದೆ. ಈ ಬಾರಿ ಅವಧಿಗಿಂತ ಮುನ್ನವೇ ಮಳೆಗಾಲ ಪ್ರಾರಂಭವಾಗಿದ್ದು, ಚರಂಡಿ ವ್ಯವಸ್ಥೆ ಇಲ್ಲದೆ ರಾಷ್ಟ್ರೀಯ ಹೆದ್ದಾರಿಯ ಇಕ್ಕಲೆಗಳಲ್ಲಿರುವ ಮನೆ, ಅಂಗಡಿಗಳಿಗೆ ಮಳೆ ನೀರು ನುಗ್ಗಿ, ಅಪಾರ ಹಾನಿ ಸಂಭವಿಸಿದೆ.

ಹೆದ್ದಾರಿಯ ತಗ್ಗು ಪ್ರದೇಶಗಳಲ್ಲಿ ನೀರು ಸಂಗ್ರಹಗೊಂಡು ಪ್ರಯಾಣ ಪ್ರಯಾಸದಾಯಕವಾಗಿದೆ. ಕಾರ್ಕಳದಲ್ಲಿ ಸುಮಾರು 2 ಕಿ. ಮೀ. ಸರ್ವಿಸ್ ರಸ್ತೆ ನಿರ್ಮಾಣಕ್ಕೆ ಇನ್ನೂ ಪ್ರಸ್ತಾವನೆ ಅಂಗೀಕಾರ ಆಗಿಲ್ಲದಿರುವುದರಿಂದ ರಾಷ್ಟ್ರೀಯ ಹೆದ್ದಾರಿಯ ಅಕ್ಕ ಪಕ್ಕದ ಅಡ್ಡ ರಸ್ತೆಯಿಂದ ವಾಹನಗಳು ಮತ್ತು ಜನರು ನೇರವಾಗಿ ರಾಷ್ಟ್ರೀಯ ಹೆದ್ದಾರಿಗೆ ಬರುತ್ತಿದ್ದು ಈಗಾಗಲೇ ಹಲವಾರು ಅಪಘಾತಗಳು ಸಂಭವಿಸಿವೆ. ಹೆದ್ದಾರಿಯಲ್ಲಿ ಬೀದಿ ದೀಪಗಳಿಲ್ಲದಿರುವುದರಿಂದ ರಾತ್ರಿ ಸಂಚಾರಕ್ಕೆ ಬಹಳ ತೊಂದರೆಯಾಗುತ್ತಿದೆ. ತಿರುವುಗಳಲ್ಲಿ ಪ್ರಯಾಣಿಕರಿಗೆ ಗೊಂದಲವಾಗದಂತೆ ಬ್ಲಿಂಕರ್, ಬೆಳಕಿನ ವ್ಯವಸ್ಥೆ, ಫ್ಲೋರಸೆಂಟ್ ಸ್ಟಿಕ್ಕರ್‌ಗಳನ್ನು ಅಳವಡಿಸಬೇಕಾಗಿದೆ.

## ಸಾಮಾಜಿಕ ಭದ್ರತಾ ಯೋಜನೆಗಳ ಜಾಗೃತಿ ಅಭಿಯಾನಕ್ಕೆ ಚಾಲನೆ

• ಉದಯವಾಹಿನಿ ಚಿತ್ರದುರ್ಗ

ಎಸ್.ಹೆಚ್.ಜಿ (ಸ್ವಸಹಾಯ ಗುಂಪು) ಸದಸ್ಯರನ್ನು ಸಾಮಾಜಿಕ ವಿಮಾ ಯೋಜನಗಳಾದ ಪಿ.ಎಂ.ಜೆ.ಜೆ.ಬಿ.ವೈ (ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಬೀಮಾ ಯೋಜನೆ) ಪಿ.ಎಂ.ಎಸ್.ಬಿ.ವೈ (ಪ್ರಧಾನ ಮಂತ್ರಿ ಸುರಕ್ಷಾ ಬೀಮಾ ಯೋಜನೆ) ಹಾಗೂ ಎ.ಪಿ.ವೈ (ಅಟಲ್ ಪಿಂಚಣಿ ಯೋಜನೆ) ಅಡಿಯಲ್ಲಿ ತರುವಂತೆ ಬ್ಯಾಂಕ್ ಅಧಿಕಾರಿಗಳಿಗೆ ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕಿ ಸಿ.ಎಸ್.ಗಾಯಿತ್ರಿ ಸೂಚಿಸಿದರು.

ಚಿತ್ರದುರ್ಗ ತಾಲ್ಲೂಕಿನ ತುರುವನೂರು ಗ್ರಾಮದ ರಾಮಲಿಂಗೇಶ್ವರ ಕಲ್ಯಾಣ ಮಂಟಪದಲ್ಲಿ ಬುಧವಾರ ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್, ಎನ್.ಆರ್.ಎಲ್.ಎಂ (ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಯೋಜನೆ) ಹಾಗೂ ತುರುವನೂರು ಕೆನರಾ ಬ್ಯಾಂಕ್ ಶಾಖೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ, 3 ತಿಂಗಳ ಸಾಮಾಜಿಕ ಭದ್ರತಾ ಯೋಜನೆಗಳ ಜಾಗೃತಿ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.


ಉದಯವಾಹಿನಿ ಚಿತ್ರ

ಗ್ರಾಮೀಣ ಭಾಗದಲ್ಲಿ ಆರ್ಥಿಕ ಸಾಕ್ಷರತೆಯನ್ನು ಹೆಚ್ಚಿಸುವುದರ ಜೊತೆಗೆ, ಪ್ರತಿ ಕುಟುಂಬದ ಸದಸ್ಯರು ಸಾಮಾಜಿಕ ಭದ್ರತಾ ಯೋಜನೆ ಲಾಭ ಪಡೆಯುವಂತೆ ಬ್ಯಾಂಕುಗಳು ಕಾರ್ಯನಿರ್ವಹಿಸಬೇಕು.

ಇದರೊಂದಿಗೆ ಜಿಲ್ಲಾ ಪಂಚಾಯಿತಿ ಎನ್.ಆರ್.ಎಲ್.ಎಂ ಸಂಯೋಜಕರು ಸ್ವಸಹಾಯ ಗುಂಪುಗಳ ಸದಸ್ಯರ ಕುಟುಂಬದವರನ್ನು ಸಹ ಸಾಮಾಜಿಕ ವಿಮಾ ಯೋಜನೆಯಡಿ ನೊಂದಣಿ ಮಾಡಲು ಜಾಗೃತಿ ಮೂಡಿಸಬೇಕು ಎಂದರು.

3 ತಿಂಗಳ ಅಭಿಯಾನದಲ್ಲಿ ಜನಧನ್ ಯೋಜನೆಯಡಿ ಹೊಸ ಬ್ಯಾಂಕ್ ಖಾತೆ ತೆರೆಯಲಾಗುವುದು. ಹಳೆಯ ಬ್ಯಾಂಕ್ ಖಾತೆಗಳ ಇ-ಕೆವೈಸಿ ಮಾಡಲಾಗುವುದು. ಸಾಮಾಜಿಕ ವಿಮಾ ಯೋಜನೆಗಳು ಹಾಗೂ ಬ್ಯಾಂಕ್‌ಗಳ ಹೆಸರಿನಲ್ಲಿ ಎಸಗುವ ಡಿಜಿಟಲ್ ವಂಚನೆಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಲಾಗುವುದು ಎಂದು ಲೀಡ್ ಬ್ಯಾಂಕ್ ವ್ಯವಸ್ಥಾಪಕ ಎಂ.ರಾಘವೇಂದ್ರ ತಿಳಿಸಿದರು.

> ಗ್ರಾಮೀಣ ಭಾಗದಲ್ಲಿ ಆರ್ಥಿಕತೆ ಒಳಗೊಳ್ಳುವಿಕೆ ಮಟ್ಟ ಹೆಚ್ಚಿಸಿ, ಸಾಮಾಜಿಕ ಭದ್ರತೆ ಹಾಗೂ ವಿಮಾ ಯೋಜನೆಗಳನ್ನು ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಜುಲೈ 1ರಿಂದ ಸೆಪ್ಟಂಬರ್ 30ರ ವರೆಗೆ 3 ತಿಂಗಳ ಕಾಲ ಜಿಲ್ಲೆಯ 189 ಗ್ರಾಮ ಪಂಚಾಯಿತಿಗಳಲ್ಲಿ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಬ್ಯಾಂಕ್ ಅಧಿಕಾರಿಗಳು ಸಾಮಾಜಿಕ ವಿಮಾ ಯೋಜನೆಗಳ ನೊಂದಣಿ ಹೆಚ್ಚಿನ ಶ್ರಮ ವಹಿಸಬೇಕು. -ಎಂ.ರಾಘವೇಂದ್ರ
> ಲೀಡ್ ಬ್ಯಾಂಕ್ ವ್ಯವಸ್ಥಾಪಕ

## ಮಳೆಗೆ 15.09 ಕೋಟಿ ನಷ್ಟ

• ಉದಯವಾಹಿನಿ ಹುಬ್ಬಳ್ಳಿ

ಕೆಲ ದಿನಗಳಿಂದ ಗಾಳಿ ಸಹಿತ ಸುರಿದ ಮಳೆಗೆ ಹೆಸ್ಕಾಂ ವ್ಯಾಪ್ತಿಯ ವಿವಿಧೆಡೆ ವಿದ್ಯುತ್ ಕಂಬಗಳು, ಪರಿವರ್ತಕಗಳು ಹಾಗೂ ಲೈನ್‌ಗಳಿಗೆ ಹಾನಿಯಾಗಿದ್ದು, ಅಂದಾಜು 15.09 ಕೋಟಿ ನಷ್ಟವಾಗಿದೆ. ಏಪ್ರಿಲ್ 1ರಿಂದ 27ರವರೆಗೆ ಧಾರವಾಡ, ಗದಗ, ಉತ್ತರ ಕನ್ನಡ, ಬಾಗಲಕೋಟೆ, ಬೆಳಗಾವಿ, ವಿಜಯಪುರ ಹಾಗೂ ಹಾವೇರಿ ಜಿಲ್ಲೆಯಲ್ಲಿ 3,505 ವಿದ್ಯುತ್ ಕಂಬ, 151 ವಿದ್ಯುತ್ ಪರಿವರ್ತಕ, 16 ಕಿ.ಮೀ. ವಿದ್ಯುತ್ ಲೈನ್ ಹಾನಿಯಾಗಿವೆ' ಎಂದು ಹೆಸ್ಕಾಂ ಪ್ರಕಟಣೆಯಲ್ಲಿ ತಿಳಿಸಿದೆ.

12,794 ಕಂಬಗಳನ್ನು ಮರು ಸ್ಥಾಪಿಸಲಾಗಿದೆ ಧಾರವಾಡ 228, ಗದಗ 36, ಹಾವೇರಿ 329, ಉತ್ತರ ಕನ್ನಡ 1,710, ಬೆಳಗಾವಿ 189, ವಿಜಯಪುರ 596, ಬಾಗಲಕೋಟೆ 417 ಕಂಬಗಳು ಉರುಳಿವೆ. 145 ಪರಿವರ್ತಕಗಳನ್ನು ಬದಲಾಯಿಸಲಾಗಿದೆ. 15 ಕಿ.ಮೀ. ವಿದ್ಯುತ್ ಮಾರ್ಗವನ್ನು ಮರುಸ್ಥಾಪಿಸಲಾಗಿದೆ. ಮಾರ್ಚ್‌ನಲ್ಲಿ ಅಂದಾಜು 2.76 ಕೋಟಿ ನಷ್ಟವಾಗಿತ್ತು ಎಂದು ಮಾಹಿತಿ ನೀಡಿದೆ.

## ಬಸ್ ಸೌಕರ್ಯ, ತಂಗುದಾಣ ಮರೀಚಿಕೆ

• ಉದಯವಾಹಿನಿ ಬೆಳಗಾವಿ

ಈ ಬಡಾವಣೆಗಳಿಗೆ ನಿತ್ಯ ಸಂಚರಿಸುವುದು ಸಾರಿಗೆ ಸಂಸ್ಥೆಯ ಒಂದೇ ಬಸ್. ಒಂದೆಡೆ ಸಮರ್ಪಕ ಬಸ್ ಸೌಕರ್ಯವಿಲ್ಲ. ಮತ್ತೊಂದೆಡೆ ಬಸ್‌ಗಾಗಿ ಕಾಯುತ್ತ ನಿಲ್ಲಲು ಒಂದೂ ತಂಗುದಾಣ ಇಲ್ಲ. ನಗರದ ಹೊರವಲಯದ ಬಸವನ ಕುಡಚಿಯ ದೇವರಾಜ ಅರಸು ಕಾಲೊನಿ ಮತ್ತು ಕರ್ನಾಟಕ ಹೌಸಿಂಗ್ ಬೋರ್ಡ್(ಕೆಎಚ್‌ಬಿ) ಕಾಲೊನಿ ನಿವಾಸಿಗಳಿಗೆ ಎದುರಾಗಿರುವ ಸಂಕಷ್ಟವಿದು.

ಬೆಳಗಾವಿಯಿಂದ ಐದಾರು ಕಿ.ಮೀ ದೂರದಲ್ಲಿರುವ ಈ ಬಡಾವಣೆಗಳಲ್ಲಿ ಸಾವಿರಾರು ಜನರು ವಾಸಿಸುತ್ತಿದ್ದು, ಮಧ್ಯಮ ವರ್ಗದ ಜನರೇ ಹೆಚ್ಚಿದ್ದಾರೆ. ಕಲಿಕೆ ಮತ್ತು ದುಡಿಮೆಗಾಗಿ ಹಲವರು ಬೆಳಗಾವಿ ನಗರವನ್ನೇ ಅವಲಂಬಿಸಿದ್ದಾರೆ.

ನಗರ ಬಸ್ ನಿಲ್ದಾಣ (ಸಿಬಿಟಿ)ದಿಂದ ದೇವರಾಜ ಅರಸ್ ಕಾಲೊನಿ, ಕೆಎಚ್‌ಬಿ ಕಾಲೊನಿಗೆ ಒಂದೇ ಬಸ್ ಸಂಚರಿಸುತ್ತದೆ. ಬೆಳಗಾವಿ-ಬಾಗಲಕೋಟೆ ಹೆದ್ದಾರಿಯಿಂದ 2 ಕಿ.ಮೀ. ಒಳಗಿರುವ ನಮ್ಮ ಬಡಾವಣೆಗಳಿಗೆ ಇದೊಂದೇ ಬಸ್ ಆಸರೆ, ಸಂಚಾರ ಸಮಸ್ಯೆ ಕಾರಣದಿಂದ ಬಸ್ ಸಕಾಲಕ್ಕೆ ಬಾರದ್ದರಿಂದ ಸಮಸ್ಯೆಯಾಗುತ್ತಿದೆ' ಎಂದು ಸ್ಥಳೀಯ ಸುಭಾಷಚಂದ್ರ ಮುಷ್ಟಗಿ ಹೇಳಿದರು. ಸಿಬಿಟಿಯಿಂದ ನಮ್ಮ ಬಡಾವಣೆಗಳಿಗೆ ರಾತ್ರಿ 8.45ಕ್ಕೆ ಕೊನೇ ಬಸ್ ಹೊರಡುತ್ತದೆ. ಆ ನಂತರ ಬೇರೆ ಬಸ್‌ನಲ್ಲಿ ಬೆಳಗಾವಿ-ಬಾಗಲಕೋಟೆ ಹೆದ್ದಾರಿಯವರೆಗೆ ಬಂದು, ಅಲ್ಲಿಂದ ನಡೆದು ಬರುವುದು ಅನಿವಾರ್ಯವಾಗಿದೆ. ಹಾಗಾಗಿ, ಸಿಬಿಟಿಯಿಂದ ರಾತ್ರಿ 9.30ಕ್ಕೆ ಕೊನೇ ಬಸ್ ಸಂಚರಿಸಲು ವ್ಯವಸ್ಥೆ ಮಾಡಬೇಕು' ಎಂದು ಮಹೇಶ ಹಿರೇಮಠ ಒತ್ತಾಯಿಸಿದರು.



ಉದಯವಾಹಿನಿ ಚಿತ್ರ

ನಮ್ಮ ಬಡಾವಣೆಗಳಿಗೆ ಎರಡು ಬಸ್ ಸಂಚರಿಸಬೇಕು. ಕನಿಷ್ಠ ಅರ್ಧ ತಾಸಿಗೊಂದು ಬಸ್ ಕಾರ್ಯಾಚರಣೆಗೆ ಕ್ರಮ ವಹಿಸುವಂತೆ ಹಲವು ಬಾರಿ ಸಾರಿಗೆ ಸಂಸ್ಥೆ ಅಧಿಕಾರಿಗಳ ಗಮನಕ್ಕೆ ತಂದಿದ್ದೇವೆ. ಆದರೆ, ಸ್ಪಂದನೆ ಸಿಕ್ಕಿಲ್ಲ' ಎಂದು ಶೇಖರಯ್ಯ ಕೊರಗಲ್ಲಮಠ ಬೇಸರ ವ್ಯಕ್ತಪಡಿಸಿದರು.

## ಆಶಾ ಕಿರಣ ದೃಷ್ಟಿ ಕೇಂದ್ರ ಉದ್ಘಾಟನೆ : ಇಂದಿನಿಂದ 17 ಕಡೆ ಸೇವೆ

• ಉದಯವಾಹಿನಿ ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾ ಆಸ್ಪತ್ರೆ ಸೇರಿದಂತೆ ರಾಜ್ಯಾದ್ಯಂತ ಒಟ್ಟು 393 ಆಶಾ ಕಿರಣ ದೃಷ್ಟಿ ಕೇಂದ್ರಗಳನ್ನು ಏಕಕಾಲಕ್ಕೆ ರಾಜ್ಯದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಡಿಜಿಟಲ್ ವ್ಯವಸ್ಥೆಯ ಮೂಲಕ ಉದ್ಘಾಟಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಅವರು ಜಿಲ್ಲಾ ಆಸ್ಪತ್ರೆಯ ಕಣ್ಣಿನ ವಿಭಾಗದಲ್ಲಿ ಸಾಂಕೇತಿಕವಾಗಿ ಚಾಲನೆ ನೀಡಿದರು. ನಂತರ ಮಾತನಾಡಿದ ಡಿಹೆಚ್‌ಒ ಡಾ.ಜಿ.ಪಿ.ರೇಣುಪ್ರಸಾದ್, ಆಶಾ ಕಿರಣ ದೃಷ್ಟಿ ಕೇಂದ್ರ ಸ್ಥಾಪನೆ ಸಾರ್ವಜನಿಕ ಆರೋಗ್ಯ ಕಾರ್ಯಕ್ರಮದಲ್ಲಿ ವಿಶ್ವ ಆರೋಗ್ಯ ಸಂಸ್ಥೆಯು ಮೆಚ್ಚುಗೆ ವ್ಯಕ್ತ ಪಡಿಸಿರುವ ಕಾರ್ಯಕ್ರಮವಾಗಿದೆ ಎಂದು ಹೇಳಿದರು.

ಚಿತ್ರದುರ್ಗ ಜಿಲ್ಲೆಯ ಎಲ್ಲಾ ತಾಲ್ಲೂಕಿನ ಸಾರ್ವಜನಿಕ ಆಸ್ಪತ್ರೆ, ಜಿಲ್ಲಾ ಆಸ್ಪತ್ರೆ ಮತ್ತು ಎಲ್ಲಾ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ಒಟ್ಟು ಜಿಲ್ಲೆಯಾದ್ಯಂತ 17 ಕಡೆ ಇಂದಿನಿಂದ ಸೇವೆ ಒದಗಿಸಲಾಗುತ್ತದೆ ಎಂದರು.ಜಿಲ್ಲಾ ಅಂಧತ್ವ ನಿವಾರಣಾ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಜಿ.ಓ.ನಾಗರಜ್ ಮಾತನಾಡಿ, ಈ ಹಿಂದೆ ಆಶಾ ಕಿರಣ ಯೋಜನೆಯಡಿಯಲ್ಲಿ ಜಿಲ್ಲೆಯ ಎಲ್ಲಾ ಗ್ರಾಮಗಳಲ್ಲಿ ಮನೆ ಮನೆ ಬೇಟಿ ಮಾಡಿ ಆಶಾ ಕಾರ್ಯಕರ್ತೆಯರಿಂದ ದೃಷ್ಟಿ ದೋಷ ಪರೀಕ್ಷೆ ನಡೆಸಿ ಎರಡನೇ ಹಂತದಲ್ಲಿ ಈಗಾಗಲೇ ಗುರುತಿಸಿದ ದೃಷ್ಟಿ ದೋಷದ ಫಲಾನುಭವಿಗಳನ್ನು ಸಹಾಯಕ ನೇತ್ರಾಧಿಕಾರಿಗಳ ಮೂಲಕ ಮತ್ತು ಕಣ್ಣಿನ ತಜ್ಞರ ಮೂಲಕ ತಪಾಸಣೆ ನಡೆಸಿ



ಉದಯವಾಹಿನಿ ಚಿತ್ರ

ದತ್ತಾಂಶವನ್ನು ಗಣಕೀಕೃತಗೊಳಿಸಿ ಶಾಲಾ ಮಕ್ಕಳಿಗೆ ಇತರೆ ಸಾರ್ವಜನಿಕರಿಗೆ ಕಣ್ಣಿನ ಪೊರೆ ಶಸ್ತ್ರಚಿಕಿತ್ಸೆ ಮತ್ತು ಉಚಿತ ಕನ್ನಡಕಗಳನ್ನು ವಿತರಿಸುವ ಯೋಜನೆ ಅನುಷ್ಠಾನ ಗೊಳಿಸಲಾಗುತ್ತಿದೆ. ಯೋಜನೆಯ 3 ಹಂತದಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ಕಣ್ಣಿನ ದೋಷ ನಿವಾರಣೆಗಾಗಿ ಆಶಾ ಕಿರಣ ದೃಷ್ಟಿಕೇಂದ್ರಗಳ ಸ್ಥಾಪನೆಯಾಗಿದ್ದು, ಸಾರ್ವಜನಿಕರು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ಇದೇ ಸಂದರ್ಭದಲ್ಲಿ ಸಾಂಕೇತಿಕವಾಗಿ 32 ಜನರಿಗೆ ದೃಷ್ಟಿ ದೋಷ ತಪಾಸಣೆ ನಡೆಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ರವೀಂದ್ರ, ನಿವಾಸಿ ವೈದ್ಯಾಧಿಕಾರಿ ಡಾ.ಆನಂದ್ ಪ್ರಕಾಶ್, ವೈದ್ಯರಾದ ಡಾ.ಶಿಲ್ಪಾ, ಡಾ.ಪ್ರದೀಪ್ ಸಹಾಯಕ ನೇತ್ರಾಧಿಕಾರಿ ಕೆ.ಸಿ.ರಾಮು,ಆಡಿ. ಸುಜಾತಾ ನೇತ್ರತಜ್ಞರು ಲಕ್ಷ್ಮಿ ಓಟಿ ಸಿಸ್ಟರ್ ಪುಷ್ಪಲತಾ ನೇತ್ರಾಧಿಕಾರಿ ಉಪಸ್ಥಿತರಿದ್ದರು.

### • ಜಿಲ್ಲೆಯಲ್ಲಿ ಮರಳು ಅಲಭ್ಯತೆಯಿಂದ ನಿರ್ಮಾಣ ಚಟುವಟಿಕೆಗೆ ಸಮಸ್ಯೆಯಾಗಿದೆ ಎಂದು ಕೂಗೆದ್ದಿದೆ

# ಸ್ಯಾಂಡ್ ಬಜಾರ್ ಆ್ಯಪ್‌ನಲ್ಲಿ ಮರಳು ಖರೀದಿಸಿ: ಗಣಿ ಇಲಾಖೆ ಅಧಿಕಾರಿಗಳ ಸಲಹೆ

• ಉದಯವಾಹಿನಿ ಮಂಗಳೂರು

ಜಿಲ್ಲೆಯಲ್ಲಿ ಮರಳು ಅಲಭ್ಯತೆಯಿಂದ ನಿರ್ಮಾಣ ಚಟುವಟಿಕೆಗೆ ಸಮಸ್ಯೆಯಾಗಿದೆ ಎಂದು ಕೂಗೆದ್ದಿದೆ. ಆದರೆ, ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳ ಪ್ರಕಾರ ಜಿಲ್ಲೆಯಲ್ಲಿ ಅಧಿಕೃತವಾಗಿ ಗುರುತಿಸಿದ ಬ್ಲಾಕ್‌ಗಳಿಂದ ತೆಗೆದು ದಾಸ್ತಾನು ಮಾಡಿರುವ 27 ಸಾವಿರಕ್ಕೂ ಹೆಚ್ಚು ಟನ್ ಮರಳು ಈಗಲೂ ಲಭ್ಯ

ಜಿಲ್ಲೆಯಲ್ಲಿ ಪ್ರಸ್ತುತ 25 ಮರಳು ಬ್ಲಾಕ್‌ಗಳನ್ನು ಗುರುತಿಸಲಾಗಿದ್ದು, ಗಣಿ ಮತ್ತು ಭೂವಿಜ್ಞಾನ ಇಲಾಖೆ ಕೆಲ ವರ್ಷಗಳ ಹಿಂದೆಯೇ ಇ-ಟೆಂಡರ್ ಆಹ್ವಾನಿಸಿ ಅವುಗಳನ್ನು ಗುತ್ತಿಗೆಗೆ ನೀಡಿತ್ತು. ಗುತ್ತಿಗೆಗೆ ಪಡೆದವರ ಸಂಗ್ರಹಾಗಾರದಲ್ಲಿ 27,550 ಟನ್ ಮರಳು ಸಂಗ್ರಹವಿದೆ.

**2.82 ಲಕ್ಷ ಟನ್ ಮರಳು ಲಭ್ಯ**

ಈ ಹಿಂದೆ ಚಾಲ್ತಿಯಲ್ಲಿದ್ದ ಸ್ಯಾಂಡ್ ಬಜಾರ್ ಆ್ಯಪ್ 2025ರ ಮಾರ್ಚ್ 14ರಿಂದ ಮತ್ತೆ ಬಳಕೆಗೆ ಲಭ್ಯ ಇದೆ. ಈ ಆ್ಯಪ್ ಮೂಲಕವೇ ಮರಳನ್ನು ಖರೀದಿಸಬಹುದು. ಇದುವರೆಗೆ ಈ ಆ್ಯಪ್ ಮೂಲಕ 10,911 ಟನ್ ಮರಳು ವಿತರಿಸಲಾಗಿದೆ ಎಂದು ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಯೊಬ್ಬರು ಮಾಹಿತಿ ನೀಡಿದರು.

**ಮರಳು ಕೊರತೆ ಹೇಗೆ?:** ಜಿಲ್ಲೆಯ ನದಿಗಳಲ್ಲಿ ಕರಾವಳಿ ನಿಯಂತ್ರಣ ವಲಯ (ಸಿಆರ್‌ಜೆಡ್) ವ್ಯಾಪ್ತಿಯಲ್ಲಿ ಈ ಹಿಂದೆ ಮಳೆಗಾಲದಲ್ಲಿ ವ್ಯಾಪಕವಾಗಿ ಮರಳು ತೆಗೆಯಲಾಗುತ್ತಿತ್ತು. ನುಣುಪಾದ ಈ ಮರಳು ಕಟ್ಟಡ ಕಾಮಗಾರಿಗಳಿಗೆ ಅತ್ಯಂತ ಸೂಕ್ತವಾದುದು. ಮಳೆಗಾಲದಲ್ಲಿ ಸಿಆರ್‌ಜೆಡ್ ವ್ಯಾಪ್ತಿಯ ನದಿ ನೀರಿನಲ್ಲಿ ಉಪ್ಪಿನಂಶ ಇರುವುದಿಲ್ಲ. ಹಾಗಾಗಿ ಮಳೆಗಾಲದಲ್ಲಿ ತೆಗೆಯುವ ಮರಳಿಗೆ ಉತ್ತಮ ಬೇಡಿಕೆ ಇತ್ತು. ಸಿಆರ್‌ಜೆಡ್ ಪ್ರದೇಶದಲ್ಲಿ ತೆಗೆಯುವ ಮರಳನ್ನು ವಾಣಿಜ್ಯ ಉದ್ದೇಶಕ್ಕೆ ಬಳಸುವಂತಿಲ್ಲ. ಕಿನಾರೆಗಳಲ್ಲಿ ಸವಕಳಿ ತಡೆಯಲು ಮರಳು ಮರುಪೂರಣಕ್ಕೆ ಬಳಸಬಹುದು ಎಂದು ಚೆನ್ನೈನ ಹಸಿರು ನ್ಯಾಯಮಂಡಳಿ ಎರಡು ವರ್ಷಗಳ ಹಿಂದೆ ತೀರ್ಪು ನೀಡಿದೆ. ಆ ಬಳಿಕ ಎಲ್ಲೂ ಸಿಆರ್‌ಜೆಡ್ ಪ್ರದೇಶದಲ್ಲಿ ಮರಳುಗಾರಿಕೆಗೆ ಅವಕಾಶ ನೀಡುತ್ತಿಲ್ಲ ಎಂದು ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಯೊಬ್ಬರು ತಿಳಿಸಿದರು. ಜಿಲ್ಲೆಯಲ್ಲಿ ಸಿಆರ್‌ಜೆಡ್ ಪ್ರದೇಶದಲ್ಲಿ ಹಿಂದೆ ನದಿಗಳಲ್ಲಿ 9 ಕಡೆ ಮರಳು ದಿಬ್ಬಗಳನ್ನು ಗುರುತಿಸಲಾಗಿತ್ತು. ಅವುಗಳಲ್ಲಿ, 3,00,965 ಟನ್ ಮರಳು ಇರಬಹುದೆಂದು ಅಂದಾಜಿಸಲಾಗಿತ್ತು. ಬಳಿಕ 14 ಕಡೆ ಸ್ಥಳಗಳನ್ನು ಗುರುತಿಸಿದ್ದ ಜಿಲ್ಲಾಡಳಿತ 148 ಮಂದಿಗೆ ಮರಳು ತೆಗೆಯಲು ಅವಕಾಶ ನೀಡಿತ್ತು. ಹಸಿರು ನ್ಯಾಯಮಂಡಳಿ ಆದೇಶದ ಬಳಿಕ ಈ ದಿಬ್ಬಗಳಲ್ಲೂ ಮರಳು ತೆಗೆಯಲು ಅವಕಾಶವಿಲ್ಲದಂತಾಯಿತು. ಅದೂ ಕದ್ದುಮುಚ್ಚಿ ಮರಳು ತೆಗೆಯುವ ಪರಿಪಾಟ ಮುಂದುವರಿದಿತ್ತು. ತಿಂಗಳಿನಿಂದ ಈಚೆಗೆ ಜಿಲ್ಲೆಯಲ್ಲಿ ಅಕ್ರಮ ಮರಳುಗಾರಿಕೆ ವಿರುದ್ಧ ಜಿಲ್ಲಾಡಳಿತ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುತ್ತಿದೆ. ಅಕ್ರಮ ಮರಳುಗಾರಿಕೆ ನಡೆಸುತ್ತಿದ್ದವರೂ ಮರಳು ತೆಗೆಯಲು ಹಿಂದೆ ಮುಂದೆ ನೋಡುವ ಸ್ಥಿತಿ ಎದುರಾಗಿದೆ. ಲಾರಿಯಲ್ಲಿ ಮರಳು ಸಾಗಿಸಿದರೆ ಅದನ್ನು ಪೊಲೀಸರು ವಶಕ್ಕೆ ಪಡೆಯುತ್ತಾರೆ ಎಂಬ ಭಯದಿಂದ ಯಾರೂ ಮರಳು ಸಾಗಾಟಕ್ಕೆ ಲಾರಿಯನ್ನೂ ನೀಡುತ್ತಿಲ್ಲ.ದುಪ್ಪಟ್ಟು ದುಡ್ಡು ಕೊಡುತ್ತೇವೆಯೆಂದರೂ ಮರಳು ತಂದು ಹಾಕುವವರಿಲ್ಲ ಎಂದು ಬಿಲ್ಡರ್ ಒಬ್ಬರು ತಿಳಿಸಿದರು.


ಉದಯವಾಹಿನಿ ಚಿತ್ರ

**18 ಹೊಸ ಬ್ಲಾಕ್‌ಗಳಿಗೆ ಶೀಘ್ರ ಟೆಂಡರ್**

ಜಿಲ್ಲೆಯಲ್ಲಿ ಒಟ್ಟು 18 ಕಡೆ ಹೊಸತಾಗಿ ಮರಳು ಬ್ಲಾಕ್‌ಗಳನ್ನು ಜಿಲ್ಲಾಡಳಿತ ಗುರುತಿಸಿದೆ. ಇವುಗಳಲ್ಲಿ 2.82 ಲಕ್ಷ ಟನ್ ಮರಳು ಲಭ್ಯ ಇದೆ ಎಂದು ಅಂದಾಜು ಮಾಡಲಾಗಿದೆ. ಈ ಹೊಸ ಬ್ಲಾಕ್‌ಗಳ ಮರಳು ಲಭ್ಯವಾದ ಬಳಿಕ ಸಿಆರ್‌ಜೆಡ್ ವ್ಯಾಪ್ತಿಯಲ್ಲಿ ಮರಳುಗಾರಿಕೆ ನಿಷೇಧದಿಂದ ಎದುರಾದ ಮರಳಿನ ಕೊರತೆ ನೀಗಬಹುದು ಎಂಬುದು ಅಧಿಕಾರಿಗಳ ನಿರೀಕ್ಷೆ. ಈ 18 ಹೊಸ ಮರಳು ಬ್ಲಾಕ್‌ಗಳಿಗೆ ಟೆಂಡರ್ ಕರೆದಾಗ ಯಾರೂ ಭಾಗವಹಿಸಿರಲಿಲ್ಲ. ಅಲ್ಪಾವಧಿ ಟೆಂಡರ್ ಕರೆದು ಗುತ್ತಿಗೆದಾರರನ್ನು ಗುರುತಿಸುವಂತೆ ಜಿಲ್ಲಾಧಿಕಾರಿ ದರ್ಶನ್ ಎಚ್.ವಿ. ಗಣಿ ಮತ್ತು ಭೂಇಜ್ಞಾನ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

**ಎಂ- ಸ್ಯಾಂಡ್‌ಗೂ ಬೇಡಿಕೆ ಹೆಚ್ಚಳ**

ಜಿಲ್ಲೆಯಲ್ಲಿ ಎಂ ಸ್ಯಾಂಡ್ ಉತ್ಪಾದಿಸುವ 18 ಘಟಕಗಳಿವೆ. ಈ ಘಟಕಗಳಲ್ಲಿ 2024-25ರಲ್ಲಿ 1.17 ಲಕ್ಷ ಟನ್ ಎಂ.ಸ್ಯಾಂಡ್ ಉತ್ಪಾದಿಸಲಾಗಿದೆ. 2025ರಲ್ಲಿ ಮೇ ಅಂತ್ಯದವರೆಗೆ 27034 ಟನ್ ಎಂ-ಸ್ಯಾಂಡ್ ಉತ್ಪಾದಿಸಲಾಗಿದೆ. ಹಿಂದೆ ಯಥೇಚ್ಚವಾಗಿ ಮರಳು ಕಡಿಮೆ ದರಕ್ಕೆ ಲಭಿಸುತ್ತಿದ್ದಾಗ ಎಂ-ಸ್ಯಾಂಡ್ ಬಳಕೆಗೆ ಯಾರೂ ಆಸಕ್ತಿ ತೋರುತ್ತಿರಲಿಲ್ಲ. ಆದರೆ ಈಗ ಕಟ್ಟಡ ನಿರ್ಮಾಣಕ್ಕೆ ಎಂ-ಸ್ಯಾಂಡ್ ಕೂಡಾ ಬಳಸಲಾಗುತ್ತಿದೆ ಎಂದು ಬಿಲರ್ ಒಬ್ಬರು ತಿಳಿಸಿದರು.

## ರಾಮಾಯಣ ಫಸ್ಟ್ ಟೈಟಲ್ ಟೀಸರ್ ರಿಲೀಸ್
# ರಾಮ-ರಾವಣನ ಆರ್ಭಟ ಶುರು



ಯಶ್ ನಟಿಸಿ ನಿರ್ಮಿಸುತ್ತಿರುವ ಮಹಾತ್ವಾಕಾಂಕ್ಷೆಯ ಪ್ರಾಜೆಕ್ಟ್ ರಾಮಾಯಣ ಚಿತ್ರದ ಅಫಿಷಿಯಲ್ ಫಸ್ಟ್ ಟೈಟಲ್ ಟೀಸರ್ ರಿಲೀಸ್ ಆಗಿದೆ. ರಾಮಾಯಣ ಫಸ್ಟ್ ಟೈಟಲ್ ಟೀಸರ್ ಕೊನೆಗೂ ರಿಲೀಸ್ ಆಗಿದೆ. ಟೀಸರ್‌ನಲ್ಲಿ ರಾಮ-ರಾವಣ ಆರ್ಭಟ ಶುರುವಾಗಿದೆ. ರಾಮಾಯಣ ಫಸ್ಟ್ ಟೈಟಲ್ ಟೀಸರ್ ಅನ್ನು ರಾಕಿಂಗ್ ಸ್ಟಾರ್ ಯಶ್ ತಮ್ಮ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಹತ್ತು ವರ್ಷಗಳ ಆಕಾಂಕ್ಷೆ.

ಸಾರ್ವಕಾಲಿಕ ಶ್ರೇಷ್ಠ ಮಹಾಕಾವ್ಯವನ್ನು ಜಗತ್ತಿಗೆ ತರುವ ನಿರಂತರ ದೃಢನಿಶ್ಚಯ. ರಾಮಾಯಣವನ್ನು ಅತ್ಯಂತ ಗೌರವದಿಂದ ಪ್ರಸ್ತುತಪಡಿಸಲು ವಿಶ್ವದ ಕೆಲವು ಅತ್ಯುತ್ತಮ ವ್ಯಕ್ತಿಗಳು ಒಟ್ಟಾಗಿ ಶ್ರಮಿಸಿದ್ದಾರೆ. ಅದರ ಫಲಿತಾಂಶ ಇದು ಎಂದು ಯಶ್ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಆರಂಭಕ್ಕೆ ಸ್ವಾಗತ.

ಟೈಟ್ ಶೆಡ್ಯೂಲ್ ಶೂಟಿಂಗ್

ರಾಮ-ರಾವಣನ ಅಮರ ಕಥೆಯನ್ನು ಆಚರಿಸೋಣ. ನಮ್ಮ ಸತ್ಯ. ನಮ್ಮ ಇತಿಹಾಸ ಎಂದು ಯಶ್ ಪೋಸ್ಟ್‌ನಲ್ಲಿ ಬರೆದುಕೊಂಡಿದ್ದಾರೆ. ಟಾಕ್ಸಿಕ್ ಹಾಗೂ ರಾಮಾಯಣ, ಎರಡೂ ಚಿತ್ರಗಳ ನಿರ್ಮಾಣ ಹಾಗೂ ನಟನೆಯಲ್ಲಿ ಯಶ್ ಬ್ಯುಸಿ ಇದ್ದಾರೆ. ಹೀಗಾಗಿ ಟೈಟ್ ಶೆಡ್ಯೂಲ್ ಶೂಟಿಂಗ್ ಮುಗಿಸಿ ಇದೀಗ ಅಲ್ಪ ಸಮಯದಲ್ಲಿ ಪ್ರವಾಸಕ್ಕೆಂದು ಯಶ್ ಹೋಗಿದ್ದಾರೆ. ರಾಮಾಯಣ ಸಿನಿಮಾದಲ್ಲಿ ರಾಮನ ಪಾತ್ರದಲ್ಲಿ ರಣಬೀರ್ ಕಪೂರ್, ಸೀತೆ ಪಾತ್ರದಲ್ಲಿ ಸಾಯಿಪಲ್ಲವಿ ಹಾಗೂ ರಾವಣನ ಪಾತ್ರದಲ್ಲಿ ಕೆಜಿಎಫ್ ಸ್ಟಾರ್ ಯಶ್ ಕಾಣಿಸಿಕೊಂಡಿದ್ದಾರೆ.



ಸಿನಿ ವಾಹಿನಿ

## 5 ದಿನಕ್ಕೆ 10 ಕೋಟಿ ಅಕ್ಷಯ್ ಕಾಲ್ ಶೀಟ್!

ವಿಷ್ಣುಮಂಚು ಅಭಿನಯದ ಕಣ್ಣಪ್ಪ ಸಿನಿಮಾ ಬಹುಭಾಷೆಯಲ್ಲಿ ರಿಲೀಸ್ ಆಗಿದೆ ಈ ಚಿತ್ರದಲ್ಲಿ ಹಲವು ಭಾಷೆಯ ವಿವಿಧ ಖ್ಯಾತ ಕಲಾವಿದರು ನಟಿಸಿದ್ದು ಚಿತ್ರದ ಹೈಲೈಟ್‌ನಲ್ಲೊಂದು.

ವಿಷ್ಣು ಮಂಚು ಕಣ್ಣಪ್ಪನಾಗಿ ಅಭಿನಯಿಸಿದರೆ ಅತಿಥಿ ಪಾತ್ರಗಳಲ್ಲಿ ಪ್ರಭಾಸ್, ಅಕ್ಷಯ್ ಕುಮಾರ್, ಮೋಹನ್ ಲಾಲ್ ಅಭಿನಯಿಸಿದ್ದಾರೆ. ವಿಶೇಷ ಮಾಡಿದ್ದ ಬೇರೆ ಭಾಷೆ ಕಲಾವಿದರು ಉಚಿತವಾಗಿಯೇ ಅಭಿನಯಿಸಿದ್ದಾರೆ ಎಂದು ಸುದ್ದಿಯಾಗಿತ್ತು. ಆದರೀಗ ಅಕ್ಷಯ್ ಕುಮಾರ್ ಶಿವನ ಪಾತ್ರಕ್ಕಾಗಿ 10 ಕೋಟಿ ರೂ. ಸಂಭಾವನೆ ಪಡೆದು ಅಭಿನಯಿಸಿದ್ದಾರೆ ಎಂಬ ಸುದ್ದಿ ಹರಿದಾಡುತ್ತಿದೆ. ಶಿವನ ಪಾತ್ರ ಮಾಡಿದ್ದ ಅಕ್ಷಯ್ ಕುಮಾರ್ 5 ದಿನದ ಕಾಲ್ ಶೀಟ್‌ಗಾಗಿ 10 ಕೋಟಿ ರೂ. ಸಂಭಾವನೆ ಪಡೆದಿದ್ದರು ಎನ್ನಲಾಗುತ್ತಿದೆ. ಆದರೆ ಪ್ರಭಾಸ್ ಹಾಗೂ ಮೋಹನ್ ಲಾಲ್ ಮೋಹನ್‌ಬಾಬು ಮೇಲಿನ ಸ್ನೇಹ, ವಿಶ್ವಾಸದಿಂದ ರೆಮನ್ಯುರೇಶನ್ ಪಡೆಯದೇ ಅಭಿನಯಿಸಿದ್ದಾರೆ.

ಬೇರೆ ಭಾಷೆ ಕಲಾವಿದರು ಉಚಿತ ಅಭಿನಯ

ಆದರೆ ಐದೇ ದಿನದ ಕಾಲ್‌ಶೀಟ್‌ಗೆ ಅಕ್ಷಯ್ 10 ಕೋಟಿ ಪಡೆದುಕೊಂಡು ಹೋಗಿರುವುದು ಟಾಲಿವುಡ್ ವಲಯದಲ್ಲಿ ಬಹಳ ಚರ್ಚೆಯಾಗುತ್ತಿದೆ. ಅಕ್ಷಯ್ ದುರಾಸೆಯಿಂದ ಹಣ ಪಡೆದುಕೊಂಡು ಹೋಗಿದ್ದಾರೆ.

## ಕಾಂಬೋ ಸಿನಿಮಾದ ಟೈಟಲ್ ರಿವೀಲ್!



ಅಲ್ಲು ಅರ್ಜುನ್, ಪ್ರಶಾಂತ್ ನೀಲ್ ಕೆಜಿಎಫ್ ಸರಣಿ ಸಿನಿಮಾಗಳ ನಿರ್ದೇಶಕ ಪ್ರಶಾಂತ್ ನೀಲ್ ಹಾಗೂ ಅಲ್ಲು ಅರ್ಜುನ್ ಸಿನಿಮಾ ಮಾಡುತ್ತಾರೆ ಎನ್ನಲಾದ ಸುದ್ದಿ ಇದೀಗ ಪಕ್ಕಾ ಆಗಿದೆ. ಅಲ್ಲು ಅರ್ಜುನ್ ಹಾಗೂ ನಿರ್ದೇಶಕ ಪ್ರಶಾಂತ್ ನೀಲ್ ಒಟ್ಟಿಗೆ ಸಿನಿಮಾ ಮಾಡುವ ಸುದ್ದಿ ಹರಿದಾಡ್ತಿತ್ತು. ಇದೀಗ ಆ ಸುದ್ದಿಗೆ ಪುಷ್ಟಿ ಎಂಬಂತೆ ನಿರ್ಮಾಪಕ ದಿಲ್‌ರಾಜು ಹೇಳಿಕೆ ಕೊಟ್ಟಿದ್ದಾರೆ. ತಮ್ಮುಡು ಸಿನಿಮಾದ ಪ್ರಮೋಷನ್ ವೇಳೆ ಈ ವಿಚಾರವನ್ನ ಬಹಿರಂಗಪಡಿಸಿದ್ದಾರೆ. ಕೆಜಿಎಫ್ ಸಿನಿಮಾಗಳ ಹಿಟ್‌ನ ನಂತರ ಪ್ರಶಾಂತ್ ನೀಲ್ ಟಾಲಿವುಡ್‌ನಲ್ಲಿ ಸಲಾರ್ ಸಿನಿಮಾ ಮಾಡಿದ್ದಾರೆ. ಇದಾದ ಬಳಿಕ ಟಾಲಿವುಡ್‌ನ ಯಂಗ್‌ಟೈಗರ್ ಜೂ.ಎನ್‌ಟಿಆರ್‌ಗೆ ಸಿನಿಮಾವನ್ನ ನಿರ್ದೇಶನ ಮಾಡುತ್ತಿದ್ದಾರೆ. ಬಳಿಕ ಪ್ರಭಾಸ್‌ಗೆ ಸಲಾರ್-2 ಸಿನಿಮಾ ಮಾಡುವ ಪ್ಲ್ಯಾನ್ ಮಾಡಿಕೊಂಡಿದ್ದಾರೆ. ಇದೆಲ್ಲ ಮುಗಿದ ನಂತರವಷ್ಟೇ ದಿಲ್‌ರಾಜು ಅವರ ನಿರ್ಮಾಣದಲ್ಲಿ ಪ್ರಶಾಂತ್ ನೀಲ್ ನಿರ್ದೇಶನ ಮಾಡಬೇಕಿದೆ.

ಈ ಕಾರ್ಯಕ್ರಮದಲ್ಲಿ ಮಾತನಾಡಿದ ದಿಲ್ ರಾಜು, ನಮ್ಮ ಬ್ಯಾನರ್ ನಲ್ಲಿ ಅಲ್ಲು ಅರ್ಜುನ್ ನಾಯಕನಾಗಿ ಮತ್ತು ಪ್ರಶಾಂತ್ ನೀಲ್ ನಿರ್ದೇಶಕರಾಗಿ ರಾವಣಂ ಚಿತ್ರ ತೆರೆಯ ಮೇಲೆ ಬರಲಿದೆ. ಈಗ ಇವರಿಬ್ಬರು ಬೇರೆ ಬೇರೆ ಚಿತ್ರಗಳಲ್ಲಿ ಬ್ಯುಸಿ ಇರುವ ಕಾರಣ ನಮ್ಮ ಸಿನಿಮಾ ಆರಂಭವಾಗಲು ಸಮಯ ತೆಗೆದುಕೊಳ್ಳುತ್ತದೆ ಎಂದಿದ್ದಾರೆ. ಅಲ್ಲು ಅರ್ಜುನ್ ಹಾಗೂ ಪ್ರಶಾಂತ್ ನೀಲ್ ಕಾಂಬಿನೇಷನ್‌ನ ಸಿನಿಮಾಗೆ ತೆಲುಗಿನ ಖ್ಯಾತ ನಿರ್ಮಾಪಕ ಬಂಡವಾಳ ಹೂಡಲಿದ್ದು, ಈ ಸಿನಿಮಾ ಸೆಟ್ಟೇರಬೇಕಂದ್ರೆ, ಹೆಚ್ಚು ಕಮ್ಮಿ ಅಂದ್ರೂ ಇನ್ನು ಎರಡು ವರ್ಷಗಳಾಗಬಹುದು ಎಂದಿದ್ದಾರೆ. ಇತ್ತ ಐಕಾನ್ ಸ್ಟಾರ್ ಕೂಡಾ ಅಟ್ಲಿ ಜೊತೆಗೆ ಸೂಪರ್ ಮ್ಯಾನ್ ಕಾನ್ಸೆಪ್ಟ್ ಸಿನಿಮಾದಲ್ಲಿ ಬ್ಯುಸಿಯಾಗಿದ್ದಾರೆ.

ಬೇರೆ ಬೇರೆ ಚಿತ್ರಗಳಲ್ಲಿ ಬ್ಯುಸಿ

## ರಂಗಿ ತರಂಗದಲ್ಲಿ ಹೀರೋ ಆಗಿ ರಕ್ಷಿತ್ ನಟಿಸಬೇಕಿತ್ತು..



ಕನ್ನಡ ಚಿತ್ರರಂಗದ ಕಲ್ಟ್ ಕ್ಲಾಸಿಕ್ ಥ್ರಿಲ್ಲರ್ ಸಿನಿಮಾ 'ರಂಗಿತರಂಗ'. ಈ ಸಿನಿಮಾ ಬಿಡುಗಡೆ ಆಗಿ 10 ವರ್ಷಗಳಾಯ್ತು. ಸಿನಿಮಾ ಅನ್ನು ಅನುಪ್ ಭಂಡಾರಿ ನಿರ್ದೇಶನ ಮಾಡಿದ್ದರು, ಅವರ ಸಹೋದರ ನಿರೂಪ್ ಭಂಡಾರಿ ನಾಯಕನಾಗಿ ನಟಿಸಿದ್ದರು. ಸಾಯಿಕುಮಾರ್ ಪ್ರಮುಖ ಪಾತ್ರವೊಂದರಲ್ಲಿ ನಟಿಸಿದ್ದರು. ಅಸಲಿಗೆ ಈ ಸಿನಿಮಾನಲ್ಲಿ ರಕ್ಷಿತ್ ಶೆಟ್ಟಿ ನಾಯಕನಾಗಿ ನಟಿಸಬೇಕಿತ್ತಂತೆ.

2015ರಲ್ಲಿ ಬಿಡುಗಡೆ ಕಂಡಿದ್ದ 'ರಂಗಿ ತರಂಗ' ಇಂದು (ಜುಲೈ 4) ರೀ-ರಿಲೀಸ್ ಆಗಿದೆ. ಈ ಚಿತ್ರವನ್ನು ಥಿಯೇಟರ್‌ನಲ್ಲಿ ಮಿಸ್ ಮಾಡಿಕೊಂಡವರು ಥಿಯೇಟರ್‌ನಲ್ಲಿಯೇ ನೋಡುವ ಅವಕಾವನ್ನು ಕಲ್ಪಿಸಲಾಗಿದೆ ಎಂಬುದು ವಿಶೇಷ. 'ರಂಗಿ ತರಂಗ' ಸಿನಿಮಾಗೆ ನಿರೂಪ್ ಭಂಡಾರಿ ಹೀರೋ ಆದರೆ, ಅವರ ಸಹೋದರ ಅನುಪ್ ಭಂಡಾರಿ ನಿರ್ದೇಶನ ಇತ್ತು. ಈ ಸಿನಿಮಾಗೆ ರಕ್ಷಿತ್ ಶೆಟ್ಟಿ ಹೀರೋ ಆಗಿ ನಟಿಸಬೇಕಿತ್ತು. ಈ ವಿಚಾರವನ್ನು ಅನುಪ್ ಹೇಳಿಕೊಂಡಿದ್ದಾರೆ. ಅನುಪ್ ಭಂಡಾರಿ ಅವರು ನಿರ್ದೇಶನದಲ್ಲಿ ಮೊದಲ ಅನುಭವ. ಈ ಸಿನಿಮಾಗೆ ಅವರು ನಿರ್ದೇಶನ ಮತ್ತು ಸಹೋದರ ಎಂದಾಗ ಅಂಜಿಕೆ ಆಯಿತು. ಫಸ್ಟ್ ಡೇ ಫಸ್ಟ್ ಶೋ ಯೂಟ್ಯೂಬ್ ಚಾನೆಲ್‌ಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿರುವ ಅನುಪ್, 'ಮೊದಲು ಈ ಸಿನಿಮಾಗೆ ನಿರೂಪ್ ಅವರೇ ಹೀರೋ ಆಗಿ ಆಯ್ಕೆ ಆದರು. ಆದರೆ, ನಾನು ನಿರ್ದೇಶನ ತಮ್ಮ ನಟನೆ ಎಂದಾಗ ಯಾರದರೂ ಸಿಗುತ್ತಾರಾ ಎನ್ನುವ ಪ್ರಶ್ನೆ ಮೂಡಿತು. ಆಗ ನಿರೂಪ್ ರಕ್ಷಿತ್ ಶೆಟ್ಟಿ ಬಗ್ಗೆ ಹೇಳಿದ' ಎಂದಿದ್ದಾರೆ. 'ಸಿಂಪಲ್ ಆಗಿ ಒಂದು ಲವ್ ಸ್ಟೋರಿ ಮಾಡಿದ್ದಾರೆ. ನಮ್ಮ ರೀತಿಯದ್ದೇ ಆಲೋಚನೆ ಅನಿಸುತ್ತದೆ ಎಂದು ರಕ್ಷಿತ್ ಬಗ್ಗೆ ನಿರೂಪ್ ಹೇಳಿದ. ಆಗ ನಾನು ಅವರನ್ನು ಸಂಪರ್ಕಿಸಿದೆ. ಆ ಸಂದರ್ಭದಲ್ಲಿ ಅವರು ಉಳಿದವರು ಕಂಡಂತೆ ಸಿನಿಮಾ ಮಾಡುತ್ತಿದ್ದರು.

## ಜೊತೆಯಾಗಿ ಸುತ್ತಾಡುತ್ತಿರುವ ಶ್ರೀಲೀಲಾ ಕಾರ್ತಿಕ್



ಬಾಲಿವುಡ್ ಹೀರೋ ಕಾರ್ತಿಕ್ ಆರ್ಯನ್ ಅವರು ಈಗ ಶ್ರೀಲೀಲಾ ಜೊತೆ ಸುತ್ತಾಡಲು ಆರಂಭಿಸಿದ್ದಾರೆ. ಫೋಟೋಗಳು, ವಿಡಿಯೋಗಳು ವೈರಲ್ ಆಗಿವೆ. ಆದರೆ ಅವರಿಬ್ಬರು ತಮ್ಮ ರಿಲೇಷನ್‌ಶಿಪ್ ಬಗ್ಗೆ ಮೌನ ಮುರಿದಿಲ್ಲ. ಅನುರಾಗ್ ಬಸು ನಿರ್ದೇಶನ ಮಾಡುತ್ತಿರುವ ಸಿನಿಮಾದಲ್ಲಿ ಅವರಿಬ್ಬರು ನಟಿಸುತ್ತಿದ್ದಾರೆ. ಸಿನಿಮಾದ ಆಚೆಗೂ ಅವರ ನಡುವೆ ನಂಟು ಬೆಳೆದಿದೆ.

ನಟಿ ಶ್ರೀಲೀಲಾ ಅವರು ಕನ್ನಡ ಮತ್ತು ತೆಲುಗು ಚಿತ್ರರಂಗದಲ್ಲಿ ಫೇಮಸ್ ಆಗಿದ್ದಾರೆ. ಅಲ್ಲದೇ ಅವರಿಗೆ ಬಾಲಿವುಡ್ ಕೂಡ ಕೈ ಬೀಸಿ ಕರೆದಿದೆ. ಈಗಾಗಲೇ ಅವರು ಕಾರ್ತಿಕ್ ಆರ್ಯನ್ ಜೊತೆಗಿನ ಹೊಸ ಸಿನಿಮಾಗೆ ಶೂಟಿಂಗ್ ಮಾಡುತ್ತಿದ್ದಾರೆ. ಅಚ್ಚರಿ ಏನೆಂದರೆ, ಶೂಟಿಂಗ್ ಹೊರತಾಗಿಯೂ ಕಾರ್ತಿಕ್ ಆರ್ಯನ್ ಮತ್ತು ಶ್ರೀಲೀಲಾ ಅವರು ಭೇಟಿ ಮಾಡುತ್ತಿದ್ದಾರೆ. ಇತ್ತೀಚೆಗೆ ಅವರಿಬ್ಬರು ಒಟ್ಟಿಗೆ ಡೇಟಿಂಗ್‌ಗೆ ತೆರಳಿರುವ ವಿಷಯ ಬಹಿರಂಗ ಆಗಿದೆ. ಇಬ್ಬರೂ ಒಂದೇ ರೆಸ್ಟೋರೆಂಟ್‌ನಲ್ಲಿ ಕಾಣಿಸಿಕೊಂಡಿದ್ದಾರೆ. ಇದರಿಂದಾಗಿ ಅಭಿಮಾನಿಗಳಿಗೆ ಇದ್ದ ಅನುಮಾನಕ್ಕೆ ಇನ್ನಷ್ಟು ಬಲ ಬಂದಂತೆ ಆಗಿದೆ. ಕಾರ್ತಿಕ್ ಆರ್ಯನ್ ಜೊತೆ ಯಾವುದೇ ನಟಿ ಸಿನಿಮಾ ಮಾಡಿದರೂ ಕೂಡ ಗಾಸಿಪ್ ಹುಟ್ಟಿಕೊಳ್ಳುತ್ತದೆ. ಈ ಮೊದಲು ಸಾರಾ ಅಲಿ ಖಾನ್ ಜೊತೆ ಅವರ ಹೆಸರು ತಳುಕು ಹಾಕಿಕೊಂಡಿತ್ತು. ಈಗ ಶ್ರೀಲೀಲಾ ಹೆಸರು ಕೇಳಿಬರುತ್ತಿದೆ. ಕಾರ್ತಿಕ್ ಆರ್ಯನ್ ಮತ್ತು ಶ್ರೀಲೀಲಾ ಅವರು ಸಿನಿಮಾ ಹೊರತಾಗಿಯೂ ಆತ್ಮೀಯತೆ ಬೆಳೆಸಿಕೊಳ್ಳುತ್ತಿದ್ದಾರೆ ಎಂಬುದಕ್ಕೆ ಫೋಟೋ ಮತ್ತು ವಿಡಿಯೋ ಸಾಕ್ಷಿ ಆಗಿದೆ.

ಭಾರತದ ಮಹಿಳಾ ಕ್ರಿಕೆಟ್ ತಂಡ ಇಂಗ್ಲೆಂಡ್ ವಿರುದ್ಧದ ಟಿ20 ಸರಣಿಯಲ್ಲಿ 2-0 ಮುನ್ನಡೆಯಲ್ಲಿದೆ. ಮೂರನೇ ಪಂದ್ಯ ಗೆದ್ದರೆ ಭಾರತ ಇತಿಹಾಸ ನಿರ್ಮಿಸಲಿದೆ. ಮೊದಲ ಎರಡು ಪಂದ್ಯಗಳಲ್ಲಿ ಸ್ಮೃತಿ ಮಂಧಾನ, ಹರ್ಲೀನ್ ಡಿಯೋಲ್, ಅಮನ್‌ಜೋತ್ ಕೌರ್ ಮತ್ತು ಜೆಮಿಮಾ ರೊಡ್ರಿಗಸ್ ಅವರ ಅದ್ಭುತ ಪ್ರದರ್ಶನದಿಂದ ಭಾರತ ಗೆದ್ದಿದೆ. ಇಂಗ್ಲೆಂಡ್ ತನ್ನ ಅಗ್ರ ಕ್ರಮಾಂಕದ ಬ್ಯಾಟಿಂಗ್ ಸಮಸ್ಯೆಯನ್ನು ನಿವಾರಿಸಬೇಕಿದೆ. ಭಾರತದ ಮಹಿಳಾ ಹಾಗೂ ಪುರುಷರ ತಂಡಗಳು ಪ್ರಸ್ತುತ ಇಂಗ್ಲೆಂಡ್ ಪ್ರವಾಸದಲ್ಲಿವೆ. ಒಂದೆಡೆ ಪುರುಷರ ತಂಡ ಇಂಗ್ಲೆಂಡ್ ವಿರುದ್ಧ ಐದು ಪಂದ್ಯಗಳ ಟೆಸ್ಟ್ ಸರಣಿಯನ್ನು ಆಡುತ್ತಿದ್ದರೆ, ಮತ್ತೊಂದೆಡೆ ಮಹಿಳಾ ತಂಡವು ಆತಿಥೇಯ ಮಹಿಳಾ ತಂಡದ ವಿರುದ್ಧ ಟಿ20 ಸರಣಿಯನ್ನು ಆಡುತ್ತಿದೆ. ಭಾರತೀಯ ಮಹಿಳಾ ತಂಡದ ಬಗ್ಗೆ ಹೇಳುವುದಾದರೆ, ಉಭಯ ತಂಡಗಳ ನಡುವೆ ಇಲ್ಲಿಯವರೆಗೆ ನಡೆದಿರುವ ಎರಡಕ್ಕೆ ಎರಡೂ ಟಿ20 ಪಂದ್ಯಗಳನ್ನು ಭಾರತ ತಂಡ ಗೆದ್ದುಕೊಂಡಿದೆ ಈಗ ಈ ಎರಡೂ ತಂಡಗಳ ನಡುವಿನ ಮೂರನೇ ಟಿ20 ಪಂದ್ಯ ಜುಲೈ 4 ರಂದು ಲಂಡನ್‌ನ ಕೆನ್ನಿಂಗ್ಟನ್ ಓವಲ್‌ನಲ್ಲಿ ನಡೆಯಲಿದೆ.



ಎರಡಕ್ಕೆ ಎರಡೂ ಟಿ20 ಗೆದ್ದ ಇಂಡಿಯಾ

## ವಿಶೇಷ ಸಾಧನೆಯತ್ತ ಟೀಂ ಇಂಡಿಯಾ

ಈ ಪಂದ್ಯದಲ್ಲಿ, ಟೀಂ ಇಂಡಿಯಾ ವಿಶೇಷ ಸಾಧನೆಯತ್ತ ಗಮನ ಹರಿಸಲಿದೆ. ಟೀಂ ಇಂಡಿಯಾ ಮೂರನೇ ಟಿ20 ಗೆದ್ದರೆ, ಅದು ಮೊದಲ ಬಾರಿಗೆ ಇಂಗ್ಲೆಂಡ್ ವಿರುದ್ಧ ಟಿ20 ಸರಣಿಯನ್ನು ಗೆದ ದಾಖಲೆ ಬರೆಯಲಿದೆ.

**ಇತಿಹಾಸ ಸೃಷ್ಟಿಸುವತ್ತಾ ಗಮನ:** ಇಲ್ಲಿಯವರೆಗೆ, ಟೀಂ ಇಂಡಿಯಾ ಇಂಗ್ಲೆಂಡ್ ವಿರುದ್ಧ ಒಮ್ಮೆಯೂ ಟಿ20 ಸರಣಿಯನ್ನು ಗೆದ್ದಿಲ್ಲ. ಈ ಎರಡೂ ತಂಡಗಳ ನಡುವಿನ ಏಕೈಕ ಪಂದ್ಯ 2006 ರಲ್ಲಿ ಡರ್ಬಿಯಲ್ಲಿ ನಡೆದಿತ್ತು. ಆ ಪಂದ್ಯದಲ್ಲಿ ಇಂಗ್ಲೆಂಡ್ ಗೆಲುವು ಸಾಧಿಸಿತ್ತು. ಆ ಬಳಿಕ ಭಾರತದಲ್ಲಿ ನಡೆದಿದ್ದ ಸರಣಿ ಹಾಗೂ ಇಂಗ್ಲೆಂಡ್‌ನಲ್ಲಿ ನಡೆದಿದ್ದ ಟಿ20 ಸರಣಿಯಲ್ಲಿ ಭಾರತ ತಂಡ ಸೋಲನ್ನು ಅನುಭವಿಸಿದೆ. ಇದೀಗ ಈ ಸರಣಿಯನ್ನು ಗೆದ್ದು ಇತಿಹಾಸ ಸೃಷ್ಟಿಸುವ ತವಕದಲ್ಲಿ ಟೀಂ ಇಂಡಿಯಾ ಇದೆ. ಈ ಸರಣಿಯಲ್ಲಿ ಟೀಂ ಇಂಡಿಯಾದ ಎಲ್ಲಾ ಆಟಗಾರ್ತಿಯರು ಉತ್ತಮ ಫಾರ್ಮ್‌ನಲ್ಲಿರುವುದು ಒಳ್ಳೆಯ ವಿಷಯ. ಮೊದಲ ಎರಡು ಟಿ20ಗಳಲ್ಲಿ, ಟೀಂ ಇಂಡಿಯಾ ಮಾರಕ ಬ್ಯಾಟಿಂಗ್ ಮತ್ತು ಆಕ್ರಮಣಕಾರಿ ಬೌಲಿಂಗ್‌ನಿಂದಾಗಿ ಇಂಗ್ಲೆಂಡ್ ತಂಡವನ್ನು ಸೋಲಿಸಿದೆ.

**ಸತತ 2 ಪಂದ್ಯ ಗೆದ್ದಿರುವ ಭಾರತ:** ಮೊದಲ ಪಂದ್ಯದ ಬಗ್ಗೆ ಹೇಳುವುದಾದರೆ, ಭಾರತ ತಂಡದ ಆರಂಭಿಕ ಆಟಗಾರ್ತಿ ಸ್ಮೃತಿ ಮಂಧಾನ ಅವರ 112 ರನ್‌ಗಳ ಇನ್ನಿಂಗ್ಸ್?ನ ಆಧಾರದ ಮೇಲೆ ಮೊದಲು ಬ್ಯಾಟಿಂಗ್ ಮಾಡಿದ ಭಾರತ ತಂಡ 20 ಓವರ್‌ಗಳಲ್ಲಿ 5 ವಿಕೆಟ್‌ಗಳ ನಷ್ಟಕ್ಕೆ 210 ರನ್ ಗಳಿಸಿತು. ಈ ಪಂದ್ಯದಲ್ಲಿ ಸ್ಮೃತಿ ಮಂಧಾನ ಹೊರತುಪಡಿಸಿ, ಹರ್ಲೀನ್ ಡಿಯೋಲ್ 43 ರನ್‌ಗಳ ಇನ್ನಿಂಗ್ಸ್ ಆಡಿದರು. ಇದಕ್ಕೆ ಉತ್ತರವಾಗಿ, ಇಂಗ್ಲೆಂಡ್ ತಂಡ 113 ರನ್‌ಗಳಿಗೆ ಆಲೌಟ್ ಆಯಿತು. ನಾಯಕಿ ನ್ಯಾಟ್ ಸಿವರ್ ಬ್ರಂಟ್ 66 ರನ್ ಗಳಿಸಿದರಾದರೂ ತಮ್ಮ ತಂಡವನ್ನು ಗೆಲುವಿನತ್ತ ಕೊಂಡೊಯ್ಯುವಲ್ಲಿ ವಿಫಲರಾದರು. ಶ್ರೀ ಚರಣಿ ಭಾರತ ಪರ 4 ವಿಕೆಟ್ ಪಡೆದರು. ಇದರ ನಂತರ ನಡೆದ ಎರಡನೇ ಟಿ20ಪಂದ್ಯದಲ್ಲಿವನ್ನು ಸಹ ಟೀಂ ಇಂಡಿಯಾ 24 ರನ್‌ಗಳಿಂದ ಗೆದ್ದುಕೊಂಡಿತ್ತು. ಈ ಪಂದ್ಯದಲ್ಲೂ ಮೊದಲು ಬ್ಯಾಟಿಂಗ್ ಮಾಡಿದ ಭಾರತ 181 ರನ್ ಕಲೆಹಾಕಿತು. ತಂಡದ ಪರ ಅಮನ್‌ಜೋತ್ ಕೌರ್ ಅಜೇಯ 63 ರನ್ ಬಾರಿಸಿದರೆ, ಜೆಮಿಮಾ ರೊಡ್ರಿಗಸ್ ಕೂಡ 63 ರನ್‌ಗಳ ಕಾಣಿಕೆ ನೀಡಿದರು. ಇದಕ್ಕೆ ಉತ್ತರವಾಗಿ ಆತಿಥೇಯ ಇಂಗ್ಲೆಂಡ್ ಕೇವಲ 157 ರನ್‌ಗಳನ್ನು ಮಾತ್ರ ಗಳಿಸಲು ಸಾಧ್ಯವಾಯಿತು.

## ತಿಂಗಳಿಗೆ 4 ಲಕ್ಷ ರೂ. ತುಂಬಾ ಕಡಿಮೆ

ಹೈಕೋರ್ಟ್ ಭಾರತೀಯ ವೇಗಿಗೆ ಜೀವನಾಂಶವನ್ನು ಪಾವತಿಸಲು ಆದೇಶಿಸಿದೆ. ಇಬ್ಬರ ನಡುವಿನ ಪ್ರಕರಣವನ್ನು ಆಲಿಸಿದ ನಂತರ ಕೊಲ್ಕತ್ತಾ ಹೈಕೋರ್ಟ್, ಮೊಹಮ್ಮದ್ ಶಮಿಗೆ ಪ್ರತಿ ತಿಂಗಳು ಪತ್ನಿ ಮತ್ತು ಮಗಳಿಗೆ 4 ಲಕ್ಷ ರೂ.ಗಳನ್ನು ಜೀವನಾಂಶವಾಗಿ (ನಿರ್ವಹಣೆ) ಪಾವತಿಸಬೇಕೆಂದು ಎಂದು ಆದೇಶಿಸಿದೆ. ಹೈಕೋರ್ಟ್ ತೀರ್ಪಿನ ಬಳಿಕ ಮಾಧ್ಯಮದೊಂದಿಗೆ ಮಾತನಾಡಿದ ಹಸಿನ್ ಜಹಾನ್, ಇದು ತನ್ನ ಗೆಲುವು ಸಂತಸ ವ್ಯಕ್ತಪಡಿಸಿದ್ದಾರೆ. ಇದಾಗ್ಯೂ, ಜೀವನಾಂಶ ಮೊತ್ತ ತುಂಬಾ ಕಡಿಮೆಯಾಗಿದೆ ಎಂದು ಅಸಮಾಧಾನವನ್ನು ಸಹ ಹೊರಹಾಕಿದ್ದಾರೆ.


ಟೀಮ್ ಇಂಡಿಯಾ ಕ್ರಿಕೆಟಿಗನ ವಿರುದ್ಧ ಮ್ಯಾಚ್ ಫಿಕ್ಸಿಂಗ್ ಆರೋಪ ಹೊರಿಸಿದ್ದ ಹಸಿನ್ ಜಹಾನ್, ಶಮಿಗೆ ಇತರೆ ಮಹಿಳೆಯರೊಂದಿಗೆ ಅಕ್ರಮ ಸಂಬಂಧ ಇದೆ ಬಹಿರಂಗ ಹೇಳಿಕೆ ನೀಡಿದ್ದರು. ಇದಾದ ಬಳಿಕ ನ್ಯಾಯಾಲಯದ ಮೆಟ್ಟಿಲೇರಿದ್ದ ಹಸಿನ್ ಜಹಾನ್, ಮೊಹಮ್ಮದ್ ಶಮಿಯಿಂದ ತಿಂಗಳಿಗೆ 10 ಲಕ್ಷ ರೂ. ಜೀವನಾಂಶದ ಬೇಡಿಕೆಯಿಟ್ಟಿದ್ದರು. ಇದೀಗ ಈ ಪ್ರಕರಣದ ತೀರ್ಪು ಬಂದಿದ್ದು, ಪತ್ನಿ ಮತ್ತು ಮಗಳಿಗೆ ತಿಂಗಳಿಗೆ 4 ಲಕ್ಷ ರೂ. ಜೀವನಾಂಶ ನೀಡಬೇಕೆಂದು ಮೊಹಮ್ಮದ್ ಶಮಿಗೆ ಕೊಲ್ಕತ್ತಾ ಹೈಕೋರ್ಟ್ ಸೂಚಿಸಿದೆ.

**ಹಸಿನ್ ಜಹಾನ್ ತಕರಾರು:** ಈ ಪ್ರಕರಣದಲ್ಲಿ, ಕೊಲ್ಕತ್ತಾ ಹೈಕೋರ್ಟ್ ತಿಂಗಳಿಗೆ 4 ಲಕ್ಷ ರೂ. ಭತ್ಯೆ ನೀಡುವಂತೆ ಮೊಹಮ್ಮದ್ ಶಮಿಗೆ ಆದೇಶಿಸಿದೆ. ಈ ಭತ್ಯೆಯಲ್ಲಿ ಮಗಳಿಗೆ 2.5 ಲಕ್ಷ ರೂ. ಮತ್ತು ಹಸೀನ್ ಜಹಾನ್‌ಗೆ 1.5 ಲಕ್ಷ ರೂ. ನಿಗದಿಪಡಿಸಲಾಗಿದೆ. ಆದರೆ ಹಸೀನ್ ಜಹಾನ್ ಈ ಮೊತ್ತವನ್ನು ತುಂಬಾ ಕಡಿಮೆ ಎಂದು ಅಸಮಾಧಾನ ಹೊರಹಾಕಿದ್ದಾರೆ.

ಕೋರ್ಟ್ 4 ಲಕ್ಷ ರೂ. ನಿಗದಿಪಡಿಸಿರುವುದು ಕಡಿಮೆ. ಏಕೆಂದರೆ ಎಲ್ಲೆಡೆ ಹಣದುಬ್ಬರವಿದೆ. ಜೀವನಾಂಶದ ಮೊತ್ತವನ್ನು ಗಂಡನ ಆದಾಯ ಮತ್ತು ಸಾಮಾಜಿಕ ಸ್ಥಾನಮಾನದ ಆಧಾರದ ಮೇಲೆ ನಿರ್ಧರಿಸಲಾಗುತ್ತದೆ. ಶಮಿ ಅವರ ಐಷಾರಾಮಿ ಜೀವನಶೈಲಿಯನ್ನು ಪರಿಗಣಿಸಿದರೆ, ತಿಂಗಳಿಗೆ 4 ಲಕ್ಷ ರೂ. ಎಂಬುದು ತುಂಬಾ ಕಡಿಮೆ. ನಾವು 10 ಲಕ್ಷ ರೂ.ಗಳನ್ನು ಕೇಳಿದ್ದೆವು. ಅದು ಕೂಡ 7 ವರ್ಷ 4 ತಿಂಗಳ ಹಿಂದೆ. ಈಗ ಹಣದುಬ್ಬರವೂ ಹೆಚ್ಚಾಗಿದೆ.

ಹೀಗಾಗಿ ನಮಗೆ ಸಿಕ್ಕಿರುವ ಜೀವನಾಂಶವು ತುಂಬಾ ಕಡಿಮೆಯಾಗಿದೆ ಎಂದು ಹಸಿನ್ ಜಹಾನ್ ಹೇಳಿದ್ದಾರೆ.

ಮೊಹಮ್ಮದ್ ಶಮಿ ಪತ್ನಿಯ ತಕರಾರು






## ಒಂದು ವಾರದ ವಿಶ್ರಾಂತಿಯ ನಂತರ ವಿಶ್ರಾಂತಿ

ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡುತ್ತಿರುವ ಟೀಮ್ ಇಂಡಿಯಾ ಪರ ಯಶಸ್ವಿ ಜೈಸ್ವಾಲ್ 87 ರನ್ ಬಾರಿಸಿ ಮಿಂಚಿದ್ದಾರೆ. ಹಾಗೆಯೇ ನಾಯಕ ಶುಭ್‌ಮನ್ ಗಿಲ್ (114) ಅಜೇಯ ಶತಕ ಸಿಡಿಸಿದ್ದಾರೆ. ಈ ಮೂಲಕ ಭಾರತ ತಂಡವು ಮೊದಲ ದಿನದಾಟದ ಮುಕ್ತಾಯದ ವೇಳೆಗೆ 4 ವಿಕೆಟ್ ಕಳೆದುಕೊಂಡು 310 ರನ್‌ಗಳಿಸಿದೆ. ಇಂಗ್ಲೆಂಡ್ ವಿರುದ್ಧದ ದ್ವಿತೀಯ ಟೆಸ್ಟ್ ಪಂದ್ಯಕ್ಕೆ ಜಸ್‌ಪ್ರೀತ್ ಬುಮ್ರಾ ಅವರನ್ನು ಆಯ್ಕೆ ಮಾಡದಿರುವ ಬಗ್ಗೆ ಟೀಮ್ ಇಂಡಿಯಾದ ಮಾಜಿ ಕೋಚ್ ರವಿ ಶಾಸ್ತ್ರಿ ಆಕ್ರೋಶ ಹೊರಹಾಕಿದ್ದಾರೆ.

ಬರ್ಮಿಂಗ್‌ಹ್ಯಾಮ್‌ನಲ್ಲಿ ನಡೆಯುತ್ತಿರುವ ಭಾರತ ಮತ್ತು ಇಂಗ್ಲೆಂಡ್ ನಡುವಣ ದ್ವಿತೀಯ ಟೆಸ್ಟ್ ಪಂದ್ಯದ ವೇಳೆ ಪ್ಲೇಯಿಂಗ್ ಇಲೆವೆನ್ ಅನ್ನು ವಿಶ್ಲೇಷಿಸಿದ ರವಿ ಶಾಸ್ತ್ರಿ, ಒಬ್ಬ ಆಟಗಾರನಿಗೆ ಒಂದು ವಾರ ವಿಶ್ರಾಂತಿ ಸಿಕ್ಕ ಬಳಿಕ ಕೂಡ, ಆತನನ್ನು ವಿಶ್ರಾಂತಿಯ ಕಾರಣ ತಂಡದಿಂದ ಹೊರಗಿಡುವುದರಲ್ಲಿ ಅರ್ಥವೇ ಇಲ್ಲ ಎಂದಿದ್ದಾರೆ. ಹೆಡಿಂಗ್ಲೆಯಲ್ಲಿ ನಡೆದಿದ್ದ ಮೊದಲ ಟೆಸ್ಟ್ ಪಂದ್ಯದಲ್ಲಿ ಟೀಮ್ ಇಂಡಿಯಾ ಪರ ಜಸ್‌ಪ್ರೀತ್ ಬುಮ್ರಾ ಕಣಕ್ಕಿಳಿದಿದ್ದರು. ಈ ಪಂದ್ಯವು ಜೂನ್ 24 ರಂದು ಕೊನೆಗೊಂಡಿತ್ತು.

ಭಾರತ ತನ್ನ ದ್ವಿತೀಯ ಟೆಸ್ಟ್ ಪಂದ್ಯ ಆಡುತ್ತಿರುವುದು ಜುಲೈ 2 ರಂದು. ಅಂದರೆ ಎರಡು ಟೆಸ್ಟ್ ಪಂದ್ಯಗಳ ನಡುವೆ ಒಂದು ವಾರದ ಅಂತರವಿದೆ. ಅಂದರೆ ಮೊದಲ ಟೆಸ್ಟ್ ಪಂದ್ಯವಾಡಿದ ಜಸ್‌ಪ್ರೀತ್ ಬುಮ್ರಾಗೆ ಒಂದು ವಾರದ ವಿಶ್ರಾಂತಿ ಸಿಕ್ಕಿದೆ.

ವಿಶ್ರಾಂತಿಯ ಕಾರಣ ದ್ವಿತೀಯ ಟೆಸ್ಟ್ ಪಂದ್ಯದಿಂದ ಹೊರಗುಳಿದಿರುವುದು ಸರಿಯಲ್ಲ. 7 ದಿನಗಳ ಬ್ರೇಕ್ ಬಳಿಕ ತಂಡದಲ್ಲಿರುವ ವಿಶ್ವದ ಅತ್ಯುತ್ತಮ ಬೌಲರ್‌ಗೆ ವಿಶ್ರಾಂತಿ ನೀಡಿದ್ದಾರೆ ಎಂದರೆ ಅದನ್ನು ನನಗೆ ನಂಬೋಕೆ ಆಗುತ್ತಿಲ್ಲ. ಇಂತಹ ನಿರ್ಧಾರಗಳನ್ನು ಖಂಡಿತವಾಗಿಯೂ ನಾನಂತು ಒಪ್ಪಲ್ಲ ಎಂದು ರವಿ ಶಾಸ್ತ್ರಿ ಹೇಳಿದ್ದಾರೆ.



## ಕೇವಲ 10 ರನ್ ದಾಖಲೆ ಜಸ್ಟ್ ಮಿಸ್

ಇಂಗ್ಲೆಂಡ್ ವಿರುದ್ಧದ ದ್ವಿತೀಯ ಟೆಸ್ಟ್ ಪಂದ್ಯದಲ್ಲಿ ಆರಂಭಿಕನಾಗಿ ಕಣಕ್ಕಿಳಿದ ಯಶಸ್ವಿ ಜೈಸ್ವಾಲ್ 107 ಎಸೆತಗಳನ್ನು ಎದುರಿಸಿ 13 ಫೋರ್‌ಗಳೊಂದಿಗೆ 87 ರನ್ ಕಲೆಹಾಕಿದ್ದರು. ಆದರೆ ಶತಕದಂಚಿನಲ್ಲಿ ಎಡವಿದ ಯುವ ದಾಂಡಿಗ ರಾಹುಲ್ ದ್ರಾವಿಡ್ ಅವರ ಹೆಸರಿನಲ್ಲಿರುವ ವಿಶೇಷ ದಾಖಲೆಯನ್ನು ಮುರಿಯುವ ಅವಕಾಶವನ್ನು ಕೈ ತಪ್ಪಿಸಿಕೊಂಡರು. ಬರ್ಮಿಂಗ್‌ಹ್ಯಾಮ್‌ನ ಎಡ್ಜ್‌ಬಾಸ್ಟನ್ ಸ್ಟೇಡಿಯಂನಲ್ಲಿ ನಡೆಯುತ್ತಿರುವ ಇಂಗ್ಲೆಂಡ್ ವಿರುದ್ಧದ 2ನೇ ಟೆಸ್ಟ್ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ಯಶಸ್ವಿ ಜೈಸ್ವಾಲ್ ಅಬ್ಬರಿಸಿದ್ದಾರೆ. ಹೆಡಿಂಗ್ಲೆ ಟೆಸ್ಟ್‌ನಲ್ಲಿ ಶತಕ ಸಿಡಿಸಿ ಮಿಂಚಿದ್ದ ಜೈಸ್ವಾಲ್ ಎಡ್ಜ್‌ಬಾಸ್ಟನ್‌ನಲ್ಲಿ 87 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಈ ಮೂಲಕ ಕೇವಲ 13 ರನ್‌ಗಳಿಂದ ಮತ್ತೊಂದು ಸೆಂಚುರಿ ಸಿಡಿಸುವ ಅವಕಾಶವನ್ನು ತಪ್ಪಿಸಿಕೊಂಡರು. ಅಷ್ಟೇ ಅಲ್ಲದೆ ಟೀಮ್ ಇಂಡಿಯಾ ಪರ ಟೆಸ್ಟ್ ಕ್ರಿಕೆಟ್‌ನಲ್ಲಿ ಅತೀ ವೇಗವಾಗಿ 2000 ರನ್ ಕಲೆಹಾಕಿದ ದಾಖಲೆ ಮುರಿಯುವ ಅವಕಾಶವನ್ನು ಸಹ ಕೈ ಚೆಲ್ಲಿಕೊಂಡರು. ಅಂದರೆ ಇಂಗ್ಲೆಂಡ್ ವಿರುದ್ಧದ ಮೊದಲ ಇನಿಂಗ್ಸ್‌ನಲ್ಲಿ 97 ರನ್‌ಗಳಿಸಿದ್ದರೆ, ಭಾರತದ ಪರ ಅತೀ ಕಡಿಮೆ ಇನಿಂಗ್ಸ್‌ಗಳಲ್ಲಿ 2000 ರನ್ ಪೂರೈಸಿದ ಬ್ಯಾಟರ್ ಎಂಬ ದಾಖಲೆ ಯಶಸ್ವಿ ಪಾಲಾಗುತ್ತಿತ್ತು. ಸದ್ಯ ಈ ದಾಖಲೆ ಟೆಸ್ಟ್ ಸ್ಪೆಷಲಿಸ್ಟ್ ರಾಹುಲ್ ದ್ರಾವಿಡ್ ಹೆಸರಿನಲ್ಲಿದೆ. ಟೀಮ್ ಇಂಡಿಯಾ ಪರ ಆಡಿದ ಮೊದಲ 40 ಇನಿಂಗ್ಸ್‌ಗಳ ಮೂಲಕ ದ್ರಾವಿಡ್ 2000 ರನ್ ಕಲೆಹಾಕಿದ್ದರು. ಈ ಮೂಲಕ ಭಾರತದ ಪರ ಟೆಸ್ಟ್‌ನಲ್ಲಿ ಅತೀ ವೇಗವಾಗಿ 2 ಸಾವಿರ ರನ್ ಕಲೆಹಾಕಿದ ಬ್ಯಾಟರ್ ಎಂಬ ದಾಖಲೆ ನಿರ್ಮಿಸಿದ್ದಾರೆ. ಈ ದಾಖಲೆಯನ್ನು ಮುರಿಯಲು ಯಶಸ್ವಿ ಜೈಸ್ವಾಲ್ ಇಂಗ್ಲೆಂಡ್ ವಿರುದ್ಧದ 2ನೇ ಟೆಸ್ಟ್ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ 97 ರನ್ ಕಲೆಹಾಕಬೇಕಿತ್ತು. ಆದರೆ 87 ರನ್‌ಗಳಿಸಿ ಔಟಾಗುವ ಮೂಲಕ ಜೈಸ್ವಾಲ್ ಅಗ್ರಸ್ಥಾನಕ್ಕೇರುವ ಅವಕಾಶವನ್ನು ತಪ್ಪಿಸಿಕೊಂಡಿದ್ದಾರೆ. ಇದಾಗ್ಯೂ ಮುಂದಿನ ಇನಿಂಗ್ಸ್‌ನ ಮೂಲಕ ರಾಹುಲ್ ದ್ರಾವಿಡ್ ಅವರ ದಾಖಲೆಯನ್ನು ಸರಿಗಟ್ಟಬಹುದು.

ಬರೋಬ್ಬರಿ 239 ರನ್



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966